ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 41 ಸಂಚಿಕೆ- 41 | PAGE-8 ಪುಟ-8 | ಬುಧವಾರ 19.03.2025 | RS.2/- ಬೆಲೆ 2/-

## ಅನಧಿಕೃತ ಬಡಾವಣೆಗಳಿಂದ ಜನ ಸಾಮಾನ್ಯರಿಗೆ ರಕ್ಷಣೆ ನೀಡಿ; ಡಾ ಚಂದ್ರಶೇಖರ ಪಾಟೀಲ

ಮಲ್ಲಮ್ಮನುಡಿ ವಾರ್ತೆ

ಹುಮನಾಬಾದ್:ಮಾ.18: ನಮ್ಮ ನಗರವು ರಾಷ್ಟ್ರೀಯ ಹೆದ್ದಾರಿ ಮೇಲಿದೆ. ನಗರದ ಸರ್ವೆ ಸಂಖ್ಯೆ 375ಇದು ಭೂ ಪರಿವರ್ತನೆ ಆಗಿದೆ. ಆದರೆ ನಿಯಮಬಾಹಿರವಾಗಿ ಲೇಔಟ್ ಮಾಡುವುದರ ಮೂಲಕ ನಿವೇಶನ ಖರಿದಿ ಮಾಡಿದ ಅಮಾಯಕರು ಪರದಾಡುತ್ತಿದ್ದಾರೆ. ತಕ್ಷಣ ಲೇಔಟ್ ಮಾಲಿಕರ ಹಾಗೂ ಅಧಿಕಾರಿಗಳ ವಿರುದ್ಧ ಕ್ರಮ ಯಾವಾಗ ಜರಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ರವರು ಶೂನ್ಯ ವೇಳೆಯಲ್ಲಿ



ಮಂಗಳವಾರ ವಿಧಾನ ಪರಿಷತ್ ಸಭಾಪತಿಗಳ ಮೂಲಕ ಪೌರಾಡಳಿತ ಸಚಿವರಾದ ರಹೀಮ್ ಖಾನ್ ರವರ ಗಮನ ಸೆಳೆದಿದ್ದಾರೆ.

ಈ ಬಾಡಾವಣೆಯಲ್ಲಿ. ರಸ್ತೆ, ಚರಂಡಿ.ಯುಜಿಡಿ ಕಾಮಗಾರಿ, ಸೇರಿದಂತೆ ಇತರೆ ಮೂಲಭೂತ ಸೌಕರ್ಯಗಳು ಇಲ್ಲದೆ. ಅನಧಿಕೃತ ವಾಗಿ ಲೇಔಟ್ 100 ನಿವೇಶನಗಳು ಮಂಜೂರು ಮಾಡಿದ್ದಾರೆ. ಇದರಿಂದ ಅಲ್ಲಿ ನಿವೇಶನ ಪಡೆದ ಜನ ಸಾಮಾನ್ಯರು ಪರದಾಡುವಂತಾಗಿದೆ. ಹಾಗಾಗಿ ಲೇಔಟ್ ನಿರ್ಮಿಸಿದ ಅಧಿಕಾರಿಗಳ ಮೇಲೆ ಕ್ರಮ ಜರುಗಬೇಕು ಹಾಗೂ ತಪಿತಸ್ತ ಲೇಔಟ್ ಮಾಲಿಕನ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಬೇಕು. ನಿಯಮದ ಪ್ರಕಾರ ಪುನ ಲೇಔಟ್ ನಿರ್ಮಾಣ ಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಎಂಎಲ್.ಸಿ ಡಾ. ಚಂದ್ರಶೇಖರ ಪಾಟೀಲ ಸಭಾಧ್ಯಕ್ಷರಲ್ಲಿ ಮನವಿ ಮಾಡಿದ್ದಾರೆ

## ಎಲ್ಲಾ ರೈತರಿಗೂ ಶೂನ್ಯ ಬಡ್ಡಿ ದರದಲ್ಲಿ ಬೆಳೆ ಸಾಲ ಅಸಾಧ್ಯ: ಕೆ.ಎನ್.ರಾಜಣ್ಣ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.18: ಎಲ್ಲಾ ರೈತರಿಗೆ ಬೆಳೆ ಸಾಲ ಕೊಡಲು ಸಾಧ್ಯವಿಲ್ಲ. ಲಭ್ಯತೆಗೆ ಅನುಗುಣವಾಗಿ ಸಾಲ ಕೊಡುವ ಕೆಲಸ ಮಾಡುತ್ತೇವೆ ಎಂದು ಸಹಕಾರಿ ಸಚಿವ ಕೆಎನ್ ರಾಜಣ್ಣ ತಿಳಿಸಿದ್ದಾರೆ.ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಪ್ರತಾಪ್ ಸಿಂಹ ನಾಯಕ್ ಪ್ರಶ್ನೆ ಕೇಳಿದರು. ಕಾಂಗ್ರೆಸ್ ಚುನಾವಣೆ ಪ್ರಣಾಳಿಕೆಯಲ್ಲಿ ಬೆಳೆ ಸಾಲ ಮಿತಿಯನ್ನು 3 ಲಕ್ಷದಿಂದ 10 ಲಕ್ಷಕ್ಕೆ ಏರಿಸುವ ಭರವಸೆ ನೀಡಲಾಗಿತ್ತು. ಆದರೆ 5 ಲಕ್ಷ ಮಾತ್ರ ಹೆಚ್ಚಳ ಮಾಡಲಾಗಿದೆ. ಶೂನ್ಯ ಬಡ್ಡಿಯಲ್ಲಿ 10 ಲಕ್ಷ ಮತ್ತು 15 ಲಕ್ಷ ಸಾಲ ಕೊಡೋದಾಗಿ ಹೇಳಿದ್ದರು. ಅದರೆ ಸರ್ಕಾರ ಬಂದರು ಶೂನ್ಯ ಬಡ್ಡಿ ಸಾಲ ಜಾಸ್ತಿ ಮಾಡಿಲ್ಲ. ಬಿಜೆಪಿ ಅವಧಿಯ ಎಲ್ಲಾ ರೈತ ಪರ ಯೋಜನೆ ಸ್ಥಗಿತ ಮಾಡಲಾಗಿದೆ ಎಂದು ಪ್ರತಾಪ್ ಸಿಂಹ ನಾಯಕ್ ಆರೋಪ ಮಾಡಿದರು.

ಇದಕ್ಕೆ ಸಚಿವ ರಾಜಣ್ಣ ಉತ್ತರ ನೀಡಿ, 2023-24ನೇ ಸಾಲಿನಲ್ಲಿ ಶೂನ್ಯ ಬಡ್ಡಿ ದರದಲ್ಲಿ ವಿತರಿಸುವ ಬೆಳೆ ಸಾಲ 3 ಲಕ್ಷದಿಂದ 5 ಲಕ್ಷಕ್ಕೆ ಏರಿಕೆ ಮಾಡಲಾಗಿದೆ.



2023-24ರಲ್ಲಿ 6,744 ರೈತರಿಗೆ 290.51 ಕೋಟಿ ಸಾಲ ನೀಡಲಾಗಿದೆ. 2024-25ರಲ್ಲಿ 13,689 ರೈತರಿಗೆ 589.12 ಕೋಟಿ ಸಾಲ ವಿತರಿಸಲಾಗಿದೆ. ನಮ್ಮ ಸರ್ಕಾರ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದನ್ನು ಜಾರಿ ಮಾಡಿದ್ದೇವೆ. ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದ್ದನ್ನು ನಾವು ಈಡೇರಿಸುತ್ತೇವೆ. ಅದರ ಬದ್ಧತೆ ಇದೆ ಎಂದು ತಿಳಿಸಿದರು. ಕರ್ನಾಟಕಕ್ಕೆ ನಬಾರ್ಡ್ ಅಡಿ ಹಣ ಕಡಿತ ಮಾಡಲಾಗಿದೆ. ಇದರಿಂದ ಸಮಸ್ಯೆ ಆಗಿದೆ. ಅರ್ಹತೆ ಇರುವ ರೈತರಿಗೆ 5 ಲಕ್ಷ ಸಾಲ ಸೌಲಭ್ಯ ಕೊಡಲಾಗುತ್ತಿದೆ. ಸಹಕಾರ ಇಲಾಖೆಯಲ್ಲಿ ಕೊಡುವ ಸಾಲ ಸರ್ಕಾರದ ಹಣವಲ್ಲ. ನಬಾರ್ಡ್ ಹಣ, ಸಹಕಾರ ಬ್ಯಾಂಕ್ ಹಣದಲ್ಲಿ ಕೊಡುತ್ತಿದ್ದೇವೆ. ಸಾಲಕ್ಕಾಗಿ ಮಾತ್ರ ಸಹಕಾರಿ ಬ್ಯಾಂಕ್‌ಗಳಿಗೆ ಬರುತ್ತಾರೆ. ಆದರೆ ಬೇರೆ ವ್ಯವಹಾರ ಮಾಡಲು ಖಾಸಗಿ ಬ್ಯಾಂಕ್‌ಗೆ ಹೋಗುತ್ತಾರೆ. ಹೀಗೆ ಇದ್ದಾಗ ನಮ್ಮ ಬ್ಯಾಂಕ್‌ಗೆ ಹೇಗೆ ಹಣ ಬರುತ್ತದೆ. ಸಂಪೂರ್ಣವಾಗಿ ರೈತರಿಗೆ ಬೇಕಾದ ಸಾಲ ಕೊಡಲು ನಮ್ಮಿಂದ ಸಾಧ್ಯವಿಲ್ಲ. ಲಭ್ಯತೆಗೆ ಅನುಗುಣವಾಗಿ ಸಾಲಗಳನ್ನು ಕೊಡುವ ಕೆಲಸ ಮಾಡುತ್ತೇವೆ. ಹಣದ ಕೊರತೆ ಇದೆ. ಲಭ್ಯತೆಗೆ ಅನುಗುಣವಾಗಿ ಸಾಲವನ್ನ ರೈತರಿಗೆ ಕೊಡುತ್ತೇವೆ ಎಂದು ತಿಳಿಸಿದರು.

## ಹುಮನಾಬಾದ್ ಪುರಸಭೆ,ರಾಜೇಶ್ವರ ಗ್ರಾ ಪಂ ಮೇಲ್ದರ್ಜೆಗೆ ಸಿಎಂ ಜತೆ ಚರ್ಚಿಸಿ ಕ್ರಮ: ಸಚಿವ ರಹೀಂ ಖಾನ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.18:ಹುಮನಾಬಾದ್ ಪುರಸಭೆಯನ್ನು ನಗರಸಭೆಯನ್ನಾಗಿ ಮತ್ತು ರಾಜೇಶ್ವರ ಗ್ರಾಮ ಪಂಚಾಯತಿಯನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೇಗೇರಿಸಲು ಆಯಾ ಪ್ರದೇಶದ ಜನಸಂಖ್ಯೆಯ ಆಧಾರದ ಮೇಲೆ ಮೇಲ್ದರ್ಜೆಗೆ ಏರಿಸಲಾಗುವುದು. ಆದರೆ ಹುಮನಾಬಾದ್ ಮತ್ತು ರಾಜೇಶ್ವರದಲ್ಲಿ ನಿಗದಿಪಡಿಸಿರುವ ಜನಸಂಖ್ಯೆ ಇಲ್ಲದ ಕಾರಣ ಮೇಲ್ದರ್ಜೆಗೆ ಏರಿಸಲು ಸಾಧ್ಯವಾಗುತ್ತಿಲ್ಲ. ಆದಗ್ಯೂ ಈ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಈ ಬಗ್ಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್



ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಸದಸ್ಯ ಭೀಮಾರಾವ್ ಬಸವರಾಜ ಪಾಟೀಲ್ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, 2011ರ ಜನಗಣತಿಯನ್ವಯ ಹುಮನಾಬಾದ ಪುರಸಭೆಯಲ್ಲಿ 44,483 ಮತ್ತು ರಾಜೇಶ್ವರ ಗ್ರಾಮ ಪಂಚಾಯತಿಯಲ್ಲಿ 11,179 ಜನಸಂಖ್ಯೆ ಇರುತ್ತದೆ. ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರಲ್ಲಿನ ಮಾನದಂಡಗಳನ್ವಯ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರದೇಶದಲ್ಲಿ 2011ರ ಜನಗಣತಿಯನ್ವಯ 50,000 ಕ್ಕಿಂತ ಹೆಚ್ಚು ಜನಸಂಖ್ಯೆ ಇರಬೇಕಾಗುತ್ತದೆ. ಪಟ್ಟಣ ಪಂಚಾಯತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರದೇಶದಲ್ಲಿ 10,000 ದಿಂದ 20,000 ಜನಸಂಖ್ಯೆ ಇರಬೇಕಾಗಿದ್ದು, ದಿನಾಂಕ: 19-03-2025ರ ಸಚಿವ ಸಂಪುಟ ನಿರ್ಣಯದಂತೆ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲು ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು.

## ಸಚಿವರಿಂದಲೇ ಸರ್ಕಾರದ ಗೌರವ ಹಾಳು:ಸ್ಪೀಕರ್ ಖಾದರ್ ಬೇಸರ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.18:ಸದನದಲ್ಲಿ ಸಚಿವರ ಗೈರುಹಾಜರಿಯಿಂದ ಗರಂ ಆದ ವಿಧಾನಸಭೆ ಸ್ಪೀಕರ್ ಯು ಟಿ ಖಾದರ್ ಅವರು ಸಚಿವರೇ ರಾಜ್ಯ ಸರ್ಕಾರದ ಗೌರವವನ್ನು ಹಾಳು ಮಾಡುತ್ತಿದ್ದಾರೆ ಎಂದು ಮಂಗಳವಾರ ಬೇಸರ ವ್ಯಕ್ತಪಡಿಸಿದರು.

ಸಮಯಕ್ಕೆ ಸರಿಯಾಗಿ ವಿಧಾನಸಭಾ ಅಧಿವೇಶಕ್ಕೆ



ಹಾಜರಾಗಲು ಮತ್ತು ಚರ್ಚೆಗಳಲ್ಲಿ ಭಾಗವಹಿಸಲು ಸಾಧ್ಯವಾಗದಿದ್ದರೆ ಏಕೆ ಸಚಿವರಾಗಬೇಕು?, ಸರ್ಕಾರದ ಪರವಾಗಿ ಶಾಸಕರ ಪ್ರಶ್ನೆಗಳಿಗೆ ಉತ್ತರ ನೀಡಲಾಗದಿದ್ದರೆ ಏಕೆ ಮಂತ್ರಿಯಾಗಬೇಕು? ಎಂದು ಸ್ಪೀಕರ್ ಖಾರವಾಗಿಯೇ ಪ್ರಶ್ನಿಸಿದರು.

ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಕಾನೂನು

(2ನೇ ಪುಟ ನೋಡಿ)

## ಆಟೋ ಪಲ್ಟಿ: ರೈತ ಸಂಘದ ಮುಖಂಡ ಸಾವು

ಮಲ್ಲಮ್ಮ ನುಡಿ ವಾರ್ತೆ ರಾಯಚೂರು: ಆಟೋರಿಕ್ಷಾ ಪಲ್ಟಿಯಾದ ಪರಿಣಾಮ ರೈತ ಮುಖಂಡ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ರಾಯಚೂರಿನ ಲಿಂಗಸುಗೂರು ತಾಲೂಕಿನ ಗುರಗುಂಟಾ ಬಳಿ ನಡೆದಿದೆ.ಮೃತ ವ್ಯಕ್ತಿಯನ್ನು ವೀರನಗೌಡ ಉದ್ಬಾಳ (55) ಎಂದು ಗುರುತಿಸಲಾಗಿದೆ.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರೈತ ಮುಖಂಡ, ಗೌಡೂರು ಗ್ರಾಮ ಘಟಕದ ಅಧ್ಯಕ್ಷರಾಗಿದ್ದ ವೀರನಗೌಡ

(2ನೇ ಪುಟ ನೋಡಿ)


## ನೇಣು ಬಿಗಿದ ಸ್ಥಿತಿಯಲ್ಲಿ ಯುವತಿಯ ಶವ ಪತ್ತೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.18: ತಾಲೂಕಿನ ಆಳಂದಿ ಗ್ರಾಮದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಯುವತಿಯ ಶವ ಪತ್ತೆಯಾದ ಘಟನೆ ಮಾ.18ರ ಮಂಗಳವಾರ ನಡೆದಿದೆ.

ಗ್ರಾಮದ ಪ್ರಿಯಾಂಕಾ ಚವಾಣ್ (20) ಮೃತ ಯುವತಿ.

ಯುವತಿಯ ಕುಟುಂಬಸ್ಥರು ನೀಡಿದ ದೂರಿನ ಮೇರೆಗೆ



ಭಾಲ್ಕಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕೊಲೆ ಮಾಡಿ ನೇಣು ಹಾಕಲಾಗಿದೆ. ಮನೆಯ ಬಾಡಿಗೆಗೆ ಸಂಬಂಧಿಸಿದಂತೆ ಮಾಲೀಕ ಪೀಡಿಸುತ್ತಿದ್ದ ಎಂದು ಆರೋಪಿಸಿದ್ದಾರೆ. ಕೊಲೆಯೋ, ಆತ್ಮಹತ್ಯೆಯೋ ಎನ್ನುವುದು ತನಿಖೆಯ ನಂತರ ಹೊರಬೀಳಲಿದೆ ಎಂದು ಭಾಲ್ಕಿ ಗ್ರಾಮೀಣ ಪೊಲೀಸರು ತಿಳಿಸಿದ್ದಾರೆ.

## ಶೀಘ್ರದಲ್ಲೇ ಮಹಿಳೆಯರ ಖಾತೆಗೆ ಗೃಹಲಕ್ಷ್ಮಿ ಹಣ: ಸಿ.ಎಂ. ಭರವಸೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಮಾ.18:ಎಲ್ಲಾ ಗ್ಯಾರಂಟಿ ಯೋಜನೆಗಳಿಗೆ ಈಗಾಗಲೇ ಹಣ ಬಿಡುಗಡೆ ಮಾಡಿದ್ದೇವೆ. ಗೃಹಲಕ್ಷ್ಮಿ ಯೋಜನೆಯ ಹಣ ಜನವರಿಯಿಂದ ಕೊಡಬೇಕಾಗಿದ್ದು, ಶೀಘ್ರದಲ್ಲೇ ಅದನ್ನು ಕೊಡ್ತೀವಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.ಪರಿಷತ್ ಕಲಾಪದಲ್ಲಿಂದು ರಾಜ್ಯಪಾಲರ ವಂದನಾ ನಿರ್ಣಯದ ಮೇಲೆ ಮಾತನಾಡಿದ ಸಿಎಂ, ಶೀಘ್ರದಲ್ಲೇ ಗೃಹಲಕ್ಷ್ಮಿ ಹಣ ನೀಡಲಾಗುವುದು. ಅಲ್ಲದೇ ಪ್ರಣಾಳಿಕೆಯಲ್ಲಿ ಹೇಳಿದಂತೆ 2026-27ನೇ ಸಾಲಿಗೆ 7 ರೂಪಾಯಿ ಹಾಲಿನ ಪ್ರೋತ್ಸಾಹ ಧನ ಸಹ ಕೊಡುತ್ತೇವೆ ಎಂದು



ತಿಳಿಸಿದರು.


**ರೈತರ ಆತ್ಮಹತ್ಯೆಗಳು 50% ಕಡಿಮೆ ಆಗಿದೆ:**

ಪ್ರಸಕ್ತ ವರ್ಷದಲ್ಲಿ ಶೇ.50 ರೈತರ ಆತ್ಮಹತ್ಯೆಗಳು ಕಡಿಮೆಯಾಗಿದೆ. ಫೆಬ್ರವರಿ ಅಂತ್ಯಕ್ಕೆ 640 ಮಂದಿ ರೈತರ ಆತ್ಮಹತ್ಯೆಯಾಗಿದ್ದು, ಇದು ಬಿಜೆಪಿ ಆಡಳಿತದ ಅವಧಿಗಿಂತ ಕಡಿಮೆಯಾಗಿದೆ ಎಂದು ಸಿಎಂ ಹೇಳಿದರು.

ಪ್ರತಿ ವರ್ಷ 10 ಸಾವಿರ ಕೋಟಿ ರೂ. ನೀರಾವರಿಗೆ ಖರ್ಚು ಮಾಡೋದಾಗಿ ಕೂಡಲ ಸಂಗಮದಲ್ಲಿ ಹೇಳಿದ್ವಿ. ಅದರಂತೆ ಕಳೆದ 5 ವರ್ಷಗಳಲ್ಲಿ 56 ಸಾವಿರ ಕೋಟಿ ಖರ್ಚು ಮಾಡಿದ್ದೇವೆ. ಈಗಲೂ 5 ವರ್ಷ 1.5 ಲಕ್ಷ ಕೋಟಿ ರೂ. ಅನುದಾನ ನೀರಾವರಿಗೆ ಕೊಡ್ತೀವಿ. ಕೃಷ್ಣಾ ಮೇಲ್ದಂಡೆ ಯೋಜನೆಗೆ ಒಂದೇ ಹಂತದಲ್ಲಿ ಭೂಸ್ವಾಧೀನ ಮಾಡಿ ದುಡ್ಡು ಕೊಡ್ತೀವಿ ಅಂತ ಹೇಳಿದ್ದೇವೆ. ಆದ್ರೆ ಬಿಜೆಪಿಯವರು ಅಧಿಕಾರದಲ್ಲಿದ್ದ 4 ವರ್ಷ ಏನೂ ಮಾಡಿಲ್ಲ. ಕೇಂದ್ರ ಸರ್ಕಾರ ಸಹ ಈವರೆಗೆ ಘೋಷಣೆ ಮಾಡಿದ ಹಣವನ್ನೇ ಕೊಟ್ಟಿಲ್ಲ ಎಂದು ವಾಗ್ದಾಳಿ ನಡೆಸಿದರು. ಈ ವೇಳೆ ಬಿಜೆಪಿ-ಕಾಂಗ್ರೆಸ್ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು.

## ಮಹಾ ಕುಂಭಮೇಳದಿಂದ ದೇಶದ ಸಾಮೂಹಿಕ ಪ್ರಜ್ಞೆಗೆ ಬಲ ಮೋದಿ ಶ್ಲಾಘನೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮಾ.18: ಇತ್ತೀಚಿಗೆ ನಡೆದ ಮಹಾ ಕುಂಭಮೇಳವು ನಮ್ಮ ಚಿಂತನೆಯನ್ನು ಮತ್ತಷ್ಟು ಬಲಪಡಿಸಿದೆ. ಜೊತೆಗೆ ದೇಶದ ಸಾಮೂಹಿಕ ಪ್ರಜ್ಞೆಯು ನಮ್ಮೆಲ್ಲರ ಶಕ್ತಿಯ ಬಗ್ಗೆ ಹೇಳುತ್ತದೆ. ಕಳೆದ ವರ್ಷ ಅಯೋಧ್ಯೆಯಲ್ಲಿ ನಡೆದ ರಾಮಮಂದಿರ ಪ್ರಾಣ ಪ್ರತಿಷ್ಠಾಪನಾ ಸಮಾರಂಭವು ಮುಂದಿನ 1000 ವರ್ಷಗಳಿಗೆ ಭಾರತ ಹೇಗೆ ತಯಾರಿ ನಡೆಸುತ್ತದೆ ಎಂಬುದನ್ನು ನಮಗೆಲ್ಲರಿಗೂ ತೋರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದರು.



ಲೋಕಸಭೆಯಲ್ಲಿ ಮಹಾ ಕುಂಭಮೇಳದ ಯಶಸ್ಸಿನ ಬಗ್ಗೆ ಮಾತನಾಡಿದ ಅವರು, ಮಹಾ ಕುಂಭಮೇಳದ ಯಶಸ್ಸಿಗೆ ಅನೇಕ ಜನರು ಕೊಡುಗೆ ನೀಡಿದ್ದಾರೆ. ನಾನು ಎಲ್ಲಾ ಕರ್ಮಯೋಗಿಗಳನ್ನು ಅಭಿನಂದಿಸುತ್ತೇನೆ. ದೇಶಾದ್ಯಂತ ಭಕ್ತರಿಗೆ, ಉತ್ತರ ಪ್ರದೇಶದ ಜನರಿಗೆ ಮತ್ತು ವಿಶೇಷವಾಗಿ ಪ್ರಯಾಗ್‌ರಾಜ್‌ನ ಜನರಿಗೆ ನಾನು ಧನ್ಯವಾದ ಹೇಳುತ್ತೇನೆ. ಜನರು ಅನುಕೂಲತೆ ಹಾಗೂ ಅನಾನುಕೂಲತೆಯ ಬಗ್ಗೆ ಚಿಂತಿಸದೆ ಮಹಾ ಕುಂಭಮೇಳದಲ್ಲಿ ಭಾಗವಹಿಸಿದರು. ಈ ಮೂಲಕ ನಮ್ಮ ಸಂಪ್ರದಾಯಗಳನ್ನು ಪೀಳಿಗೆಯಿಂದ ಪೀಳಿಗೆಗೆ ವರ್ಗಾಯಿಸುವ ಪ್ರಕ್ರಿಯೆಯು ಮುಂದುವರಿಯುತ್ತದೆ ಎಂದರು.

ಇಂದು ಭಾರತದ ಯುವಕರು ಅದರ ಸಂಪ್ರದಾಯ, ನಂಬಿಕೆ

(2ನೇ ಪುಟ ನೋಡಿ)

## ಇಂದು ಕಲಬುರಗಿ ಶರಣಬಸವೇಶ್ವರ ರಥೋತ್ಸವ

ಕಲಬುರಗಿ,ಮಾ.18- ಕಲಬುರಗಿಯ ಆರಾಧ್ಯ ದೈವ ಮಹಾದಾಸೋಹಿ ಶ್ರೀ ಶರಣಬಸವೇಶ್ವರರ 203ನೇ ಜಾತ್ರಾ ಮಹೋತ್ಸವದಂಗವಾಗಿ ಮಾ.19 ರಂದು ಸಂಜೆ 6 ಕ್ಕೆ ದೇವಸ್ಥಾನ ಆವರಣದಲ್ಲಿ ರಥೋತ್ಸವ ಲಕ್ಷಾಂತರ ಭಕ್ತರ ಮಧ್ಯೆ ನಡೆಯಲಿದೆ.



ಜಾತ್ರೆಯಂಗವಾಗಿ ಮಾ.18 ರಂದು ಸಂಜೆ ಉಚ್ಛಾಯಿಯನ್ನು ಎಳೆಯಲಾಯಿತು. ಸಹಸ್ರಾರು ಭಕ್ತರು ಭಾಗವಹಿಸಿದ್ದರು.

ಮಾ.19 ರಂದು ರಥೋತ್ಸವ ಪೂರ್ವ ಮಹಾದಾಸೋಹ ಪೀಠಾಧಿಪತಿಗಳಾದ ಡಾ.ಶರಣಬಸವಪ್ಪ ಅಪ್ಪ ಹಾಗೂ ಚಿ.ದೊಡ್ಡಪ್ಪ ಅಪ್ಪ ಅವರು ನೆರೆದ ಭಕ್ತರಿಗೆ ಪರುಷ ಬಟ್ಟಲಿನ ದರ್ಶನ ಮಾಡಿಸುವರು, ನಂತರ ರಥೋತ್ಸವ ಸಂಭ್ರಮದಿಂದ ನಡೆಯಲಿದೆ. ರಾಜ್ಯ ಹಾಗೂ ನೆರೆರಾಜ್ಯಗಳಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶರಣರ ದರ್ಶನ ಪಡೆಯಲಿದ್ದಾರೆ.

## ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4 ಮೀಸಲಾತಿ:ಮಸೂದೆ ಮಂಡನೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.18:ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿ ಕಲ್ಪಿಸುವ ಮಸೂದೆಯನ್ನು ರಾಜ್ಯ ಸರ್ಕಾರ ಮಂಗಳವಾರ ವಿಧಾನಸಭೆಯಲ್ಲಿ ಮಂಡಿಸಿದೆ. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ಅವರು ಇಂದು ವಿಧಾನಸಭೆಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ(ತಿದ್ದುಪಡಿ) ಮಸೂದೆ, 2025 ಅನ್ನು ಮಂಡಿಸಿದರು.

ಕಳೆದ ಶುಕ್ರವಾರ, ಸಚಿವ ಸಂಪುಟದಿಂದ ಅನುಮೋದನೆ ಪಡೆದಿದ್ದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಮಸೂದೆಯನ್ನು ವಿಧಾನಸಭೆಯಲ್ಲಿ

(2ನೇ ಪುಟ ನೋಡಿ)

## ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಸಲು ಮಾ. 31 ರವರೆಗೆ ಕಾಲಾವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.18:2024-25ನೇ ಸಾಲಿನ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಸಲು ಕಾಲಾವಧಿಯನ್ನು 2025ರ ಮಾರ್ಚ್ 31ರವರೆಗೆ ವಿಸ್ತರಿಸಿ, ನೋಂದಣಿಯ ಜೊತೆಗೆ ಖರೀದಿ ಪ್ರಕ್ರಿಯೆಯನ್ನೂ ಸಹ ಕೈಗೊಳ್ಳಲು ಸರ್ಕಾರವು ಆದೇಶಿಸಿದೆ. ಆದ್ದರಿಂದ ಜಿಲ್ಲೆಯ



ರೈತ ಭಾಂದವರು ಇದರ ಸದುಪಯೋಗ ಪಡೆದು-ಕೊಂಡು ಇನ್ನೂ ಹೆಚ್ಚಿನ ರೈತರು ಎಫ್.ಎ.ಕ್ಯೂ. ಗುಣಮಟ್ಟದ ತೊಗರಿ ಮಾರಾಟಕ್ಕಾಗಿ ತಮ್ಮ ಸಮಿಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಅಥವಾ ರೈತ ಉತ್ಪಾದಕ ಸಂಘಗಳಿಗೆ ಭೇಟಿ ನೀಡಿ ತಾವು

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಸಾಮೂಹಿಕ ಪ್ರಜ್ಞೆಗೆ ಬಲ ಮೋದಿ ಶ್ಲಾಘನೆ

ಮತ್ತು ಪದ್ಧತಿಗಳನ್ನು ಹೆಮ್ಮೆಯಿಂದ ಅಳವಡಿಸಿಕೊಳ್ಳುತ್ತಿದ್ದಾರೆ. ಒಂದು ದೇಶವಾಗಿ ನಾವು ದೊಡ್ಡ ಗುರಿಗಳನ್ನು ಸಾಧಿಸುವ ವಿಶ್ವಾಸವನ್ನು ಗಳಿಸಿದ್ದೇವೆ. ತನ್ನ ಪರಂಪರೆಯೊಂದಿಗೆ ಸಂಪರ್ಕ ಸಾಧಿಸುವ ಸಂಪ್ರದಾಯವು ಇಂದಿನ ಭಾರತದ ದೊಡ್ಡ ಆಸ್ತಿಯಾಗಿದೆ. ಯುವ ಪೀಳಿಗೆ ಕೂಡ ಮಹಾ ಕುಂಭಮೇಳದಲ್ಲಿ ಪೂರ್ಣ ಭಾವನೆಯಿಂದ ಭಾಗವಹಿಸಿದೆ. ಮಹಾ ಕುಂಭಮೇಳದ ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದವರಿಗೆ ಈಗ ಉತ್ತರ ಸಿಕ್ಕಿದೆ. ದೇಶದ ಮೂಲೆ ಮೂಲೆಯಲ್ಲೂ ಆಧ್ಯಾತ್ಮಿಕ ಪ್ರಜ್ಞೆ ಹೊರಹೊಮ್ಮಿದೆ. ಮಹಾ ಕುಂಭಮೇಳವನ್ನು ಭಾರತದ ಇತಿಹಾಸದಲ್ಲಿ ಒಂದು ಮಹತ್ವದ ತಿರುವು. ಜಗತ್ತು ದೇಶದ ಬೃಹತ್ ಸ್ವರೂಪವನ್ನು ಕಂಡಿದೆ. ಎಲ್ಲರ ಪ್ರಯತ್ನದ ಜೀವಂತ ಸಾಕಾರವಾಗಿದೆ ಎಂದು ಹೇಳಿದರು.

ಮಹಾ ಕುಂಭಮೇಳದಲ್ಲಿ ನಾವು ನಮ್ಮ ರಾಷ್ಟ್ರೀಯ ಪ್ರಜ್ಞೆಯ ಮಹಾ ಜಾಗೃತಿಯನ್ನು ಕಂಡಿದ್ದೇವೆ. ಇದು ನಮಗೆ ಹೊಸ ನಿರ್ಣಯಗಳನ್ನು ಸಾಧಿಸಲು ಸ್ಫೂರ್ತಿ ನೀಡುತ್ತದೆ. ನಮ್ಮ ಸಾಮರ್ಥ್ಯಗಳ ಬಗ್ಗೆ ಕೆಲವು ಜನರು ಹೊಂದಿರುವ ಅನುಮಾನ ಹಾಗೂ ಭಯಕ್ಕೆ ಮಹಾಕುಂಭವು ಸೂಕ್ತ ಉತ್ತರವನ್ನು ನೀಡಿದೆ. ಮಹಾಕುಂಭದಿಂದ ಅನೇಕ ಅಮೃತಗಳು ಹೊರಹೊಮ್ಮಿವೆ ಮತ್ತು ಏಕತೆಯ ಅಮೃತವು ಅದರ ಅತ್ಯಂತ ಪವಿತ್ರ ಪ್ರಸಾದವಾಗಿದೆ ಎಂದರು.ವಿವೇಕಾನಂದರು ಚಿಕಾಗೋ ಧರ್ಮ ಸಂಸತ್ತಿನಲ್ಲಿ ಮಾಡಿದ ಭಾಷಣ, ಗಾಂಧೀಜಿಯವರ 'ದಂಡಿ ಮೆರವಣಿಗೆ' ಮತ್ತು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ 'ದೆಹಲಿ ಚಲೋ' ಘೋಷಣೆಯಂತಹ ಐತಿಹಾಸಿಕ ಸಂದರ್ಭಗಳನ್ನು ಉಲ್ಲೇಖಿಸಿದ ಮೋದಿ, ಪ್ರಯಾಗ್‌ರಾಜ್ ಮಹಾ ಕುಂಭವನ್ನು ಜಾಗೃತಿ ಭಾರತದ ಪ್ರತಿಬಿಂಬವನ್ನು ಕಾಣುವ ಒಂದು ಪ್ರಮುಖ ಮೈಲಿಗಲ್ಲಾಗಿ ನಾನು ನೋಡುತ್ತೇನೆ ಎಂದರು. ಇತ್ತೀಚಿನ ಮಾರಿಷಸ್ ಭೇಟಿಯನ್ನು ಉಲ್ಲೇಖಿಸಿದ ಅವರು, ಕಳೆದ ವಾರ ನಾನು ತ್ರಿವೇಣಿ ಸಂಗಮದ ಪವಿತ್ರ ನೀರನ್ನು ಮಾರಿಷಸ್‌ಗೆ ತೆಗೆದುಕೊಂಡು ಹೋಗಿದ್ದೆ. ಆ ನೀರನ್ನು ಅಲ್ಲಿನ ಗಂಗಾ ಕೊಳದಲ್ಲಿ ಮುಳುಗಿಸಿದಾಗ, ಅಲ್ಲಿ ಅಪಾರ ಉತ್ಸಾಹ ಮತ್ತು ನಂಬಿಕೆಯ ವಾತಾವರಣವಿತ್ತು ಎಂದು ಸಂತಸ ವ್ಯಕ್ತಪಡಿಸಿದರು.

## ಖರೀದಿಸಲು ಮಾ. 31 ರವರೆಗೆ ಕಾಲಾವಧಿ ವಿಸ್ತರಣೆ

ಬೆಳೆದ ತೊಗರಿ ಮಾರಾಟಕ್ಕೆ ನೊಂದಾಯಿಸಿಕೊಂಡು ತಾವು ಬೆಳೆದ ತೊಗರಿ ಉತ್ಪನ್ನವನ್ನು ಮಾರಾಟ ಮಾಡಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ತೊಗರಿಗೆ ಪ್ರತಿ ಕ್ವಿಂಟಾಲ್ ರೂ.7,550 ನಿಗದಿಪಡಿಸಿದ್ದು, ಇದಕ್ಕೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹಧನ 450 ರೂ.ಪ್ರತಿ ಕ್ವಿಂಟಾಲಗೆ ಸೇರಿಸಿ ಒಟ್ಟು ಪ್ರತಿ ಕ್ವಿಂಟಾಲ್‌ಗೆ 8,000 ರೂ.ದರದಂತೆ ಪ್ರತಿ ಎಕರೆಗೆ 04 ಕ್ವಿಂಟಾಲ್ ಮತ್ತು ಪ್ರತಿ ರೈತರಿಂದ ಗರಿಷ್ಠ 40 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ತೊಗರಿಯನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ನಿಯಮಿತ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ಕಲಬುರಗಿ ಸಂಸ್ಥೆಗಳ ಮೂಲಕ ಜಿಲ್ಲೆಯಲ್ಲಿ ಒಟ್ಟು 196 ಖರೀದಿ ಕೇಂದ್ರಗಳನ್ನು ತೆರೆದು ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ತೊಗರಿಯನ್ನು ಖರೀದಿ ಮಾಡಲಾಗುತ್ತಿದೆ. ಕಲಬುರಗಿ ಜಿಲ್ಲೆಯಲ್ಲಿ 2024-25ನೇ ಸಾಲಿಗೆ 6.27 ಲಕ್ಷ ಹೆಕ್ಟರ್ ಪ್ರದೇಶದಲ್ಲಿ ತೊಗರಿ ಬಿತ್ತನೆಯಾಗಿದ್ದು, 50 ಲಕ್ಷ ಕ್ವಿಂಟಲ್ ಇಳುವರಿ ನಿರೀಕ್ಷಿಸಲಾಗಿದೆ. ದಿನಾಂಕ:18-03-2025ರ ಅಂತ್ಯಕ್ಕೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ಕಲಬುರಗಿ ಸಂಸ್ಥೆಯು 17,740 ರೈತರ ನೋಂದಣಿ ಹಾಗೂ ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ಕಲಬುರಗಿ ಸಂಸ್ಥೆಯು ಒಟ್ಟು 7,189 ರೈತರು ನೊಂದಣಿಯನ್ನು ಕೈಗೊಂಡಿದ್ದು, ಒಟ್ಟು ಜಿಲ್ಲೆಯಲ್ಲಿ 24,929 ರೈತರ ನೊಂದಣಿಯನ್ನು ಕೈಗೊಂಡು 5,713 ರೈತರಿಂದ ಒಟ್ಟು 84,844 ಕ್ವಿಂಟಲ್ ತೊಗರಿಯನ್ನು ಜಿಲ್ಲೆಯ ರೈತರಿಂದ ಖರೀದಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಗೌರವ ಹಾಳು:ಸ್ಪೀಕರ್ ಖಾದರ್ ಬೇಸರ

ಮತ್ತು ಸುವ್ಯವಸ್ಥೆ ವಿಷಯ ಪ್ರಸ್ತಾಪಿಸುತ್ತಾ, ಸದನದಲ್ಲಿ ಸಚಿವರಿಲ್ಲ, ಇದ್ದ ಒಬ್ಬ ಸಚಿವರು ಎದ್ದು ಹೊರ ನಡೆದಿದ್ದಾರೆ. ಒಬ್ಬಳೇ ಪದ್ಮಾವತಿ ಎನ್ನುವಂತಾಗಿದೆ ಎಂದು ವ್ಯಂಗ್ಯವಾಡಿದರು.

ಈ ವೇಳೆ ಮಾತನಾಡಿದ ಸ್ಪೀಕರ್, ಸಚಿವರು ಸದನದಲ್ಲಿ ಹಾಜರಿರಬೇಕು, ಅವರ ಗೈರುಹಾಜರಿಯನ್ನು ಯಾರೂ ಸಹಿಸುವುದಿಲ್ಲ. ಸಚಿವರು ಈ ಸರ್ಕಾರದ ಘನತೆಯನ್ನು ಕುಗ್ಗಿಸುತ್ತಿದ್ದಾರೆ. ಉತ್ತಮ ಕೆಲಸಗಳ ಹೊರತಾಗಿಯೂ, ಸಚಿವರು ಸಮಯಕ್ಕೆ ಸರಿಯಾಗಿ ಸದನಕ್ಕೆ ಬಾರದೇ ಸರ್ಕಾರದ ಗೌರವವನ್ನು ತೆಗೆಯುತ್ತಿದ್ದಾರೆ ಎಂದು ಕಿಡಿ ಕಾರಿದರು.

ಪ್ರತಿಪಕ್ಷದವರು ಹೇಳುವುದು ತಪ್ಪೆಂದು ಹೇಳುತ್ತಿಲ್ಲ. ಸದನದಲ್ಲಿ ಸಚಿವರು ಇರಬೇಕೆಂದು ಅವರು ಕೇಳುವುದು ಸರಿಯಿದೆ. ಮುಖ್ಯಮಂತ್ರಿ ಇದ್ದಾಗ ಎಲ್ಲಾ ಸಚಿವರೂ ಬರುತ್ತಾರೆ. ಅವರಿಲ್ಲದಿದ್ದಾಗಲೂ ಎಲ್ಲಾ ಸಚಿವರಿರಬೇಕು. ಮುಖ್ಯಮಂತ್ರಿ ಬೆಂಬಲಕ್ಕೆ ಸಚಿವರು ನಿಲ್ಲುವುದು ಬೇಕಾಗಿಲ್ಲ. ಅವರು ಸಮರ್ಥಿಸಿಕೊಳ್ಳುತ್ತಾರೆ ಎಂದು ಹೇಳಿದರು.

"ಈ ಸರ್ಕಾರವನ್ನು ಪ್ರಶ್ನಿಸಲು ಸದನದಲ್ಲಿ ಯಾರಿದ್ದಾರೆ? ಕಾನೂನು ಮತ್ತು ಸುವ್ಯವಸ್ಥೆ ಬಗ್ಗೆ ಪ್ರಶ್ನಿಸಲು ಯಾರೂ ಇಲ್ಲ, ಸ್ಪೀಕರ್ ಮುಂದೆ ಬಂದು ನಮ್ಮನ್ನು ರಕ್ಷಿಸಬೇಕು, ನೀವು (ಸ್ಪೀಕರ್) ಅಸಹಾಯಕರಾಗಬಾರದು" ಎಂದು ಆರ್ ಅಶೋಕ್ ಹೇಳಿದರು.

ಬಿಜೆಪಿ ಶಾಸಕ ಸುನೀಲ್ ಕುಮಾರ್ ಮಾತನಾಡಿ, ಕಾರ್ಯಸೂಚಿ ಪ್ರಕಾರ ಸದನ ನಡೆಸಲು ತಕರಾರಿಲ್ಲ. ಕಾನೂನು ಮತ್ತು ಸುವ್ಯವಸ್ಥೆ ವಿಚಾರ ಗಂಭೀರವಾಗಿದ್ದು, ಅದಕ್ಕೆ ಅವಕಾಶ ಮಾಡಿಕೊಡಬೇಕು. ರಾಜ್ಯದಲ್ಲಿ ಭಯದ ವಾತಾವರಣವಿದೆ. ಹಲವು ಘಟನೆಗಳು ರಾಜ್ಯದಲ್ಲಿ ಘಟಿಸಿವೆ. ಅದರ ಪ್ರಸ್ತಾಪವಾಗಬೇಕು ಎಂದು ಆಗ್ರಹಿಸಿದರು.

ಇದಕ್ಕು ಮುನ್ನ ಸದನದಲ್ಲಿ ಸಚಿವರಿಲ್ಲ ಎಂಬ ಆಕ್ಷೆ?ಪವನ್ನು ಬಿಜೆಪಿ ಶಾಸಕರು ಪ್ರಸ್ತಾಪಿಸಿದರು. ಆಗ ಮಧ್ಯಪ್ರವೇಶಿಸಿದ ಸ್ಪೀಕರ್, ಸದನದಲ್ಲಿ ಇಂದು ಹಾಜರಿರಬೇಕಾದ ಸಚಿವರುಗಳ ಹೆಸರುಗಳನ್ನು ಉಲ್ಲೆ?ಖಿಸಿದರು. ಸಚಿವರಾದ ಕೆ.ಎಚ್.ಮುನಿಯಪ್ಪ, ಕೆ.ಜೆ.ಜಾರ್ಜ್, ದಿನೇಶ್ ಗುಂಡೂರಾವ್, ಕೃಷ್ಣಭೈರೇಗೌಡ, ಡಾ.ಎಚ್.ಸಿ.ಮಹದೇವಪ್ಪ, ಪ್ರಿಯಾಂಕ್ ಖರ್ಗೆ, ಜಮೀರ್ ಅಹಮದ್ ಖಾನ್, ಈಶ್ವರ್ ಖಂಡ್ರೆ ಸೇರಿದಂತೆ ಸದನಕ್ಕೆ ಗೈರು ಆಗಿದ್ದ ಸಚಿವರ ಹೆಸರುಗಳನ್ನು ವಾಚಿಸಿ ಮೂವರು ಸಚಿವರು ಮಾತ್ರ ಸದನದಲ್ಲಿ ಹಾಜರಿದ್ದಾರೆ ಎಂದು ಹೇಳಿದರು.

## ಶೇ.4 ರಷ್ಟು ಮೀಸಲಾತಿ:ಮಸೂದೆ ಮಂಡನೆ

ಮಂಡಿಸಲಾಯಿತು.ಈಗಾಗಲೇ ಬಜೆಟ್‌ನಲ್ಲಿ ಸರ್ಕಾರಿ ಗುತ್ತಿಗೆಯಲ್ಲಿ ಮೀಸಲಾತಿಯನ್ನು ಎಸ್‌ಸಿ-ಎಸ್‌ಟಿ, ಪ್ರವರ್ಗ 1, 2ಬಿಗಳ ಜತೆ 2ಬಿ ಮುಸ್ಲಿಂ ವರ್ಗವನ್ನೂ ಸೇರಿಸಿ ಗುತ್ತಿಗೆ ಮೊತ್ತವನ್ನು 1 ಕೋಟಿಯಿಂದ 2 ಕೋಟಿ ರೂಗೆ ಏರಿಸುವ ಪ್ರಸ್ತಾಪ ಮಾಡಲಾಗಿತ್ತು. ಇವತ್ತು ಮಂಡನೆಯಾದ ಬಿಲ್ ನಲ್ಲಿ 2ಬಿ ವರ್ಗಕ್ಕೆ ಶೇ.4 ಮೀಸಲಾತಿ ಕೊಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ(ಕೆಟಿಟಿಪಿ) ಕಾಯ್ದೆಗೆ ತಿದ್ದುಪಡಿ ತರಲಾಗಿದೆ.

ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇಕಡಾ 4 ರಷ್ಟು ಮೀಸಲಾತಿ ಕಲ್ಪಿಸುವ ರಾಜ್ಯ ಸರ್ಕಾರದ ಕ್ರಮವನ್ನು ಬಿಜೆಪಿ "ಅಸಂವಿಧಾನಿಕ" ಎಂದು ಟೀಕಿಸಿದೆ ಮತ್ತು ಅದನ್ನು ನ್ಯಾಯಾಲಯದಲ್ಲಿ ಪ್ರಶ್ನಿಸುವುದು ಸೇರಿದಂತೆ ರದ್ದುಗೊಳಿಸುವವರೆಗೆ ಹೋರಾಟ ನಡೆಸುವುದಾಗಿ ಹೇಳಿದೆ.

ಮಂಗಳವಾರ ಮಂಡಿಸಲಾದ ಮಸೂದೆಯು 1999 ರ ಏಖಿಕಕ ಕಾಯ್ದೆಯನ್ನು ಮತ್ತಷ್ಟು ತಿದ್ದುಪಡಿ ಮಾಡುತ್ತದೆ, ಇದು 2025-26 ರ ಬಜೆಟ್ ಭಾಷಣದಲ್ಲಿ ವಿವರಿಸಿದ ಪ್ರಸ್ತಾವನೆಯನ್ನು ಅದರ ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆಯ ಪ್ರಕಾರ ಕಾರ್ಯಗತಗೊಳಿಸುತ್ತದೆ.

ಹಿಂದುಳಿದ ವರ್ಗಗಳ ನಿರುದ್ಯೋಗವನ್ನು ಪರಿಹರಿಸುವುದು ಮತ್ತು ಸರ್ಕಾರಿ ನಿರ್ಮಾಣ ಯೋಜನೆಗಳಲ್ಲಿ ಅವರ ಭಾಗವಹಿಸುವಿಕೆಯನ್ನು ಉತ್ತೇಜಿಸುವುದು ಈ ಮಸೂದೆಯ ಉದ್ದೇಶವಾಗಿದೆ.

## ಸಂಘದ ಮುಖಂಡ ಸಾವು

ಅವರು, ಲಿಂಗಸುಗೂರಿನಿಂದ ಸ್ವಗ್ರಾಮ ಗೌಡೂರಿಗೆ ತೆರಳುತ್ತಿದ್ದರು. ಈ ವೇಳೆ ಆಟೋ ಪಲ್ಟಿಯಾಗಿದ್ದು, ಪರಿಣಾಮ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ.

ಆಟೋ ವೇಗವಾಗಿ ಚಲಿಸುತ್ತಿದ್ದು, ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿ ಹೊಡೆದಿದೆ. ಪರಿಣಾಮ ಗಂಭೀರವಾಗಿ ಗಾಯಗೊಂಡು ಸಾವನ್ನಪ್ಪಿದ್ದಾರೆ. ಲಿಂಗಸುಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಚಂದ್ರಮಾನ ಯುಗಾದಿ ಪ್ರಯುಕ್ತ: ವಿಶೇಷ ವಾಹನಗಳ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.18:ಚಂದ್ರಮಾನ ಯುಗಾದಿ ಪ್ರಯುಕ್ತ ಸಾರ್ವಜನಿಕ ಪ್ರಯಾಣಿಕರಿಗೆ ಹಾಗೂ ನಿಗಮದ ಅಧಿಕಾರಿ/ಸಿಬ್ಬಂದಿಗಳಿಗೆ ಚಂದ್ರಮಾನ ಯುಗಾದಿ ಪ್ರಯುಕ್ತ ಮಾರ್ಚ್ 30 ರಂದು ಆಂಧ್ರಪ್ರದೇಶ ರಾಜ್ಯದ ಶ್ರೀಶೈಲಂನಲ್ಲಿ ಜರುಗಲಿರುವ ಮಲ್ಲಿಕಾರ್ಜುನ ದೇವರ ಜಾತ್ರೆಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯಿಂದ ಜಾತ್ರಾ ಪ್ರಯುಕ್ತ ಇದೇ ಮಾರ್ಚ್ 21 ರಿಂದ 31 ರವರೆಗೆ ಹೆಚ್ಚಿನ ಸಂಖ್ಯೆಯಲ್ಲಿ ವಿಶೇಷ/ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಸಾರ್ವಜನಿಕ ಪ್ರಯಾಣಿಕರು ಇದರ ಸದುಪಯೋಗ ಪಡೆಯಬೇಕೆಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ಈ ಜಾತ್ರೆಗೆ ಹೋಗಲು ಒಟ್ಟಿಗೆ 50 ಜನ ಪ್ರಯಾಣಿಕರು ಇದ್ದಲ್ಲಿ, ಒಂದು ವಾಹನವನ್ನು ತಮ್ಮ ಗ್ರಾಮ/ಸ್ಥಳದಿಂದ ಎಲ್ಲಿಯೂ ನಿಲುಗಡೆ ಮಾಡದೇ ಬೈಪಾಸ್ ಮುಖಾಂತರ ನೇರವಾಗಿ ಶ್ರೀಶೈಲಂಗೆ ಕಾರ್ಯಾಚರಣೆ ಮಾಡಲಾಗುತ್ತಿದ್ದು, ಇದಕ್ಕಾಗಿ ಸಂಪರ್ಕಿಸಬೇಕಾದ ವಿಭಾಗೀಯ ಸಂಚಾರ ಅಧಿಕಾರಿಗಳ ದೂರವಾಣಿ ಸಂಖ್ಯೆಗಳ ವಿವರ ಕೆಳಕಂಡಂತೆ ಇರುತ್ತದೆ.

ಕಲಬುರಗಿ ವಿಭಾಗ-1-7760992102, ಕಲಬುರಗಿ ವಿಭಾಗ 2-7760984086, ಯಾದಗಿರ-7760992452, ಬೀದರ-7760992202, ರಾಯಚೂರು-7760992352, ಕೊಪ್ಪಳ-7760992402, ಬಳ್ಳಾರಿ-7760992152, ಹೊಸಪೇಟೆ-7760992302 ಹಾಗೂ ವಿಜಯಪುರ-7760992252ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

### ಯುಗಾದಿ ಹಬ್ಬದ ಪ್ರಯುಕ್ತ: ಹೆಚ್ಚುವರಿ ಬಸ್‌ಗಳ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.18:ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ-2ರ ವತಿಯಿಂದ ಇದೇ ಮಾರ್ಚ್ 21ರಿಂದ 31ರವರೆಗೆ ಯುಗಾದಿ ಹಬ್ಬದ ಪ್ರಯುಕ್ತ ಹಾಗೂ ಮಾರ್ಚ್ 30 ರಂದು ನಡೆಯುವ ರಥೋತ್ಸವಕ್ಕೆ ಸು-ಕ್ಷೇತ್ರ ಶ್ರೀಶೈಲ ಮಲ್ಲಿಕಾರ್ಜುನ ಸ್ವಾಮಿ ದರ್ಶನಕ್ಕೆ ಹೋಗುವ ಭಕ್ತಾದಿಗಳ ಅನುಕೂಲಕ್ಕಾಗಿ ಕೆಳಕಂಡ ಬಸ್ ನಿಲ್ದಾಣದಿಂದ /ಘಟಕಗಳಿಂದ ವಿಶೇಷ(ಹೆಚ್ಚಿನ) ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ವಿಭಾಗ-2ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

## ವೆಂಕಟ್ ಬೇನೂರ್ ಗ್ರಾಮದಲ್ಲಿ ಕೇಕ್ ಕತ್ತರಿಸುವ ಮೂಲಕ ಅಂತರಾಷ್ಟ್ರೀಯ ಮಹಿಳಾ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.18:ಕಲಬುರಗಿ ತಾಲೂಕಿನ ಭೂಪಾಲ್ ತಗನೂರು ಗ್ರಾಮ ಪಂಚಾಯತಿಯಲ್ಲಿ ಬರುವ ವೆಂಕಟ್ ಬೇನೂರ್ ಗ್ರಾಮದಲ್ಲಿ ಅಮೃತ ಸರೋವರ ಕೆರೆಯಲ್ಲಿ ನರೇಗಾ ಯೋಜನೆಯಡಿ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಮಹಿಳಾ ಕೂಲಿ ಕಾರ್ಮಿಕರೊಂದಿಗೆ ಮಂಗಳವಾರ ಕೇಕ್ ಕತ್ತರಿಸುವ ಮೂಲಕ ಅಂತರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕಲಬುರಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸೈಯದ್ ಪಟೇಲ್ ಅವರು ಮಾತನಾಡಿ, ನರೇಗಾ ಕಾಮಗಾರಿ ನಡೆಯುವ ಸ್ಥಳದಲ್ಲಿ 213 ಜನ ಕೂಲಿ ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದು, ಅವರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ಹಾಗೂ ಆರೋಗ್ಯ ಕಿಟ್ ವ್ಯವಸ್ಥೆ ಮಾಡಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಜನವಾದಿ ಮಹಿಳಾ ಸಂಘದ ಮುಖ್ಯಸ್ಥರಾದ ಕೆ. ನೀಲಾ ಅವರು ಮಾತನಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಮುತ್ತುರಾಜ್ ಸೇಳ್ಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸೂರ್ಯಕಾಂತ್, ಕಲಬುರಗಿ ಗ್ರಾಮ ಪಂಚಾಯತಿ ಐಇಸಿ ಸಂಯೋಜಕ ಮೋಸಿನ್ ಖಾನ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಸಿಬ್ಬಂದಿಗಳು ಸೇರಿದಂತೆ ಶರಣು ಕುಮಾರ್, ದಶರತ್ ಉಪಸ್ಥಿತರಿದ್ದರು.

## ಯುವನಿಧಿ ಫಲಾನುಭವಿಗಳು ಮೂರು ತಿಂಗಳಿಗೊಮ್ಮೆ (ತ್ರೈಮಾಸಿಕ) ಸ್ವಯಂ ಘೋಷಣೆಮಾಡಿಕೊಳ್ಳಲು ಸೂಚನೆ

ಕಲಬುರಗಿ,ಮಾ.18:ಯುವನಿಧಿ ಯೋಜನೆಯಡಿ ಪದವಿ ಮತ್ತು ಸ್ನಾತಕೋತರ ಪದವಿ ಹಾಗೂ ಡಿಪ್ಲೋಮಾವನ್ನು 2022-23ನೇ ಹಾಗೂ 2023-2024ನೇ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023/24 ರಲ್ಲಿ ತೇರ್ಗಡೆ-ಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು ಇದರ ಸದುಪಯೋಗಪಡೆದುಕೊಳ್ಳಬೇಕು ಮತ್ತು ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳ ಪೂರೈಸಿದ ನಂತರ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗವಿನಿಮಯ ಕಚೇರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ. ಅರ್ಹ ಅಭ್ಯರ್ಥಿಗಳು ಯುವನಿಧಿ ಯೋಜನೆಯ ಪ್ರಯೋಜನವನ್ನು ಪಡೆಯಬೇಕಾದರೆ, ಪ್ರತಿ ತಿಂಗಳ ಬದಲಾಗಿ ಇನ್ನು ಮುಂದೆ"ಪ್ರತಿ ಮೂರು ತಿಂಗಳಿಗೊಮ್ಮೆ"(ತ್ರೈಮಾಸಿಕ) ತಾನು ನಿರುದ್ಯೋಗಿಯೆಂದು ಮತ್ತು ವ್ಯಾಸಂಗವನ್ನು ಮುಂದುವರೆಸುತ್ತಿಲ್ಲವೆಂದು, ಸ್ವಯಂ ಘೋಷಣೆಯನ್ನು ಮಾಡಬೇಕು. ಅಭ್ಯರ್ಥಿಗಳು ಪ್ರತಿಮೂರು ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದಿಲ್ಲ. ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ ಸೀಡೆಡ್ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. https://sevasindhugs.karnataka.gov.in ವೆಬ್‌ಸೈಟ್‌ನಲ್ಲಿ ಸ್ವಯಂ ಘೋಷಣೆ ಮಾಡಿಕೊಳ್ಳಬೇಕು. ಉಳಿದಂತೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿ ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿ ಅಪ್ರೂವ್ ಆಗದ ಸಂದರ್ಭದಲ್ಲಿ ಸೂಚಿಸಲಟ್ಟ ಇಲಾಖೆಯ ಕಛೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಬೇಟಿ ನೀಡಿ ಅವುಗಳ ಜೀರಾಕ್ಸ್ ಪ್ರತಿಗಳನ್ನು ಸಲ್ಲಿಸಿ ಅಪ್ರೂವ್ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಹಾಗೂ ದೂರವಾಣಿ ಸಂ-ಖ್ಯೆ 08472-274846 ಗೆ ಸಂಪರ್ಕಿಸಲು ಕೋರಲಾಗಿದೆ.

## ಅನ್ನ ಭಾಗ್ಯ ಯೋಜನೆ: ಹಣ ಬದಲಾಗಿ ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.18:ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಅಂತ್ಯೋದಯ ಅನ್ನ (ಎಎವೈ) ಮತ್ತು ಆದ್ಯತಾ ಪಡಿತರ ಚೀಟಿ-ದಾರರ ಕುಟುಂಬದ ಮುಖ್ಯಸ್ಥರ ಬ್ಯಾಂಕ ಖಾತೆಗೆ ನೀಡುತ್ತಿರುವ ಹಣದ ಬದಲಾಗಿ 2025ರ ಫೆಬ್ರವರಿ ಮಾಹೆಯಿಂದ ಪ್ರತಿ ಸದಸ್ಯರಿಗೆ ಹೆಚ್ಚುವರಿಯಾಗಿ 05 ಕೆ.ಜಿ. ಅಕ್ಕಿ ವಿತರಿಸಲಾಗುತ್ತಿದ್ದು, ಕಲಬುರಗಿ ತಾಲೂಕಿನ ಎಲ್ಲಾ ಪಡಿತರ ಚೀಟಿದಾರರು ಸರ್ಕಾರ ನಿಗದಿಪಡಿಸಿದ ಪ್ರಮಾಣದಂತೆ ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿಯಿಂದ ಅಕ್ಕಿಯನ್ನು ಪಡೆಯಬೇಕೆಂದು ಕಲಬುರಗಿ ತಹಶೀಲ್ದಾರರಾದ ಕೆ. ಅನಂದಶೀಲ ಅವರು ತಿಳಿಸಿದ್ದಾರೆ. ಫೆಬ್ರವರಿ-2025ನೇ ಮಾಹೆಯ ಆಹಾರಧಾನ್ಯ ವಿತರಣೆಯು ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಫೆಬ್ರವರಿ-2025 ಹಾಗೂ ಮಾರ್ಚ-2025ನೇ ಮಾಹೆಯ ಎರಡು ತಿಂಗಳು ಸೇರಿ ಅಂತ್ಯೋದಯ ಅನ್ನ (ಎಎವೈ) ಪಡಿತರ ಚೀಟ 03 ಸದಸ್ಯರಿದ್ದರೆ 35 ಕೆ.ಜಿ., 04 ಸದಸ್ಯರಿಗೆ-45 ಕೆ.ಜಿ., 05 ಸದಸ್ಯರಿಗೆ-65 ಕೆ.ಜಿ, 6 ಸದಸ್ಯರಿಗೆ -85 ಕೆ.ಜಿ, 07 ಸದಸ್ಯರಿಗೆ - 105 ಕೆ.ಜಿ, 8 ಸದಸ್ಯರಿಗೆ-125 ಕೆ.ಜಿ, 9 ಸದಸ್ಯರಿಗೆ -145 ಕೆ.ಜಿ, 10 ಸದಸ್ಯರಿಗೆ -165 ಕೆ.ಜಿ, 11 ಸದಸ್ಯರಿಗೆ-185 ಕೆ.ಜಿ ಹಾಗೂ 12 ಸದಸ್ಯರಿಗೆ - 205 ಕೆ.ಜಿ ಯಂತೆ.. ಹಾಗೂ ಪ್ರತಿ ಆದ್ಯತಾ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 15 ಕೆ.ಜಿ ಯಂತೆ ಅಕ್ಕಿ ವಿತರಿಸಲಾಗುತ್ತದೆ.

ಕಡಿಮೆ ವಿತರಣೆಯ ಬಗ್ಗೆ ದೂರುಗಳಿದ್ದಲ್ಲಿ ಕಲಬುರಗಿ ತಹಸೀಲ್ದಾರ ಕಚೇರಿಯ ಆಹಾರ ಶಾಖೆಗೆ ದೂರು ನೀಡಬೇಕು. ಕಾರ್ಡ್‌ದಾರರು ಸರ್ಕಾರ ನೀಡುವ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದ್ದು ಕಂಡುಬಂದಲ್ಲಿ ಅಂತಹ ಕಾರ್ಡ್‌ಗಳನ್ನು ರದ್ದುಪಡಿಸಿ ಸಂಬಂಧಪಟ್ಟ ಕಾರ್ಡುದಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಅವರು ತಿಳಿಸಿದ್ದಾರೆ.

# ಸರ್ಕಾರಿ ಆಸ್ಪತ್ರೆಗಳಲ್ಲಿನ ಖಾಲಿ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಿ: ಶಾಸಕ ಪ್ರಭು ಚವ್ಹಾಣ ಆಗ್ರಹ


ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.18:ಕಮಲ ನಗರ ಹಾಗೂ ಔರಾದ(ಬಿ) ತಾಲ್ಲೂಕುಗಳಲ್ಲಿರುವ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ವೈದ್ಯರು ಹಾಗೂ ಮತ್ತಿತರೆ ಸಿಬ್ಬಂದಿಗಳ ಕೊರತೆಯಿಂದ ಜನತೆ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ವಿಧಾನಸಭಾ ಅಧಿವೇಶನದಲ್ಲಿ ಧ್ವನಿ ಎತ್ತಿದ್ದಾರೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ ಗುಂಡುರಾವ ಅವರನ್ನು ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಕೇಳಿದ್ದಾರೆ. ಇದಕ್ಕೆ ಲಿಖಿತವಾಗಿ ಉತ್ತರಿಸಿದ ಸಚಿವರು, ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕೆಲವೊಂದು ಷರತ್ತುಗಳಿಗೆ ಒಳಪಡಿಸಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡಲಾಗಿದೆ. ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಎಂದಿದ್ದಾರೆ.

ಕಲ್ಯಾಣ ಕರ್ನಾಟಕ ವೃಂದದಲ್ಲಿ ಖಾಲಿಯಿರುವ ವಿವಿಧ ವೃಂದದ ಒಟ್ಟು 320 ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ಸಮಿತಿಯ ಮುಖಾಂತರ ಕ್ರಮ ವಹಿಸಲಾಗುತ್ತಿದ್ದು, ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸುವ ಹಂತದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಕಲ್ಯಾಣ ಕರ್ನಾಟಕ ವೃಂದದಲ್ಲಿನ ಸಹಾಯಕ ಕೀಟ ಶಾಸ್ತ್ರಜ್ಞರ ಹುದ್ದೆಯನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಖಾಲಿಯಿರುವ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.



1205 ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹಾಗೂ 300 ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕೆಲವೊಂದು ಷರತ್ತಿಗೊಳಪಟ್ಟು ಅನುಮೋದನೆ ನೀಡಿದ್ದು, ಕರಡು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸುವ ಹಂತದಲ್ಲಿರುತ್ತದೆ.

ಖಾಲಿಯಿರುವ ಹುದ್ದೆಗಳಲ್ಲಿ ಗ್ರೂಪ್ ಡಿ ಹುದ್ದೆಗಳನ್ನು ಶೇ.30 ರಷ್ಟು ನಾನ್ ಕ್ಲಿನಿಕಲ್ ಶೇ. 45 ರಷ್ಟು ಗ್ರೂಪ್-ಡಿ ಹುದ್ದೆಗಳನ್ನು ಒಟ್ಟಾರೆಯಾಗಿ ಶೇ. 75ರಷ್ಟು ಮೀರದಂತೆ ಹೊರಗುತ್ತಿಗೆ ಮೂಲಕ ಟೆಂಡರ್ ಆಹ್ವಾನಿಸಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಿಗೆ ಜಿಲ್ಲಾಧಿಕಾರಿಗಳ ಅನುಮೋದನೆ ಪಡೆದು ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಇಲಾಖೆಯಲ್ಲಿ ಕಾಲಕಾಲಕ್ಕೆ ಹುದ್ದೆಗಳನ್ನು ನಿಯಮಾನುಸಾರ ನೇರ ಖಾಲಿಯಾಗುವ ನೇಮಕಾತಿ, ಮುಂಬಡ್ತಿ, ಗುತ್ತಿಗೆ ಆಧಾರದಡಿ ಹಾಗೂ ವರ್ಗಾವಣೆ ಮೂಲಕ ಭರ್ತಿ ಮಾಡಲಾಗುತ್ತಿದೆ ಎಂದು ಉತ್ತರದಲ್ಲಿ ತಿಳಿಸಿದ್ದಾರೆ.

ನಂತರ ಸಚಿವರನ್ನು ಭೇಟಿ ಮಾಡಿದ ಶಾಸಕರು, ಔರಾದ(ಬಿ) ಕ್ಷೇತ್ರವು ರಾಜ್ಯದ ಗಡಿಯಲ್ಲಿದ್ದು, ಡಾ.ನಂಜುಂಡಪ್ಪ ವರದಿಯಂತೆ ತೀವ್ರ ಹಿಂದುಳಿದ ಪ್ರದೇಶವಾಗಿದೆ. ಇಲ್ಲಿನ ಜನತೆ ಸರ್ಕಾರಿ ಆಸ್ಪತ್ರೆಗಳನ್ನೇ ಅವಲಂಬಿಸಿದ್ದಾರೆ. ಆದರೆ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಮತ್ತಿತರೆ ಹುದ್ದೆಗಳು ಖಾಲಿ ಇರುವುದರಿಂದ ಜನತೆಗೆ ಸರಿಯಾಗಿ ಚಿಕಿತ್ಸೆ ಸಿಗುತ್ತಿಲ್ಲ. ಸಣ್ಣಪುಟ್ಟ ರೋಗಗಳಿಗೂ ಜಿಲ್ಲಾ ಕೇಂದ್ರದ ಆಸ್ಪತ್ರೆಗಳಿಗೆ ಹೋಗಬೇಕಾದ ಪರಿಸ್ಥಿತಿಯಿದೆ. ಗಂಭೀರ ಸ್ವರೂಪದ ಸಮಸ್ಯೆಗೆ ಸಕಾಲಕ್ಕೆ ಚಿಕಿತ್ಸೆ ಸಿಗದೇ ಅನೇಕರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ವಿಷಯದ ಗಂಭೀರತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ವೈದ್ಯರು ಹಾಗೂ ಮತ್ತಿತರೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವಂತೆ ಸರ್ಕಾರಕ್ಕೆ ಅನೇಕ ಸಲ ಪತ್ರ ಬರೆದಿದ್ದೇನೆ. ಯಾವುದೇ ಪ್ರಯೋಜನವಾಗಿಲ್ಲ. ಆರೋಗ್ಯ ವಿಷಯವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಬಡ ಜನತೆಯ ಹಿತದೃಷ್ಟಿಯಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಎಲ್ಲ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಿಕೊಳ್ಳಬೇಕೆಂದು ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸರ್ಕಾರವನ್ನು ಆಗ್ರಹಿಸಿದ್ದಾರೆ.

# ಸಮೃದ್ಧ ಸಮಾಜ ನಿರ್ಮಾಣದಲ್ಲಿ ಮಹಿಳೆಯ ಪಾತ್ರ ಮಹತ್ವದಾಗಿದೆ-ಬೆಲ್ದಾಳೆ.



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ವಿಕಾಸಿತ ಸಮೃದ್ಧಭಾರತನಿರ್ಮಾಣದಲ್ಲಿ ಮಹಿಳೆಯಪಾತ್ರಮಹತ್ವದಾಗಿದೆ ಎಂದು ಕರ್ನಾಟಕ ರಾಜ್ಯ ಮಹಿಳಾಸಹಕಾರಮಹಾಮಂಡಳ ನಿ., ಬೆಂಗಳುರು ಇದರ ಅಧ್ಯಕ್ಷರು ಹಾಗೂ ಬೀದರ ಡಿಸಿಸಿ ಬ್ಯಾಂಕ ನಿರ್ದೇಶಕರಾದ ಶ್ರೀಮತಿ ಶಕುಂತಲಾ ಬೆಲ್ದಾಳೆ ಇವರು ತಿಳಿಸಿದರು. ಇಂದು ಪ್ರಾಂತೀಯ ಕಛೇರಿ ತರಬೇತು ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ಬೆಂಗಳೂರು ಪ್ರಾಂತೀಯ ಕಛೇರಿ ಕಲಬುರಗಿ ವತಿಯಿಂದ ಆಯೋಜಿಸಿದ ಅಂತರಾಷ್ಟ್ರೀಯ ಮಹಿಳಾ ದಿನಾಚಾರಣೆ–2025ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅನೇಕ ಮಹಿಳೆಯರಿಗೆ ಸ್ವಾಭಿಮಾನದ ಬದುಕುನಡೆಸಲುಸಾಧ್ಯವಾಗುತ್ತಿಲ್ಲ ಇನ್ನೊಬ್ಬರ ಆಶ್ರೇಯದಲ್ಲಿ ಬದಕು ನಡೆಸುವ ಸ್ಥಿತಿ ಇಂದಿಗೂ ಕಾಣುತ್ತೆವೆ. ಅನೇಕ ಸ್ಥಳಿಯ ಸಂಸ್ಥೆಯ ಚುನಾವಣೆಯಲ್ಲಿ ಮಹಿಳಾ ಮೀಸಲು ಕ್ಷೇತ್ರದಿಂದ ಗೆದ್ದು ಬಂದ ನಂತರವು ಮಹಿಳೆಯರ ಪರವಾಗಿ ಅವರ ಪತಿ ಅಥವಾ ಮಗ ಅಧಿಕಾರ ಚಲಾಯಿಸುವುದು ಕಾಣುತ್ತೇವೆ ಎಂದು ತಿಳಿಸಿದರು. ಮಹಿಳೆ ಸ್ವಾವಲಂಬಿ ಜೀವನ ಕಟ್ಟಿಕೊಳ್ಳಲು ಕೇವಲ ಶಿಕ್ಷಣದಿಂದ ಮಾತ್ರ ಸಾಧ್ಯ, ಶಿಕ್ಷಣ ಪಡೆದು, ಉದ್ಯೋಗ ಮಾಡುವ ಮೂಲಕ ಸ್ವಾವಲಂಬನೆ ಬದಕು ಕಟ್ಟಿಕೊಳ್ಳಬೇಕು ಎಂದು ಕರೆ ನೀಡಿದರು. ಇಂದಿನ ಆಧುನಿಕ ಯುಗದಲ್ಲಿ ಮಹಿಳೆ ಅಂತರಾಷ್ಟ್ರೀಯ ಬಾಹ್ಯಕಾಶದಲ್ಲಿ ತಿಂಗಳ ಗಟ್ಟಲೆ ಉಳಿದು ಬರುವ ಸಾಮರ್ಥ ಮಹಿಳೆ ಹೊಂದಿದ್ದಾಳೆ ಎಂದು ಹರ್ಷ ವ್ಯಕ್ತ ಪಡಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಸಂಯುಕ್ತ ಸಹಕಾರಿಯ ರಾಜ್ಯ ನಿರ್ದೇಶಕ ಗುರುನಾಥ ಜ್ಯಾಂತೀಕರ್ ಮಾತನಾಡಿ ಇಂದಿನ ಯಾರ ಮನೆಯಲ್ಲಿ ಮಹಿಳೆಯನ್ನು ಪೂಜ್ಯ ಭಾವನೆಯಿಂದ ಗೌರವದಿಂದ ನೋಡುತ್ತಾರೆ ಅವರ ಮನೆಯಲ್ಲಿ ದೇವತೆಗಳು ನೇಲೆಸುತ್ತಾರೆ ಕುಟುಂಬದ ಆರೋಗ್ಯ ಮಹಿಳೆಯರ ಕೈಯಲ್ಲಿದೆ ಮಹಿಳೆ ಯಾವುದಕ್ಕೂ ಕಡಿಮೆ ಇಲ್ಲ ಪುರುಷರಂತೆ ಸಮಾನವಾಗಿ ಕಾಣಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾದ ಸಂಯುಕ್ತ ಸಹಕಾರಿಯ ರಾಜ್ಯ ಮಾಜಿ ನಿರ್ದೇಶಕ ಸಂಜೀವ ಮಹಾಜನ ಮಾತನಾಡಿ ಸಹಕಾರಿ ಸಂಸ್ಥೆಗಳ ಮೂಲಕ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಧ್ಯವೆಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಂಯುಕ್ತ ಸಹಕಾರಿಯ ರಾಜ್ಯ ನಿರ್ದೇಶಕರಾದ ಶ್ರೀಮತಿ ಶೈಲಜಾ ತಪಲಿ ಮಾತನಾಡಿ ಮಹಿಳೆಗೆ ಸಾಧನೆ ಮಾಡುವ ಛೇಲ ಇರಬೇಕು ಆಗ ಮಾತ್ರ ಸಮಾಜದಲ್ಲಿ ಸ್ವಾಭಿಮಾನದ ಬದುಕು ನಡೆಸಲು ಸಾಧ್ಯ. ಸಿಕ್ಕಿರುವ ಅವಕಾಶಗಳನ್ನು ಬಳಸಿಕೊಂಡು ತನ್ನ ಕುಟುಂಬ ಸಮಾಜವನ್ನು ಕಟ್ಟಲು ಸಾಧ್ಯವೆಂದು ತಿಳಿಸಿದರು. ಕುಟುಂಬದ ಆರೋಗ್ಯ ಮಹಿಳೆಯರ ಕೈಲ್ಲಿದೆ ತಮ್ಮ ಮನೆಯಲ್ಲಿ ಉತ್ತಮ ವಾತಾವರಣ ನಿರ್ಮಿಸುವ ಜವಾಬ್ದಾರಿ ಮಹಿಳೆಯ ಮೇಲಿದೆ ಎಂದು ತಿಳಿಸಿದರು.

ಸಮಾಜದಲ್ಲಿ ಮಹಿಳೆ ಸ್ವಾಭಿಮಾನದ ಬದುಕು ನಡೆಸುವ ಜೀವನ ಕ್ರಮದಲ್ಲಿನ ಬದಲಾವಣೆಯ ಕುರಿತು ಉಪನ್ಯಾಸಕರಾದ ಡಾ. ನಿರ್ಮಲಾ ಕೆಳಮನಿ ಇವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಬೀದರ ಜಿಲ್ಲೆಯಿಂದ ಶಿಕ್ಷಣ ಕ್ಷೇತ್ರದಲ್ಲಿನ ಸೇವೆಗಾಗಿ ಶ್ರೀಮತಿ ಸುವರ್ಣ ಹೊಸಮನಿ, ಸ್ವ–ಯಂ ಉದ್ಯೋಗದಲ್ಲಿ ಶ್ರೀಮತಿ ಹೇಮಾವತಿ ಪಾಕಲ್ ಕಲಬುರಗಿ ಜಿಲ್ಲೆಯಿಂದ ಸಾಹಿತ್ಯ ಕ್ಷೇತ್ರದಲ್ಲಿ ಡಾ. ಅಂಬುಜಾ ಮಳಖೇಡ್ಕರ್, ಸಮಾಜ ಸೇವೆಯಲ್ಲಿ ಶ್ರೀಮತಿ ಲಕ್ಷ್ಮಿ ಸಿಂಪಿ, ಯೋಗ ಕ್ಷೇತ್ರದಲ್ಲಿ ಶ್ರೀಮತಿ ಸುಮಂಗಲಾ ಚಕ್ರವರ್ತಿ, ಆರೋಗ್ಯ ಕ್ಷೇತ್ರದಲ್ಲಿ ಡಾ. ಅರುಂಧತಿ ಪಾಟೀಲ್, ಕೃಷಿ ಕ್ಷೇತ್ರದಲ್ಲಿ ಪ್ರಗತಿ ಪರ ರೈತ ಮಹಿಳೆ ಶ್ರೀಮತಿ ಜ್ಯೋತಿ ಎಸ್ ಪಾಟೀಲ್, ಸಿಬ್ಬಂದಿಗಳಾದ ಶ್ರೀದೇವಿ ಮತ್ತು ಲಕ್ಷ್ಮೀ ಇವರನ್ನ ಸನ್ಮಾನಿಸಲಾಯಿತ್ತು

ಪ್ರಾಸ್ತಾವಿಕ ನುಡಿಯನ್ನು ಪ್ರಾಂತೀಯ ವ್ಯವಸ್ಥಾಪಕ ಸೂರ್ಯಕಾಂತ ರಾಕಲೇ ನುಡಿದರು, ಶ್ರೀದೇವಿ ಇವರು ಸ್ವಾಗತಿಸಿದರು, ಸೌಹಾರ್ದ ಅಭಿವೃದ್ಧಿ ಅಧಿಕಾರಿ ವೀರಶಟ್ಟಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಸಿಬ್ಬಂದಿಗಳಾದ ಪವನಕುಮಾರ, ಆನಂದ, ಮಾಳಪ್ಪ, ಅಂಬುಲಾಲ, ರಾಜಕುಮಾರ ಉಪಸ್ಥಿತರಿದ್ದರು. ಬೀದರ, ಕಲಬುರಗಿ ಮತ್ತು ಯಾದಗಿರ ಜಿಲ್ಲೆಯ ಸಹಕಾರ ಸಂಘಗಳ ಮಹಿಳಾ ಪ್ರತಿನಿಧಿಗಳು ಸಿಬ್ಬಂದಿಗಳು ಭಾಗವಹಿಸಿದರು.

# ಎಚ್.ಐ.ವಿ. ಏಡ್ಸ್. ಹಾಗೂ ರಕ್ತದಾನ ಶಿಬಿರ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 19 ನಗರದ ಎಸ್ ಎಸ್ ಕೆ ಬಸವೇಶ್ವರ ಕಲಾ,ವಿಜ್ಞಾನ, ವಾಣಿಜ್ಯ,ಸ್ನಾತಕ ಮತ್ತು ಸ್ನಾತ–ಕೋತ್ತರ ಮಹಾವಿದ್ಯಾಲಯದಲ್ಲಿ ರೆಡ್ ರಿಬ್ಬನ್ ಕ್ಲಬ್ ವತಿಯಿಂದ ಕರ್ನಾಟಕ ರಾಜ್ಯ ಏಡ್ಸ್ ಪ್ರೀವೆನಷ ಸೊಸೈಟಿ ಬೆಂಗಳೂರು, ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ ಬೀದರ್ ಮತ್ತು ಎಸ್ ಎಸ್ ಕೆ ಬಸವೇಶ್ವರ ಕಲಾ, ವಿಜ್ಞಾನ, ವಾಣಿಜ್ಯ, ಸ್ನಾತಕ ಮತ್ತು ಸ್ನಾತಕೋತ್ತರ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಎಚ್,ಐ,ವಿ ಏಡ್ಸ್ ಹಾಗೂ ರಕ್ತದಾನ ಶಿಬಿರದ ಕಾರ್ಯಕ್ರಮ ಜರುಗಿ–ತು. ಮುಖ್ಯ ಅತಿಥಿಯಾಗಿ ಡಾ. ಮಹೇಶ್ವರಿ ಮೆಡಿಕಲ್ ಆಫೀಸರ್ ಮಾತನಾಡಿ ಇಂದಿನ ಕಾಲದಲ್ಲಿ ಏಡ್ಸ್ ರೋಗವನ್ನು ನಿಯಂತ್ರಿಸುವುದು ಹಾಗೂ ಅದನ್ನು ತಡೆಗಟ್ಟಲು ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳುವುದು ಪ್ರಮುಖವಾಗಿದೆ ಎಂದು ತಿಳಿಸಿದರು. ಅತಿಥಿಯಾಗಿ ಡಾ. ಶಿವಲೀಲಾ ಪಾಟೀಲ್ ಐ.ಟಿ.ಟಿ ಸಿ. ಸಂಯೋಜಕರು ಮಾತನಾಡಿ ಏಡ್ಸ್ ರೋಗದ ಬಗ್ಗೆ ಜನರಲ್ಲಿರುವ ಭಾವನೆ ಹೋಗಲಾಡಿಸಲು ಹಾಗೂ ಅವರಲ್ಲಿ ಅರಿವು ಮೂಡಿಸಲು ಇಂಥ ಕಾರ್ಯಕ್ರಮಗಳು ಅವಶ್ಯಕವಾಗಿವೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ ಐ ಕ್ಯೂ ಎಸಿ ಸಂಯೋಜಕರಾದ ಡಾ. ಶಿವಕುಮಾರ್ ಪಾಟೀಲ್ ಮಾತನಾಡಿ ಎಚ್ ಐ ವಿ ಏಡ್ಸ್ ರೋಗ ಬರಲು ಕಾರಣ ಹಾಗೂ ಅದನ್ನು ತಡೆಗಟ್ಟುವ ಕುರಿತು ಹಲವು ವಿಧಾನಗಳ ತಿಳಿಸಿದರು. ಅಲ್ಲದೆ ರಕ್ತದಾನ ಮಾಡುವುದರಿಂದ ಅನೇಕ ರಕ್ತದ ಗುಂಪುಗಳು ಬ್ಲಡ್ ಬ್ಯಾಂಕ್ ನಲ್ಲಿ ಸಂಗ್ರಹಿಸುವುದರ ಜೊತೆಗೆ ಜೊತೆಗೆ ರಕ್ತದ ಕೊರತೆಯಿಂದ ಬಳಲುತ್ತಿರುವ ಅನೇಕ ರೋಗಿಗಳ ಜೀವ ಉಳಿಸಲು ಸಹಕಾರಿಯಾಗುತ್ತದೆ. ಈ ರಕ್ತದಾನದ ಮಹಾ ದಾನ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಎಚ್ ಐ ವಿ ಏಡ್ಸ್ ಹಾಗೂ ರಕ್ತದಾನ ಶಿಬಿರದ ಕುರಿತು ಭಾಷಣ ಸ್ಪರ್ಧೆ ಏರ್ಪಡಿಸಲಾಯಿತು. ಭಾಷಣ ಸ್ಪರ್ಧೆಯಲ್ಲಿ ಅಶ್ವಿನಿ ಪ್ರಥಮ, ಅರ್ಪಿತ ದ್ವಿತೀಯ, ಕು. ಸಾಕ್ಷಿ ತೃತೀಯ, ಬಹುಮಾನ ಪಡೆದುಕೊಂಡರು. ಈ ಸಂದರ್ಭದಲ್ಲಿ ಎನ್.ಎಸ್.ಎಸ್. ಅಧಿಕಾರಿಗಳಾದ ಡಾ ಸುರೇಶ್ ಎಚ್ ಆರ್, ಪ್ರೊ.ವಿಠೋಬಾ ಡೊಣ್ಣೆ ಗೌಡರ, ಪ್ರೊ. ಲಕ್ಷ್ಮಿ ಬಾಯಿ ಬಂಕೂರ, ಆನಂದ್ ಎಂ, ಆನಂದ್ ಬಿರಾದಾರ್, ಬೋಧಕ ಮತ್ತು ಬೋಧ–ಕೇತರಿಸಿ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಅಂಬಿಕಾ ಪ್ರಾರ್ಥನೆ ಗೀತೆ. ರಾಸಾಯನ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಕೆ. ಬಿ. ರಮೇಶ ಸ್ವಾಗತಿಸಿದರು. ಕು. ನೇತ್ರ ವಿ. ನಿರೂಪಿಸಿದರು. ಉಪನ್ಯಾಸಕರಾದ ಮಹಾದೇವ ಡಿ. ವಂದಿಸಿದರು.

### ಸಹಕಾರ ಇಲಾಖೆ: ಸಂಘ ಸಂಸ್ಥೆಗಳ

# ನವೀಕರಣ/ಫೈಲಿಂಗ್ ಮಾಡಲು ಡಿ.31ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.18– ಸಹಕಾರ ಇಲಾಖೆ ಇಲಾಖೆಯಿಂದ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರಡಿ ನೋಂದಣಿಗೊಂಡ ಸಂಘ ಸಂಸ್ಥೆಗಳ ನವೀಕರಣ ಅಥವಾ ಫೈಲಿಂಗ್ ಮಾಡದೇ ಇರುವವರು 2025ರ ಡಿ.31ರ ಅಂತ್ಯದೊಳಗಾಗಿ ನವೀಕರಿಸಲು ಅಥವಾ ಫೈಲಿಂಗ್ ಮಾಡಲು ಅನುಮತಿ ನೀಡಲಾಗಿದೆ.

ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರಡಿ ನೋಂದಣಿಯಾದ ಪ್ರತಿಯೊಂದು ಸಂಘವು ಪ್ರತಿ ವರ್ಷ ನವೀಕರಣಗೊಳ್ಳಬೇಕಾಗಿದ್ದು, ಕಲಂ 13ರಂತೆ ಸಂಘ ಸಂಸ್ಥೆಗಳು 05 ವರ್ಷಗಳಿಗೂ ಮೇಲ್ಪಟ್ಟು ನವೀಕರಿಸದೇ ಅಥವಾ ಫೈಲಿಂಗ್ ಮಾಡದೇ ಇರುವ ಸಂಘ ಸಂಸ್ಥೆಗಳ ಸದಸ್ಯರ ಹಿತದೃಷ್ಟಿಯಿಂದ ಮತ್ತೊಂದು ಬಾರಿ ದಂಡ ವಿಧಿಸಿ ನವೀಕರಿಸಲು ಅಥವಾ ಫೈಲಿಂಗ್ ಮಾಡಲು ಅನುಮತಿ ನೀಡಲಾಗಿದೆ. 05 ವರ್ಷಗಳಿಗೆ ಮೇಲ್ಪಟ್ಟು ಫೈಲಿಂಗ್ ಮಾಡಿಕೊಳ್ಳದೇ ಬಾಕಿ ಇರುವ ಸಂಘ ಸಂಸ್ಥೆಗಳು ಪ್ರತಿ ವರ್ಷಕ್ಕೆ ರೂ.3,000/– ಹೆಚ್ಚುವರಿ ದಂಡ ಪಾವತಿಸಿ ಫೈಲಿಂಗ್ ಮಾಡಿಕೊಳ್ಳತಕ್ಕದ್ದು. ಈ ಅವಕಾಶ ದಿನಾಂಕ:31–12–2025ರ ಅಂತ್ಯದವರೆಗೆ ಜಾರಿಯಲ್ಲಿರುತ್ತದೆ. ನಂತರ 05 ವರ್ಷಗಳಿಗೆ ಮೇಲ್ಪಟ್ಟು ಬಂದ ಸಂಘ ಸಂಸ್ಥೆಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಎಲ್ಲಾ ದಾಖಲಾತಿಗಳನ್ನು ಸಹಕಾರ ಸಂಘಗಳ ಉಪ ನಿಬಂಧಕರು, ಹಾಗೂ ಸಂಘ ಸಂಸ್ಥೆಗಳ ಜಿಲ್ಲಾ ನೋಂದಣಾಧಿಕಾರಿಗಳು ರಾಯಚೂರು ಈ ಕಚೇರಿಗೆ ಸಲ್ಲಿಸತಕ್ಕದ್ದು. 05 ವರ್ಷಗಳ ಫೈಲಿಂಗ್ ಮಾಡಿಕೊಳ್ಳದೇ ಇರುವ ಸಂಘ/ಸಂಸ್ಥೆಗಳು ಕಡ್ಡಾಯವಾಗಿ ದಿನಾಂಕ:31–12–2025ರೊಳಗೆ ಫೈಲಿಂಗ್ ಮಾಡಿಕೊಳ್ಳಬೇಕು. ತಪ್ಪಿದರೆ ಫೈಲಿಂಗ್ ಮಾಡಿಕೊಳ್ಳದೇ ಇರುವ ಸಂಘ ಸಂಸ್ಥೆಗಳು ನೋಂದಣಿ ರದ್ದತಿಗೆ ಕ್ರಮ ಕೈಗೊಳ್ಳಲಾಗುವುದು.

ರಾಯಚೂರು ಜಿಲ್ಲೆಯಲ್ಲಿ ನೋಂದಣಿಯಾಗಿರುವ ಸೊಸೈಟಿಗಳು/ಸಂಘ ಸಂಸ್ಥೆಗಳು ಮೇಲ್ಕಂಡ ಷರತ್ತುಗಳ ಅನುಸಾರ ಸದರುಪಯೋಗ ಪಡೆದುಕೊಳ್ಳಬೇಕೆಂದು ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿ ವಿಳಾಸ : # ಮನೆ ನಂ.1–11–38/50, ಲಿಂಗಸೂಗೂರು ರಸ್ತೆ, ಬಸವೇಶ್ವರ ಕಾಲೋನಿ, ರಾಯಚೂರು ದೂರವಾಣಿ ಸಂಖ್ಯೆ: 08532–221665ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕು ಸಾಹಿತ್ಯ ಸಮ್ಮೇಳನ ಲಾಂಛನ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇದೇ ಮಾರ್ಚ್ 23ರಂದು ಹಲಗೇರಿ ಗ್ರಾಮದಲ್ಲಿ ಆಯೋಜಿಸಿರುವ 10 ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಲಾಂಛನ ಬಿಡುಗಡೆ ಹಾಗೂ ಸಮ್ಮೇಳನಾಧ್ಯಕ್ಷೆ ಮಾಲಾ ಬಡಿಗೇರ ಅವರಿಗೆ ಸನ್ಮಾನ ಜರುಗಿತು. ನಗರದ ಪ್ರವಾಸಿ ಮಂದಿರದಲ್ಲಿ ಸಂಜೆ ನಡೆದ ಸರಳ ಕಾರ್ಯಕ್ರಮದಲ್ಲಿ ಶಾಸಕರು ಹಾಗೂ ಸಮ್ಮೇಳನ ಸ್ವಾಗತ ಸಮಿತಿ ಅಧ್ಯಕ್ಷರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಲಾಂಛನ ಬಿಡುಗಡೆ ಮಾಡಿ, ಸಮ್ಮೇಳನಾಧ್ಯಕ್ಷೆ ಮಾಲಾ ಬಡಿಗೇರ ಅವರನ್ನು ಸನ್ಮಾನಿಸಿ ಗೌರವಿಸಿದರು. ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಮಾತನಾಡಿ, ಭಾಷೆ, ನೆಲ–ಜಲದ ಬಗ್ಗೆ ಜಾಗೃತಿ ಮೂಡಿಸಲು ಸಾಹಿತ್ಯ ಸಮ್ಮೇಳನಗಳು ಅವಶ್ಯ. ಹಲಗೇರಿ ಗ್ರಾಮದಲ್ಲಿ ತಾಲೂಕು ಮಟ್ಟದ ಸಾಹಿತ್ಯ ಸಮ್ಮೇಳನ ಯಶಸ್ವಿಗೊಳಿಸಿ, ನಾಡಹಬ್ಬವಾಗಿ ಆಚರಿಸಲು ತಾಲ್ಲೂಕಿನ ಎಲ್ಲಾ ಅಧಿಕಾರಿಗಳ ಸಭೆ ಕರೆದು ಸೂಚನೆ ನೀಡುವುದಾಗಿ ಹೇಳಿದರು. ಸಮ್ಮೇಳನ ಸರ್ವಾಧ್ಯಕ್ಷೆ ಮಾಲಾ ಬಡಿಗೇರ ಮಾತನಾಡಿ, ಮಹಿಳೆಗೆ ಸಮ್ಮೇಳನ ಅಧ್ಯಕ್ಷತೆ ನೀಡಿರುವುದು ಸಂತಸ ತಂದಿದೆ. ಮಹಿಳೆಯರ ಆಶೋತ್ತರಗಳಿಗೆ ಧ್ವನಿಯಾಗುತ್ತೇನೆ ಎಂದರು.

ಸಾಹಿತಿ, ಸ್ವಾತಂತ್ರ್ಯ ಹೋರಾಟಗಾರ ಡಾ.ಪಂಚಾಕ್ಷರಿ ಹಿರೇಮಠ ಅವರ ನಿಧನಕ್ಕೆ ಇದೇ ಸಂದರ್ಭದಲ್ಲಿ ಮೌನ ಆಚರಿಸಿ, ಸಂತಾಪ ವ್ಯಕ್ತಪಡಿಸಲಾಯಿತು.

ತಾಲೂಕು ಕಸಾಪ ಅಧ್ಯಕ್ಷ ರಾಮಚಂದ್ರಗೌಡ ಬಿ.ಗೊಂಡಬಾಳ, ನಿಕಟಪೂರ್ವ ಸಮ್ಮೇಳನಾಧ್ಯಕ್ಷ ಶರಣಪ್ಪ ಬಾಚಲಾಪುರ, ಸಾಹಿತಿ ಡಾ. ಮಹಾಂತೇಶ ಮಲ್ಲನಗೌಡ್ರ, ಸಂಶೋಧಕ ಡಾ.ಸಿದ್ಧಲಿಂಗಪ್ಪ ಕೊಟ್ನೇಕಲ್, ವಾರ್ತಾ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಡೊಳ್ಳಿನ, ಪತ್ರಕರ್ತರಾದ ಸೋಮರೆಡ್ಡಿ ಅಳವಂಡಿ, ಹುಸೇನ್ ಪಾಷಾ, ಹನುಮಂತ ಹಳ್ಳಿಕೇರಿ, ಡಾ.ಶ್ರೀನಿವಾಸ ಹ್ಯಾಟಿ, ಕಸಾಪ ಪದಾಧಿಕಾರಿಗಳಾದ ಸಂತೋಷ ದೇಶಪಾಂಡೆ , ರಮೇಶ ತುಪ್ಪದ, ಮಲ್ಲಿಕಾರ್ಜುನ ಹ್ಯಾಟಿ, ಮಾರುತೇಶ ಅಂಗಡಿ, ಬಸವರಾಜ ಕರುಗಲ್, ನಾಗರಾಜನಾಯಕ ಡಿ.ಡೊಳ್ಳಿನ, ಶರಣು ಡೊಳ್ಳಿನ, ಸೋಮನಗೌಡ ವಗರನಾಳ, ಮತ್ತಿತರರು ಇದ್ದರು.

ಲಾಂಛನ: ಹಲಗೇರಿ ಗ್ರಾಮ ದೇವತೆ ಶಾಂಭವಿ ದೇವಿಯನ್ನು ಕೇಂದ್ರವಾಗಿಟ್ಟುಕೊಂಡು, ಸಾಮ್ರಾಟ ಅಶೋಕನ ಶಿಲಾಶಾಸನ, ಕೊಪ್ಪಳ ಕೋಟೆ, ಜೈನ ಬಸದಿ, ತೊಗಲು ಗೊಂಬೆ, ಕಿನ್ನಾಳ ಕಲೆ, ಹುಲಿಗೆಮ್ಮ ದೇವಿ, ಜೀವನಾಡಿ ತುಂಗಭದ್ರಾ ಜಲಾಶಯ, ಗವಿಮಠ, ಸಾಮರಸ್ಯ ತಾಣ ಮರ್ದಾನ ಅಲಿ ದರ್ಗಾದ ಭಾವಚಿತ್ರಗಳ ಮೇಲ್ಭಾಗದಲ್ಲಿ ಕನ್ನಡ ತಾಯಿ ಭುವನೇಶ್ವರಿ ಹಾಗೂ ನಾಡಧ್ವಜಗಳನ್ನು ಒಳಗೊಂಡಂತೆ ರಮೇಶ್ ತುಪ್ಪದ ಹಾಗೂ ಶರಣು ಡೊಳ್ಳಿನ ವಿನ್ಯಾಸಗೊಳಿಸಿದ್ದಾರೆ.



CITATION

IN THE COURT OF THE PRL.CIVIL JUDGE AND JMFC., AT HUMNABAD

CRL. MISC. NO 44/2025

**Petitioner's :-**

1. Padmavati W/o Late Baburao Age. 61 R/o Koliwada HUMNABAD DIST. BIDAR
2. Pavan S/o Late Baburao Age. 33 R/o Koliwada HUMNABAD DIST. BIDAR

**Respondent:-**

THE CHIEF REGISTRAR OF BIRTH AND DEATH THROUGH THE TMC OFFICE HUMNABAD .

Sub:- Petition U/Sec 13(3) of Birth and Death Registration Act 1969

Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificates of **Baburao S /o Lakshman Rao** Who died on **14.04. 2017** The petitioner claiming the death certificate of Petitioner No.1 is wife and Petitioner No. 2 is son for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on **23.04.2025 at 11.00 AM** in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the **14.03.2025**

//By order of the court//

Chief Ministerial Officer,
Prl. Civil Judge and JMFC court
Humnabad.

Chief Ministerial Officer
Prl. Civil Judge & JMFC Court
Humnabad

# ರಾಹುಲ್ ರಜಪೂತಗೆ 'ಕಾವ್ಯಶ್ರೀ ಪ್ರಶಸ್ತಿ' ಪ್ರಧಾನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಫತ್ತೇಪುರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಪಟ್ಟಣದ ಯುವ ಕವಿ ರಾಹುಲ್ ರಜಪೂತ ಇವರಿಗೆ ಕರ್ನಾಟಕ ರಾಜ್ಯ ಬರಹಗಾರರ ಸಂಘ (ರಿ) ಹೂವಿನ ಹಡಗಲಿ ಇವರು ಕೊಡಮಾಡುವ ರಾಷ್ಟ್ರಮಟ್ಟದ ಕನ್ನಡನುಡಿ ವೈಭವ–2025ರ "ಕಾವ್ಯಶ್ರೀ ಪ್ರಶಸ್ತಿ" ಪ್ರಧಾನ ಮಾಡಿ ಗೌರವಿಸಲಾಗಿದೆ. ಸಂಘದ 5 ನೇ ವರ್ಷಾಚರಣೆ ಸವಿನೆನಪಿಗಾಗಿ ಶಿವಮೊಗ್ಗ ನಗರದಲ್ಲಿ ದಿನಾಂಕ 16–3–2025 ರಂದು ನಡೆದ ರಾಷ್ಟ್ರಮಟ್ಟದ ಕನ್ನಡ ನುಡಿ ವೈಭವ ಕಾರ್ಯಕ್ರಮದಲ್ಲಿ ರಾಹುಲ್ ರಜಪೂತ ಅವರಿಗೆ ಅವರು ರಚಿಸಿದ ಅತ್ಯುತ್ತಮ ಕವನಕ್ಕಾಗಿ ಈ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗಿದೆ. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಬರಹಗಾರರ ಸಂಘದ ಸಂಸ್ಥಾಪಕ ಅಧ್ಯಕ್ಷ ಮಧು ನಾಯಕ್, ಶಿವಮೊಗ್ಗ ಜಿಲ್ಲಾಧ್ಯಕ್ಷ ರಾಮು ಎನ್. ರಾಥೋಡ(ಮಸ್ಕಿ) ಹಾಗೂ ಹಲವಾರು ಗಣ್ಯಮಾನ್ಯರು ಇದ್ದರು. ಅಭಿನಂದನೆ: ಪಟ್ಟಣದ ಯುವ ಕವಿಗಳಾದ ರಾಹುಲ್ ರಜಪೂತ ಇವರಿಗೆ ಕಾವ್ಯಶ್ರೀ ಪ್ರಶಸ್ತಿ ಪ್ರಧಾನ ಮಾಡಿರುವುದಕ್ಕೆ ಅಂಬೇಡ್ಕರ್ ಸೇನೆ ಅಧ್ಯಕ್ಷ ಗೋಪಾಲ್ ಕಟ್ಟಿಮನಿ ಹಾಗೂ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

# ಚೀನಕೇರಾ: ಶ್ರೀ ಜಗದ್ಗುರು ರೇವಣಸಿದ್ಧೇಶ್ವರ 8ನೇ ಜಾತ್ರಾ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ ತಾಲೂಕಿನ ಚೀನಕೇರಾದ ನಂದಿ ಬೆಟ್ಟದಲ್ಲಿ ಶ್ರೀ ಜಗದ್ಗುರು ರೇವಣಾಸಿದ್ಧೇಶ್ವರ 8ನೇ ಜಾತ್ರಾ ಮಹೋತ್ಸವ ನಡೆಯಲಿದೆ. 19 ರಂದು ಬೆಳಗ್ಗೆ 8 ಗಂಟೆಗೆ ಗ್ರಾಮದಿಂದ ನಂದಿ ಬೆಟ್ಟದವರೆಗೆ ಶ್ರೀ ಜಗದ್ಗುರು ರೇವಣಸಿದ್ಧರ ಭಾವಚಿತ್ರ ಮತ್ತು ಪಲ್ಲಕಿ ಉತ್ಸವ ಜರುಗುವುದು. ಇದರಲ್ಲಿ ಕುಂಭಮೇಳ, ಭಜನೆ ತಂಡಗಳು ಭಾಗವಹಿಸುವವು ನಂತರ ನಂದಿ ಬೆಟ್ಟದಲ್ಲಿ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಮೂರ್ತಿಗೆ ರುದ್ರಾಭಿಷೇಕ ಪೂಜೆ ನೇರವೆರುವುದು. ಆನಂತರ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಧರ್ಮ ಸಮಾರಂಭ ನಡೆಯುವುದು. ಪರಮ ಪೂಜ್ಯ ಶ್ರೀ ಡಾ॥ ರಾಜಶೇಖರ ಶಿವಾಚಾರ್ಯರ ದಿವ್ಯ ಸಾನಿಧ್ಯ ವಹಿಸುವರು. ಮಾಜಿ ಸಚಿವರಾದ ಶ್ರೀ ರಾಜಶೇಖರ ಪಾಟೀಲರವರು ಸಭೆಯನ್ನು ಉದ್ಘಾಟಿಸುವರು. ಅನೇಕ, ಗಣ್ಯರು ದಾನಿಗಳು ಉಪಸ್ಥಿತರಿರುವರು.

ಪ್ರಯುಕ್ತ, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾರಂಭವನ್ನು ಯಶಸ್ವಿಗೊಳಿಸುವಂತೆ ಮುಖಂಡರಾದ ಬಸಯ್ಯಾ ಸ್ವಾಮಿ ಮತ್ತು ಸಮಿತಿಯ ಸದಸ್ಯರುಗಳು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬಸ್ ಸಂಚಾರಕ್ಕೆ ಗ್ಯಾರಂಟಿ ಯೋಜನೆಗಳ ಜಿಲ್ಲಾ ಉಪಾಧ್ಯಕ್ಷ ವಾರದ್ ರವರಿಂದ ಚಾಲನೆ:ಹರ್ಷ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಸಾರ್ವಜನಿಕರ ಬಹುದಿನಗಳ ಬೇಡಿಕೆಯಂತೆ ಹುಮನಾಬಾದದಿಂದ ಕಲ್ಬುರ್ಗಿ ಜಿಲ್ಲೆಯ ಕಮಲಾಪೂರ ಪಟ್ಟಣ–ಕ್ಕೆ ವಿಶೇಷ ಬಸ್ ಸಂಚಾರ ಮಾಡಲಾಗುತ್ತಿದೆ ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಉಪಾಧ್ಯಕ್ಷ ಉದಯಕುಮಾರ ವಾರದ್ ತಾಲ್ಲೂಕಿನ ಹಳ್ಳಿಖೇಡ ಕೆ ಗ್ರಾಮದ ಸಾರಿಗೆ ಸಂಸ್ಥೆಯ ವಿಶೇಷ ಬಸ್‌ಗೆ ಪೂಜೆ ಸಲ್ಲಿಸಿ ಮಾತನಾಡುತ್ತಾ ನುಡಿದರು. ಸಾರ್ವಜನಿಕರ ಬಹುದಿನಗಳ ಬೇಡಿಕೆ ಇದಾಗಿತ್ತು. ಆದ್ದರಿಂದ ಬಸ್ ನಿಲ್ದಾಣದಲ್ಲಿ ವೇಳಾಪಟ್ಟಿಯನ್ನು ಅಳವಡಿಸಿ ಬಸ್ ಹೊರಡುವ ಬಗ್ಗೆ ಮತ್ತು ಬಸ್ ನಿಲುಗಡೆ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದ್ದೆವೆ. ಈ ಬಸ್ ದಿನಲೂ ಹುಮನಾಬಾದ್ ದಿಂದ ಬೆಳಿಗ್ಗೆ 8 ಗಂಟೆಗೆ ಹೊರಡುತ್ತದೆ. ದಿನದಲ್ಲಿ 5 ಬಾರಿ ಬಸ್ ಸಂಚಾರ ಮಾಡಲಿದೆ. ಎಲ್ಲ ಪ್ರಾಯಾಣಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಉದಯ್‌ಕುಮಾರ ವಾರದ್ ತಿಳಿಸಿದರು. ಈ ಬಸ್ ಸೌಲಭ್ಯ ಒದಗಿಸಿದಕ್ಕೆ ವಿಶ್ವನಾಥ ಚಿಕ್ಕ ಪಾಟೀಲ, ಸೋಮನಾಥ ಪಂಚಾಳ, ರಮೇಶವಾರದ್, ಕರಣ್ ಬಿರಾದಾರ್, ರಾಮಗಿರಿ ಗೋಸ್ವಾಮಿ, ಸಂಜು ಸಿದ್ದೇಶ್ವರ, ಸಾಗರ ಬೂರಿ, ಗುಂಡಪ್ಪ ಕೋರಿ, ಸಿದ್ದು ಇಂಡಿ, ಪ್ರಕಾಶ ಬಾವಗಿ, ಬಸ್ಸು ಲಕ್ಕಾ, ಸಿದ್ಧಣ್ಣ ಇಂಡಿ, ಉಮೇಶ ದಾಡಗಿ, ಮಲ್ಲಮ್ಮ ನಿರ್ಣಾ, ಕರ್ನಾಟಕ ವಿದ್ಯಾರ್ಥಿ ವೇದಿಕೆ ತಾಲ್ಲೂಕಾಧ್ಯಕ್ಷ ಅರವಿಂದ ಜೋಗಿರೆ, ಸಮಾಜಿಕ ಹೋರಾಟಗಾರ ಭೀಮರೆಡ್ಡಿ ಸಿಂಧನಕೇರಾ ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ.

# ಭಾಲ್ಕಿ, ಕಮಲನಗರ ರೈಲ್ವೆ ನಿಲ್ದಾಣ ಅಮೃತ ಭಾರತ್ ಯೋಜನೆಗೆ ಸೇರಿಸಿ:ಸಂಸದ ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.18: ಬೀದರ್ ಲೋಕಸಭಾ ಕ್ಷೇತ್ರದ ಭಾಲ್ಕಿ ಹಾಗೂ ಕಮಲನಗರ ರೈಲ್ವೆ ನಿಲ್ದಾಣಗಳನ್ನು ಮುಂದಿನ ಹಂತದ ಅಮೃತ ಭಾರತ ನಿಲ್ದಾಣಯೋಜನೆಗೆಸೇರ್ಪಡಿಸಿ ಅಭಿವೃದ್ಧಿಪಡಿಸುವಂತೆಸಂಸದ ಸಾಗರ ಖಂಡ್ರೆ ಅವರು ಸಂಸತ್‌ನಲ್ಲಿ ಸರಕಾರವನ್ನು ಒತ್ತಾಯಿಸಿದರು.

ಬೀದರ–ಬೆಂಗಳೂರು ರೈಲುಗಳಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಹೆಚ್ಚುವರಿ 2 ಬೋಗಿಗಳನ್ನು ಸೇರಿಸಲು ಮನವಿ ಮಾಡಿದರು.

ದಕ್ಷಿಣ ಎಕ್ಸ್‌ಪ್ರೆಸ್ ರೈಲು ಸೇವೆಯನ್ನುಹೈದರಾಬಾದ್‌ನಿಂದ ಬೀದರಕ್ಕೆ ವಿಸ್ತರಿಸಿ, ದೆಹಲಿಗೆ ಉತ್ತಮ ಸಂಪರ್ಕ ಕಲ್ಪಿಸುವಂತೆ ಒತ್ತಾಯಿಸಿದರು.

ಬೀದರ–ಬೆಂಗಳೂರು ವಂದೇ ಭಾರತರೈಲು ಆರಂಭಿಸುವಂತೆ ಆಗ್ರಹಿಸಿ, ಪ್ರವಾಸಿಗರು ಹಾಗೂ ಜನಸಾಮಾನ್ಯರಿಗೆ ಅನುಕೂಲವಾಗುವಂತೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ತಾಂಡೂರು ಸಿಮೆಂಟ್ ಕ್ಲಸ್ಟರ್ – ಜಹೀರಾಬಾದ್ ಹೊಸ ರೈಲು ಮಾರ್ಗವನ್ನು ಬೀದರ ಲೋಕಸಭಾ ಕ್ಷೇತ್ರದ ಚಿಂಚೋಳಿ ತಾಲ್ಲೂಕು ಮೂಲಕ ಮಾರ್ಗಚಾಲನೆ ಮಾಡುವಂತೆ ಒತ್ತಾಯಿಸಿದರು. ಚಿಂಚೋಳಿ ತಾಲ್ಲೂಕು ಹಿಂದುಳಿದ ತಾಲೂಕಾಗಿದ್ದು, ಈ ಹೊಸ ರೈಲು ಮಾರ್ಗವು ಆ ಭಾಗದ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ಸಹಾಯವಾಗಲಿದೆ ಎಂದು ವಿವರಿಸಿದರು.

ಕಳೆದ ದಶಕದಲ್ಲಿ ರೈಲ್ವೆ ಅಪಘಾತಗಳಲ್ಲಿ 2.6 ಲಕ್ಷಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಂಡಿದ್ದಾರೆ ಎಂಬ ಎನ್‌ಸಿಆರ್‌ಬಿ ಅಂಕಿಅಂಶಗಳನ್ನು ಉಲ್ಲೇಖಿಸಿ, ಈ ಸಮಸ್ಯೆ ಪರಿಹಾರಕ್ಕಾಗಿ ಕೆಎವಿಎಸಿಎಚ್ ತಂತ್ರಜ್ಞಾನವನ್ನುತ್ವರಿತಗತಿಯಲ್ಲಿ ಜಾರಿಗೆತರುವಂತೆ ಒತ್ತಾಯಿಸಿದ ಅವರು ಈಗಾಗಲೇ 68,000 ಕಿಮೀ ರೈಲ್ವೆ ಮಾರ್ಗಗಳ ಪೈಕಿ ಕೇವಲ 3,700 ಕಿಮೀ ವ್ಯಾಪ್ತಿಯಲ್ಲಿಯೇ ಈ ತಂತ್ರಜ್ಞಾನ ಜಾರಿಗೆ ಬಂದಿರುವುದನ್ನು ಉಲ್ಲೇಖಿಸಿ, ಇದರ ಜಾರಿಗೆಗೆ ತ್ವರಿತಗತಿಯಲ್ಲಿಕ್ರಮಕೈಗೊಳ್ಳುವಂತೆ ಆಗ್ರಹಿಸಿದರು.

ಅಮೃತ ಭಾರತ ನಿಲ್ದಾಣ ಯೋಜನೆ:

ಈಯೋಜನೆಯ ಕಾರ್ಯಗತಿ ಅತಿ ನಿಧಾನವಾಗಿದ್ದು, 2024–25ರಲ್ಲಿ 450ಕ್ಕೂ ಅಧಿಕ ನಿಲ್ದಾಣಗಳನ್ನು ಪುನರ್ ಅಭಿವೃದ್ಧಿಪಡಿಸುವ ಯೋಜನೆಯಿದ್ದರೂ, ಡಿಸೆಂಬರ್ 2024ರವರೆಗೆ ಕೇವಲ ಒಂದು ನಿಲ್ದಾಣ ಮಾತ್ರ ಪೂರ್ಣಗೊಂಡಿದೆ ಎಂಬ ಸಂಸದೀಯ ಸ್ಥಾಯಿ ಸಮಿತಿ ವರದಿ ಉಲ್ಲೇಖಿಸಿ, ಯೋಜನೆಯನ್ನು ಶೀಘ್ರದಲ್ಲಿ ಪೂರ್ಣಗೊಳಿಸುವಂತೆ ಒತ್ತಾಯಿಸಿದರು.

ರೈಲುನಿಲ್ದಾಣಗಳಜನಸಂದಣಿ:

ಎಲ್ಲಾ ರೈಲು ನಿಲ್ದಾಣಗಳಲ್ಲಿ ಜನಸಂದಣಿಹೆಚ್ಚಾಗುತ್ತಿರುವುದರಿಂದ ಪ್ರಯಾಣಿಕರುತೀವ್ರಸಮಸ್ಯೆಯನ್ನು ಅನುಭವಿಸುತ್ತಿದ್ದಾರೆ. ಇತ್ತೀಚೆಗೆ ದೆಹಲಿ ರೈಲು ನಿಲ್ದಾಣದಲ್ಲಿ ಜನಸಂದಣಿ ಹೆಚ್ಚಾಗಿ ಕಾಲ್ತುಳಿತದಿಂದ ಅನೇಕರು ಪ್ರಾಣ ಕಳೆದುಕೊಂಡ ಘಟನೆ ಈ ಸಂಬಂಧದ ಗಂಭೀರತೆಯನ್ನು ತೋರಿಸುತ್ತದೆ. ರೈಲುನಿಲ್ದಾಣಗಳಲ್ಲಿ ಪ್ರಯಾಣಿಕರ ಸುರಕ್ಷತೆ ಮತ್ತು ಜನದಟ್ಟಣೆ ನಿಯಂತ್ರಣಕ್ಕೆ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಆಗ್ರಹಿಸಿದರು.

ಪ್ರಯಾಣಿಕರ ಭದ್ರತೆ:

ಎಲ್ಲಾ ರೈಲ್ವೆ ನಿಲ್ದಾಣಗಳಲ್ಲಿ ಪ್ರಯಾಣಿಕರ ಸುರಕ್ಷತೆಯನ್ನು ಖಾತ್ರಿಗೊಳಿಸಲು ಹೆಚ್ಚುವರಿ ಭದ್ರತಾ ಕ್ರಮಗಳನ್ನು ಜಾರಿಗೆ ತರಬೇಕೆಂದು ಒತ್ತಾಯಿಸಿದರು.

ಮಾಧ್ಯಮ ರಿಯಾಯಿತಿ:

ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾಗಿರುವ ಮಾಧ್ಯಮ ಕ್ಷೇತ್ರಕ್ಕೆ ನೀಡಲಾಗುತ್ತಿದ್ದ ಶೇ.50 ರಿಯಾಯಿತಿಯನ್ನು, ಕೋವಿಡ್ ನಂತರಸ್ಥಗಿತಗೊಳಿಸಿರುವುದರಿಂದ ಅದನ್ನುಮರುಪ್ರಾರಂಭಿಸುವಂತೆ ಒತ್ತಾಯಿಸಿದರು. ಈ ಎಲ್ಲ ಬೇಡಿಕೆಗಳ ಕುರಿತು ಸರಕಾರವು ತ್ವರಿತ ಕ್ರಮ ಕೈಗೊಂಡು ರೈಲ್ವೆ ಸುರಕ್ಷತೆ,ಮೂಲಸೌಕರ್ಯ,ಮತ್ತು ಪ್ರಯಾಣಿಕರ ಅನುಕೂಲತೆಗಳನ್ನು ಸುಧಾರಿಸುವಂತೆ ಆಗ್ರಹಿಸಿದರು.

# ಉತ್ತಮ ಆರೋಗ್ಯಕ್ಕೆ ಕ್ರೀಡೆ ಪೂರಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.18:ಪ್ರತಿಯೊಬ್ಬರು ಉತ್ತಮ ದೈಹಿಕ, ಮಾನಸಿಕ ಆರೋಗ್ಯ ಪಡೆಯಲು ತಮಗಿಷ್ಟವಾದ ಕ್ರೀಡೆಯಲ್ಲಿ ಸದಾ ಪಾಲ್ಗೊಳ್ಳಬೇಕು ಎಂದು ಡೈಮಂಡ್ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಕೆ.ಮಸ್ತಾನ್ ವಲಿ ಹೇಳಿದರು.

ಇಲ್ಲಿಯ ವಿದ್ಯಾಚೇತನ ಪಬ್ಲಿಕ್ ಶಾಲೆಯ ಕ್ರೀಡಾಂಗಣದಲ್ಲಿ ನಡೆದ ಡೈಮಂಡ್ ಪ್ರೀಮಿಯರ್ ಲೀಗ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ವಿಜೇತರಾದ ಡೈಮಂಡ್ ರಾಯಲ್ ಕೆಮಿಕಲ್ ತಂಡಕ್ಕೆ ಟ್ರೋಫಿ ವಿತರಿಸಿ ಮಾತನಾಡಿದರು.

ಆಟದಲ್ಲಿ ಸೋಲು–ಗೆಲವು ಮುಖ್ಯವಲ್ಲ. ಪಂದ್ಯದಲ್ಲಿ ಭಾಗವಹಿಸುವುದರಿಂದ ಖಿನ್ನತೆ ದೂರಾಗಿ ಲವಲವಿಕೆ ಮೂಡುತ್ತದೆ ಎಂದರು.

ನಿವೃತ್ತ ಪ್ರಾಚಾರ್ಯ ಅಶೋಕ ರಾಜೋಳೆ ಮಾತನಾಡಿ, ಕ್ರಿಕೆಟ್ ಆಡುವುದರಿಂದ ದೈಹಿಕ ಎತ್ತರ, ಜ್ಞಾಪಕ ಶಕ್ತಿ ಮತ್ತು ಏಕಾಗ್ರತೆ ಬೆಳೆಯುತ್ತದೆ ಎಂದರು.

ಸಂಸ್ಥೆಯ ಕಾರ್ಯದರ್ಶಿ ವೈ. ಮಾಧವರಾವ್ ಮಾತನಾಡಿ, ಡೈಮಂಡ್ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ನಾವೆಲ್ಲರೂ ಒಂದು ಎನ್ನುವ ಮನೋಭಾವನೆ ಮೂಡಲಿ ಎಂದು ಡಿಪಿಎಲ್ ಕ್ರಿಕೆಟ್ ಪಂದ್ಯಾವಳಿ ಆರಂಭಿಸಿದ್ದೇವೆ ಎಂದು ತಿಳಿಸಿದರು.

ಮುಖ್ಯ ಆಡಳಿತಾಧಿಕಾರಿ ಅಶ್ವಿನ ಭೋಸ್ಲೆ, ಡೈಮಂಡ್ ಪ್ರೌಢಶಾಲೆಯ ಮುಖ್ಯಸ್ಥ ಧನರಾಜ ನಿಲಂಗೆ ಮಾತನಾಡಿದರು.

ಟೂರ್ನಿಯ ಫೈನಲ್ ವಿಜೇತ ತಂಡಕ್ಕೆ ಡೈಮಂಡ್ ರಾಯಲ್ ಕೆಮಿಕಲ್ ಮತ್ತು ರನ್ನರ್ ಅಪ್ ಆದ ಡೈಮಂಡ್ ನ್ಯೂಕ್ಲಿಯರ್ ತಂಡಕ್ಕೆ ಟ್ರೋಫಿ ವಿತರಿಸಲಾಯಿತು. ಟೂರ್ನಿಯಲ್ಲಿ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ರೆಹಮಾನ್, ಶೆಲಾರ್, ಮಂಜುನಾಥ ಜೋಳದಾಪ್ಕೆ, ಅನಿಲ್, ವೀರಶೆಟ್ಟಿ ಪಾಟೀಲ ಅವರಿಗೆ ಬಹುಮಾನ ವಿತರಿಸಲಾಯಿತು.

ವಿದ್ಯಾಚೇತನ ಪಬ್ಲಿಕ್ ಶಾಲೆಯ ಅಧ್ಯಕ್ಷ ಮಹೇಶ, ನಿರ್ದೇಶಕ ವಿನಯ, ಆಡಳಿತಾಧಿಕಾರಿ ಜ್ಞಾನೇಶ್ವರ ಬಿರಾದಾರ, ಗಿರೀಶ ಭಂಡಾರಿ, ಎಂ.ಡಿ.ರೆಹಮಾನ, ರಾಜಶೇಖರ, ಕರಿಂ ಉಪಸ್ಥಿತರಿದ್ದರು. ಕರ್ಣ ನಿರೂಪಿಸಿದರು.

# ಮಕ್ಕಳ ಸರ್ವತೋಮುಖ ಬೆಳವಣಿಗೆ ಅಂಗನವಾಡಿ ಕೇಂದ್ರ ಮೂಲ ಬುನಾದಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.18:ಮಕ್ಕಳ ಸರ್ವತೋಮುಖ ಬೆಳವಣಿಗೆ ಅಂಗನವಾಡಿ ಕೇಂದ್ರಮೂಲ ಭೂನದಿಯಾಗಿದೆ. ಗಿಡವಾಗಿ ಬಗ್ಗದು ಮರವಾಗಿ ಬಗ್ಗಿತೆ ಎನ್ನುವಹಾಗೆ ಮಕ್ಕಳಿಗೆ ಶಾಲಾ ಪೂರ್ವ ಶಿಕ್ಷಣ ಮಹತ್ವ ಪಾತ್ರ ವಹಿಸುತ್ತದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಇಮಾಲಪ್ಪಾ ಡಿ.ಕೆ. ಹೇಳಿದರು.

ತಾಲೂಕಿನ ಹೊಳಸಮುದ್ರ ಗ್ರಾಮದಲ್ಲಿ ಶಿಶು ಅಭಿವೃದ್ಧಿ ಯೋಜನೆ ಸಂತಪೂರ ಮತ್ತು ಗ್ರಾಮ ಪಂಚಾಯತ ಹೊಳಸಮುದ್ರ ಹಾಗೂ ಕಲಿಕಾ ಟಾಟಾ ಟ್ರಸ್ಟ್ ಬೀದರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಡೆದ ಬಾಲ ಮೇಳ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ ಪ್ರಾಥನೆ ಗೀತೆ, ಆಟ, ಪಾಠ, ಚಟುವಟಿಕೆ ಮೂಲಕ, ಪರಿಸರ ಹೀಗೆ ಎಲ್ಲಾ ವಿಷಯಗಳ ಬಗ್ಗೆ ಜ್ಞಾನ ನೀಡಲಾಗುತ್ತದೆ. ಪೋಷಕರು ಮಕ್ಕಳಿಗೆ ಅಂಗನವಾಡಿ ಕೇಂದ್ರ–ಕ್ಕೆ ಕಳಿಸಲು ಹಿಂದೇಟು ಹಾಕಬೇಡಿ ಎಂದು ಹೇಳಿದರು.

ಕಲಿಕೆ ಟಾಟಾ ಟ್ರಸ್ಟ್ ಪ್ರತಿನಿಧಿಯಾಗಿ ಮಲ್ಲಮ್ಮ ಬಿರಾದಾರ ಮಾತನಾಡಿ, ಶಾಲಾ ಪೂರ್ವ ಶಿಕ್ಷಣದಲ್ಲಿ ಮಕ್ಕಳಿಗೆ ಅಕ್ಷರ ಜ್ಞಾನ ಕಡಿಮೆ ಇರುತ್ತದೆ,ಹಾಗಾಗಿ ಮಕ್ಕಳಿಗೆ ವಸ್ತುಗುರುತಿಸುವಿಕೆ, ಚಿತ್ರಗಳು ತೋರಿಸಿ,ಚಟುವಟಿಕೆ ಮೂಲಕ ಮಕ್ಕಳಿಗೆ ಗುಣ ಮಟ್ಟದ ಶಿಕ್ಷಣವನ್ನು ಅಂಗವಾಡಿ ಕೇಂದ್ರದಲ್ಲಿ ನೀಡಲಾಗುತ್ತದೆ ಎಂದು ಹೇಳಿದರು.

ಗ್ರಾಮ ಪಂಚಾಯತ ಅಧ್ಯ–ಕ್ಷೆ ಯೋಗೀತಾ ಆಳಂದೆ ಕಾರ್ಯಕ್ರಮ ಉದ್ಘಾಟನೆ ಮಾಡಿದರು, ಶಿವಗಂಗಾ ಅಂಗನವಾಡಿ ಕಾರ್ಯಕರ್ತೆ ಅವರು ಮಕ್ಕಳಿಗೆ ಪ್ರಾಥನೆ ಗೀತೆಯನ್ನು ಹಾಡಿಸಿದರು.

ಹೊಲಸಮುದ್ರ ಗ್ರಾಮ ಪಂಚಾಯತ ಪಿ.ಡಿ.ಓ ನಿರ್ಮಲಾ ಮಾತನಾಡಿ, ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ 8 ಅಂಗನವಾಡಿ ಕೇಂದ್ರದ ಮಕ್ಕಳಿಗೆ ಬ್ಯಾಗುಗಳನ್ನು ಕೊಡಿಸುವ ಮೂಲಕ ಮಕ್ಕಳ ಶಿಕ್ಷಣಕ್ಕೆ ಅನುಕೂಲ ಮಾಡುವ ಪ್ರಯತ್ನ ಗ್ರಾಮ ಪಂಚಾಯತ ವತಿಯಿಂದ ಮಾಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಉಪಾಧ್ಯಕ್ಷೆ ಸುಮಾ, ಸದಸ್ಯರಾದ ರಾಹುಲ ಪಾಟೀಯ, ಕೃಷ್ಣ ಕಾಳೆ ಶಿವಾನಂದ, ಅಂಬಿಕಾ, ಭರತ ಕದಂ, ಕಾರ್ಯದರ್ಶಿ ಮಹಾದೇವ, ಮಾರುತಿ ಆಳಂದೆ, ಖಲಿದ ಸಹಾಯಕ ಶಿ.ಅ.ಯೋ ಸಂತಪುರ, ಸವಿತಾ ಯುವರಾಜ ರಾಂಪುರೆ ಸೇರಿದಂತೆ ಎಲ್ಲಾ ಕೇಂದ್ರದ ಅಂಗನವಾಡಿ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಸೇರಿದರು.

## ಕುಡಿಯುವ ನೀರಿಗೆ ಸಂಬಂಧಿಸಿದಂತೆ ದೂರುಗಳಿದ್ದರೆ ಸಹಾಯವಾಣಿಗೆ ಕರೆ ಮಾಡಿ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಾ.18: ಜಿಲ್ಲೆಯ ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸಹಾಯವಾಣಿಯನ್ನು ಸ್ಥಾಪಿಸಲಾಗಿದ್ದು, ಕುಡಿಯುವ ನೀರಿಗೆ ಸಂಬಂಧಿಸಿದಂತೆ ಸಾರ್ವಜನಿಕರು ದೂರು, ಸಮಸ್ಯೆಗಳಿದ್ದರೆ ಸಹಾಯವಾಣಿ ಸಂಖ್ಯೆಗಳಿಗೆ ಕರೆ ಮಾಡಬೇಕೆಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಾಯವಾಣಿ ಸಂಖ್ಯೆಗಳ ವಿವರ: ಜಿಲ್ಲಾ ಮಟ್ಟದ ಸಹಾಯವಾಣಿ (9480587444), ಔರಾದ (ಬಿ) (9448196200), ಕಮಲನಗರ (9448196207), ಬಸವಕಲ್ಯಾಣ (9448196201), ಹುಲಸೂರು (9448195205), ಹುಮನಾಬಾದ (9448196206), ಚಿಟಗುಪ್ಪಾ (9448196204), ಬೀದರ (9448196203), ಭಾಲ್ಕಿ (9448196202).

# ಇದ್ದೂ ಇಲ್ಲದಂತಾದ ನೆಲವಾಡ ಶುದ್ಧ ನೀರಿನ ಘಟಕ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 18 : ಬೀದರ್ ತಾಲ್ಲೂಕಿನ ನೆಲವಾಡ ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರಿನ ಘಟಕ ಇದ್ದೂ ಇಲ್ಲದಂತಾಗಿದೆ. ಘಟಕ ಹಾಳಾಗಿದ್ದರಿಂದ ನಾಲ್ಕು ವರ್ಷಗಳಿಂದ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ದೊರೆಯದಂತಾಗಿದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ರೈಟ್ ವಾಟರ್ ಏಜೆನ್ಸಿ ಮೂಲಕ 2014–15ನೇ ಸಾಲಿನಲ್ಲಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗಿದೆ.

11 ಲಕ್ಷ ವೆಚ್ಚದ ಘಟಕ ಒಂದು ಸಾವಿರ ಲೀಟರ್ ಶುದ್ಧ ಕುಡಿಯುವ ನೀರು ಸಂಗ್ರಹಿಸುವ ಸಾಮರ್ಥ್ಯ ಹೊಂದಿದೆ.

ಘಟಕದ ಐದು ವರ್ಷಗಳ ನಿರ್ವಹಣೆ ಅವಧಿ ಮುಗಿದ ನಂತರ ರೈಟ್ ವಾಟರ್ ಏಜೆನ್ಸಿ ಅದನ್ನು ಸಂಗೋಳಗಿ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸಿದೆ. ಪಂಚಾಯಿತಿಯವರು ಸರಿಯಾಗಿ ನಿರ್ವಹಣೆ ಮಾಡದ ಕಾರಣ ನೀರು ಶುದ್ಧೀಕರಣ ಯಂತ್ರ ನಿಷ್ಕ್ರೀಯಗೊಂಡಿದ್ದು, ಘಟಕ ಬಾಗಿಲು ಮುಚ್ಚಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಸರ್ಕಾರ ಪ್ರತಿ ಗ್ರಾಮದಲ್ಲಿ ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಿದೆ. ಆದರೆ, ಗ್ರಾಮಸ್ಥರಿಗೆ ಅದರ ಲಾಭ ಸಿಗುತ್ತಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ.

ಗ್ರಾಮಕ್ಕೆ ಕೆರೆ ಸಮೀಪದ ಕೊಳವೆಬಾವಿಯಿಂದ ನೀರು ಪೂರೈಕೆಯಾಗುತ್ತದೆ. ವಿದ್ಯುತ್ ಕೈ ಕೊಟ್ಟರೆ ನೀರಿಗೆ ಸಮಸ್ಯೆಯಾಗುತ್ತದೆ. ನಾಲ್ಕು ವರ್ಷಗಳಿಂದ ಶುದ್ಧ ಕುಡಿಯುವ ನೀರಿನ ಘಟಕ ಚಾಲ್ತಿಯಲ್ಲಿಲ್ಲದ್ದರಿಂದ ತೊಂದರೆ ಅನುಭವಿಸುವಂತಾಗಿದೆ ಎಂದು ಗ್ರಾಮದ ಯುವ ಮುಖಂಡ ವಿಜಯಕುಮಾರ ಬಿರಾದಾರ ಹೇಳಿದರು.

ಘಟಕದ ನೀರು ಶುದ್ಧೀಕರಣ ಯಂತ್ರದ ದುರಸ್ತಿ ಹಾಗೂ ಇತರ ಸಾಮಗ್ರಿ ಖರೀದಿಗೆ ಪಂಚಾಯಿತಿಯಲ್ಲಿ ಹಿಂದೆ ಅನುದಾನ ತೆಗೆದಿರಿಸಲಾಗಿತ್ತು. ಆದರೆ,ದುರಸ್ತಿಕಾರ್ಯ ಕೈಗೊಳ್ಳದೆ ಅನುದಾನ ದುರುಪಯೋಗ ಪಡಿಸಿಕೊಳ್ಳಲಾಗಿದೆ ಎಂದು ದೂರಿದರು.

ಘಟಕ ದುರಸ್ತಿ ಅನುದಾನ ದುರುಪಯೋಗದ ಬಗ್ಗೆ ಮಾಹಿತಿ ಇಲ್ಲ. ಘಟಕ ಮುಚ್ಚಿರುವುದರಿಂದ ಜನರಿಗೆ ಸಮಸ್ಯೆಯಾಗುತ್ತಿರುವುದು ಗಮನಕ್ಕೆ ಬಂದಿದ್ದು, ದುರಸ್ತಿ ಕಾರ್ಯ ಕೈಗೊಂಡು ನಾಲ್ಕು ದಿನಗಳಲ್ಲಿ ಪುನರಾರಂಭಿಸಲಾಗುವುದು ಎಂದು ಸಂಗೋಳಗಿ ಪಿಡಿಒ ಸುಜಾತಾ ನಂದಿ ತಿಳಿಸಿದರು.

# ಮಹಿಳೆ ಧೃಢಸಂಕಲ್ಪದೊಂದಿಗೆ ಮುನ್ನುಗ್ಗಬೇಕು: ಕುಲಸಚಿವೆ ಸುರೇಖಾ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮಾ.18:ಮಹಿಳೆ ತನ್ನ ಜೀವನದಲ್ಲಿ ಗುರಿ ಇಟ್ಟುಕೊಂಡು ಅದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಧೃಢಸಂಕಲ್ಪದೊಂದಿಗೆ ಮುನ್ನುಗ್ಗಬೇಕೆಂದು ಬೀದರ ವಿಶ್ವವಿದ್ಯಾಲಯದ ಕುಲಸಚಿವೆ ಶ್ರೀಮತಿ ಸುರೇಖಾ ತಿಳಿಸಿದರು.

ನಗರದ ಕರ್ನಾಟಕ ಕಾಲೇಜಿನ ಸಭಾಂಗಣದಲ್ಲಿ ಕಾಲೇಜಿನ ಮಹಿಳಾ ವಿಭಾಗದ ವತಿಯಿಂದ ಆಯೋಜಿಸಿದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು. ಸಾಧಿಸುವ ನಾರಿಗೆ ಆತ್ಮವಿಶ್ವಾಸವೇ ಒಂದು ಆಯುಧ. ಸಮಯದ ಸದುಪಯೋಗಪಡಿಸಿಕೊಳ್ಳುತ್ತ, ಸತತ ಪರಿಶ್ರಮದ ಜೊತೆ–ಗೆ ಸಾಧನೆಯ ಉತ್ತುಂಗ ಶಿಖರಕ್ಕೇರುವ ಸತ್ ಸಂಕಲ್ಪ ಮಾಡಿಕೊಳ್ಳಬೇಕು. ಮಹಿಳೆ ಕ್ಷಮಯಾಧರಿತ್ರಿ ನಿಜ, ಜೊತೆಗೆ ಪ್ರತಿಭಟಿಸುವ ಮನೋಭಾವ, ಹಕ್ಕನ್ನು ಪಡೆದುಕೊಳ್ಳುವ ಶಕ್ತಿ ಮೈಗೂಡಿಸಿಕೊಳ್ಳಬೇಕು. ಆಡು ಮುಟ್ಟದ ಸೊಪ್ಪಿಲ್ಲ, ಮಹಿಳೆ ಇಲ್ಲದ ಕ್ಷೇತ್ರಗಳೇ ಇಲ್ಲ. ಮೊಬೈಲ್‌ನಿಂದ ದೂರವುಳಿದು ಸಾಧನೆಯ ಹಾದಿಯೆಡೆಗೆ ಪಯಣ ಸಾಗಲಿ ಎಂದು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಇಂಗ್ಲೀಷ ವಿಭಾಗದ ಮುಖ್ಯಸ್ಥೆ ಡಾ. ವಿದ್ಯಾ ಪಾಟೀಲ ಮಾತನಾಡಿ ಮಹಿಳೆಗೆ ಅನ್ಯಾಯವಾದಾಗ ಯಾರೋಬಂದು ಕಾಪಾಡುತ್ತಾರೆ ಎನ್ನುವ ಭಾವನೆ ತೊಲಗಿಸಬೇಕು. ನಾನು ಹೆಣ್ಣು, ನನ್ನಿಂದ ಏನೂ ಸಾಧ್ಯವಿಲ್ಲ ಎನ್ನುವ ಕೀಳರಿಮೆಯಿಂದ ಹೊರಬಂದು, ಸಮಾನ ಕೆಲಸಕ್ಕೆ ಸಮಾನ ಸ್ಥಾನಮಾನದ ಹೋರಾಟಕ್ಕೆ ಸಜ್ಜುಗೊಳ್ಳಬೇಕು. ತನ್ನನ್ನು ಬೇರೆಯವರೊಂದಿಗೆ ಹೋಲಿಸಿಕೊಳ್ಳದೆ ಸ್ವಂತ ವಿಚಾರದಿಂದ ಬದುಕಬೇಕು. ನಾವೂ ಮಹಿಳೆಯರು ಯಾರಿಗೂ ಕಡಿಮೆಯಿಲ್ಲ ಎನ್ನುವ ಜ್ವಲಂತ ಇಚ್ಛಾಶಕ್ತಿ ಮೈಗೂಡಿಸಿಕೊಂಡರೆ ಬದುಕು ಸಾರ್ಥಕವಾಗುತ್ತದೆ ಎಂದು ಪ್ರತಿಪಾದಿಸಿದರು.

ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸತೀಶ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ವೇದಿಕೆ ಮೇಲೆ ಕರಾಶಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಚಂದ್ರಕಾಂತ ಶೆಟಕಾರ, ಧೂಳಪ್ಪ ಪಾಟೀಲ, ಚಂದಾ ಶಾಂತಕುಮಾರ, ಮಹಿಳಾ ವಿಭಾಗದ ಸಂಯೋಜಕಿ ಜ್ಯೋತಿ ಪಾಟೀಲ ಮಹಿಳಾ ವಿಭಾಗದ ಕಾರ್ಯಗಳ ಮೇಲೆ ಬೆಳಕು ಚೆಲ್ಲಿದರು.

ಕು.ದಾನೇಶ್ವರಿ ಪ್ರಾರ್ಥಿಸಿದರು. ವಾಣಿಜ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಆನಿ ಕ್ರಿಸ್ಟಿನಾ ನಿರೂಪಿಸಿದರು. ಪ್ರಾಚಾರ್ಯರಾದ ಡಾ. ಮಲ್ಲಿಕಾರ್ಜುನ ಹಂಗರಗಿ ಸ್ವಾಗತಿಸಿದರು. ಡಾ. ಸೋಮೇಶ್ವರಿ ಮುದ್ದಾ ಅತಿಥಿ ಪರಿಚಯ ಮಾಡಿಕೊಟ್ಟರು. ಡಾ. ಮಹಾನಂದ ಮಡಕಿ ವಂದಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ವಿವಿಧ ವಿಭಾಗದ ಪ್ರಾಧ್ಯಾಪಕರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಉಚಿತ ತರಬೇತಿಗೆ ಪ್ರವೇಶ ಪರೀಕ್ಷೆ 23ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 18 : ನಗರದ ಸ್ಪರ್ಧಾ ಸಂಕಲ್ಪ ಅಕಾಡೆಮಿಯು ಜಿಲ್ಲೆಯ ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ಊಟ, ವಸತಿ ಸಹಿತ ನವೋದಯ ಪ್ರವೇಶ ಪರೀಕ್ಷೆಯ ಒಂದು ವರ್ಷದ ಉಚಿತ ತರಬೇತಿ ನೀಡಲು ನಿರ್ಧರಿಸಿದೆ.

ಉಚಿತ ತರಬೇತಿಗೆ ಮಾರ್ಚ್ 23 ರಂದು ಮಧ್ಯಾಹ್ನ 3.30ಕ್ಕೆ ಇಲ್ಲಿಯ ಜನವಾಡ ರಸ್ತೆಯಲ್ಲಿನ ವಾಟರ್ ಟ್ಯಾಂಕ್ ಹಿಂದುಗಡೆಯ ಗೋವಿಂದ ಲೇಔಟ್‌ನಲ್ಲಿ ಇರುವ ಅಕಾಡೆಮಿ ಕಚೇರಿಯಲ್ಲಿ ಪ್ರವೇಶ ಪರೀಕ್ಷೆ ನಡೆಸಲಾಗುವುದು ಎಂದು ಅಕಾಡೆಮಿಯ ಅಧ್ಯಕ್ಷ ನಾಗೇಶ ಸ್ವಾಮಿ ಮಸ್ಕಲ್ ತಿಳಿಸಿದ್ದಾರೆ.

4ನೇ ಹಾಗೂ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು 50 ಅಂಕಗಳ ಕನ್ನಡ, ಇಂಗ್ಲಿಷ್, ಗಣಿತ ಹಾಗೂ ಸಾಮಾನ್ಯ ವಿಷಯದ ಬಹು ಆಯ್ಕೆ ಪ್ರಶ್ನೆಗಳ ಪರೀಕ್ಷೆಗೆ ಹಾಜರಾಗಬಹುದು ಎಂದು ತಿಳಿಸಿದ್ದಾರೆ.

ಹೆಸರು ನೋಂದಣಿಗೆ ಮಾರ್ಚ್ 22 ಕೊನೆಯ ದಿನವಾಗಿದೆ. ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 7259525145 ಅಥವಾ 6363405264ಗೆ ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

# ಬೀದರ ಮಕ್ಕಳ ಕಲ್ಯಾಣ ಸಮಿತಿಗೆ ಅಧ್ಯಕ್ಷ, ಸದಸ್ಯರುಗಳ ಆಯ್ಕೆ:ಆಕ್ಷೇಪಣೆ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.18: ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015, ತಿದ್ದುಪಡಿ ಕಾಯ್ದೆ 2021 ಹಾಗೂ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಮಾದರಿ ನಿಯಮಗಳು 2016, ತಿದ್ದುಪಡಿ ಮಾದರಿ ನಿಯಮಗಳು 2022 ರನ್ವಯ ಬೀದರ ಮಕ್ಕಳ ಕಲ್ಯಾಣ ಸಮಿತಿಗೆ ಅಧ್ಯಕ್ಷ, ಸದಸ್ಯರುಗಳನ್ನು ಆಯ್ಕೆಯಾಗಿರುತ್ತಾರೆ ಎಂದು ಬೀದರ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಯ್ಕೆಯಾಗಿರುವ ಅಧ್ಯಕ್ಷ, ಸದಸ್ಯರುಗಳ ವಿವರ: ಶೀಮಪ್ಪ ವಿಶ್ವನಾಥ ಮೇತ್ರೆ (ಅಧ್ಯಕ್ಷರು), ರೇಣುಕಾ (ಸದಸ್ಯರು), ಶಾಲಿನಿ ಫ್ಲಾರೆನ್ಸ್ (ಸದಸ್ಯರು), ಸುಧಾಕರ್ ಯಲ್ಲನೋರ್ (ಸದಸ್ಯರು), ಮನ್ಮಥ ಕಾಶಿನಾಥ (ಸದಸ್ಯರು).

ಕಾರಣ ಮಕ್ಕಳ ಕಲ್ಯಾಣ ಸಮಿತಿಗೆ ಆಯ್ಕೆಯಾಗಿರುವ ಅಧ್ಯಕ್ಷ, ಸದಸ್ಯರುಗಳು ಯಾವುದೇ ರಾಜಕೀಯ ಚಟುವಟಿಕೆಗಳಲ್ಲಿ/ ವ್ಯಕ್ತಿಗಳೊಂದಿಗೆ/ಪಕ್ಷಗಳೊಂದಿಗೆ ಸಂಪರ್ಕ ಹೊಂದಿರುವ ಬಗ್ಗೆ ಸಾರ್ವಜನಿಕರಲ್ಲಿ ಯಾವುದಾದರೂ ಆಕ್ಷೇಪಣೆಗಳು ಇದ್ದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಮೈಲೂರ ಬೀದರ ಅವರ ಕಛೇರಿಯ ದೂರವಾಣಿ ಸಂಖ್ಯೆ: 08482–234003 ಅಥವಾ ಇಮೇಲ್ dcpobidar@gmail.com ಗೆ ದಿನಾಂಕ: 21–03–2025 ರೊಳಗಾಗಿ ಮಾಹಿತಿ ನೀಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಲಾಚನಕೇರಿಯಲ್ಲಿ ಇಂದಿನಿಂದ ಆಚರಣೆ

(ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ : ಜಿಲ್ಲೆಯ ಕುಣಿಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಲಾಚನಕೇರಿ ಗ್ರಾಮದಲ್ಲಿ ಮಾ.18 ಮತ್ತು 19 ರಂದು ಎರಡು ದಿನಗಳ ಕಾಲ ಕೋಮು ಸೌಹಾರ್ದತೆ ಬಿಂಬಿಸುವ ಸಲುವಾಗಿ ಹಾಲುಮತ ಸಮುದಾಯದ ವತಿಯಿಂದ ಉರುಸ್ ಆಚರಣೆ ನಡೆಲಾಗುತ್ತಿದೆ.

ಕೋಮು ದಳ್ಳುರಿಯಿಂದ ನಲುಗುತ್ತಿರುವ ಇಂದಿನ ದಿನಗಳಲ್ಲಿ ಜನರಲ್ಲಿ ಶಾಂತಿ, ಸಹನೆ, ಕೋಮು ಸೌಹಾರ್ದತೆ ಮತ್ತು ಭ್ರಾತೃತ್ವ ಭಾವನೆಗಳನ್ನು ಬಿಂಬಿಸಲು ಗ್ರಾಮದ ಬೆಣಕಲ್ ಪರಿವಾರದ ಪಕ್ಕಿರಸ್ವಾಮಿ ಇವರು ಕಳೆದ 15 ವರ್ಷಗಳಿಂದ ಸಾಮಾಜಿಕ ಹಾಗೂ ಧಾರ್ಮಿಕ ಸೇವೆಗಳನ್ನು ಮಾಡುತ್ತಿದ್ದಾರೆ. ಇವರ ನೇತೃತ್ವದಲ್ಲಿ ಶ್ರೀ ಗುರು ದೊಡ್ಡ ಇಮಾಮ್ ಕಾಸೀಂ ವಲಿ ಶರಣರ ದರಗಾವನ್ನು ನಿರ್ಮಾಣ ಮಾಡಲಾಗಿದ್ದು, ಕಳೆದ ವರ್ಷದಿಂದ ಗ್ರಾಮದಲ್ಲಿ ಉರುಸ್ ಆಚರಿಸಲಾಗುತ್ತಿದೆ. ಆ ಮೂಲಕ ಕೋಮು ಸೌಹಾರ್ದತೆ ಸಂಕೇತವಾಗಿ ಜನರಲ್ಲಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಭಾವನೆಗಳನ್ನು ಮೂಡಿಸಲಾಗುತ್ತಿದೆ. ಶತಮಾನಗಳ ಹಿಂದೆ ಇದ್ದ ಇಮಾಮ್ ಕಾಸಿಂ ವಲಿ ಶರಣರ ಸಂಸ್ಮರಣೆಗಾಗಿ ಕಳೆದ 15 ವರ್ಷಗಳಿಂದ ಲಕ್ಷ್ಮಪ್ಪ ಬೆಣಕಲ್ ಇವರ ನಿವಾಸದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿದ್ದವು. ಇಮಾಮ್ ಕಾಸಿಂ ವಲಿ ಶರಣರ ಸವಾರಿಯನ್ನು ಪೀರಾ ಹುಸೇನ್ ಶರಣರು ಮಾಡುತ್ತಿದ್ದು, 2011ರಲ್ಲಿ ನಿಧನರಾದರು. ಅಂದಿನಿಂದ ಬೆಣಕಲ್ ಪರಿವಾರದವರು ಈ ಆಚರಣೆಗಳನ್ನು ಮುಂದುವರಿಸಿಕೊಂಡು ಬರುತ್ತಿದ್ದಾರೆ.

ಮಾ.18 ರಂದು ಬೆಣಕಲ್ ಮನೆತನದ ಭರಮಪ್ಪನಿಂಗಪ್ಪ ಇವರ ಮನೆಯಿಂದ ಅಪರಾಹ್ನ 12-30ರಿಂದ ಗಂಧ ಹೊರಟು, ಸಂಜೆ 5 ಗಂಟೆ ವೇಳೆಗೆ ದರಗಾ ತಲುಪಲಿದೆ. ಭಕ್ತರಿಗಾಗಿ ಅನ್ನದಾನ ಇರುತ್ತದೆ. ಅಂದು ರಾತ್ರಿಯಿಡೀ ರಿವಾಯತು ಪದಗಳು, ಪ್ರಾತಃಕಾಲದಲ್ಲಿ ನೀರಿನ ದೀಪ ಉರಿಯಲಿದೆ. ಮಾ.19ರ ಪ್ರಾತಃಕಾಲದಿಂದ ಓದಿಕೆ, ದೀಪ, ಧೂಪ ಆಚರಣೆಗಳ ಜೊತೆಗೆ ಉರುಸಿನ ಪ್ರಯುಕ್ತ ಹಾಲುಮತದ ಪಕ್ಕಿರಸ್ವಾಮಿ ಇವರಿಂದ 'ಹೇಳಿಕೆ' ನಡೆಯುತ್ತಿದೆ. ಲಾಚನಕೇರಿ ಗ್ರಾಮದ ಸುತ್ತಮುತ್ತಲ ಗ್ರಾಮಗಳಾದ ಕರ್ಕಿಹಳ್ಳಿ, ಚಿಕ್ಕಬಗನಾಳ, ಹ್ಯಾಟಿ ಮುಂಡರಗಿ ಸೇರಿದಂತೆ ಹುಬ್ಬಳ್ಳಿ, ಶಹಪುರ ಇನ್ನಿತರೆ ಭಾಗಗಳಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲಿದ್ದಾರೆ. ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಇರಲಿದೆ. ಗ್ರಾಮದಲ್ಲಿ ಹಾಲು ಮತ ಸಮುದಾಯದ ಜೊತೆಗೆ ಲಿಂಗಾಯತ, ವಾಲ್ಮೀಕಿ, ದಲಿತ ಸಮುದಾಯ ಸೇರಿದಂತೆ ಎಲ್ಲ ವರ್ಗದ ಜನರು ಸಾಥ್ ನೀಡುತ್ತಿದ್ದು ಜಿಲ್ಲೆಯಲ್ಲಿ ಕೋಮುಸೌಹಾರ್ದತೆಯ ದ್ಯೋತಕವಾಗಿ ಉರುಸುನ್ನು ಆಚರಿಸುತ್ತಿರುವುದು ವಿಶೇಷ.

# ರಾಘಪುರ ಗ್ರಾಮದ ದೇವಸ್ಥಾನದ ರಸ್ತೆ ಮಾಡಿಸುವಂತೆ ಮನವಿ

ಮಲ್ಲಮ್ಮ ನುಡಿ ವಾರ್ತೆ




ಸೇಡಂ, ಮಾ. 18.ತಾಲೂಕಿನ ಸುಕ್ಷೇತ್ರ ರಾಘಪುರ ಗ್ರಾಮದ ಬೆಟ್ಟದ ಮೇಲಿರುವ ಶ್ರೀ ಮೌಲಾಲಿ ಮುತ್ಯಾ ದೇವಸ್ಥಾನ ಹಾಗೂ ಶ್ರೀ ಭವಲಿಂಗೇಶ್ವರ ಹವಾ ಮಲ್ಲಿನಾಥ ದೇವಸ್ಥಾನಕ್ಕೆ ಹೋಗಲು ರಸ್ತೆ ಮಾಡಿಕೊಡಬೇಕೆಂದು

ಡಾ. ಶರಣ ಪ್ರಕಾಶ ಪಾಟೀಲಜಿ ಸಚಿವರು ಇವರಿಗೆ

ಡಾ. ರಾಮಚಂದ್ರ ಗುತ್ತೇದಾರ ಮನವಿ ಪತ್ರನೀಡಿ ಗ್ರಾಮದ ಬೆಟ್ಟದ ಮೇಲಿರುವ ದೇವಸ್ಥಾನಗಳು ಹಿಂದೂ ಮತ್ತು ಮುಸ್ಲಿಂ ಧರ್ಮದ ಭಾವೈಕ್ಯತೆ ಕೇಂದ್ರವಾಗಿ ಪ್ರಜ್ವಲಿಸುತ್ತಿರವುದು ರಾಘಪುರ ಕ್ಷೇತ್ರ

ಈ ಗ್ರಾಮಕ್ಕೆ ಪ್ರತಿ ಸೋಮವಾರ ಮತ್ತು ಗುರುವಾರ ಸಾವಿರಾರು ಜನ ಭಕ್ತರು ಹಗಲನ್ನದೆ ರಾತ್ರಿಯನ್ನದೆ ದರ್ಶನಕ್ಕೆ ಬರ್ತಾರೆ ಅದರಲ್ಲೂ ಚಿಕ್ಕ ಚಿಕ್ಕ ಮಕ್ಕಳು ಹಿರಿಯರು ತಾಯಿಯಂದಿರು ಯಜಮಾನರು ರಾತ್ರಿ 12 ಗಂಟೆ ಒಂದು ಗಂಟೆಯನ್ನದೆ ದೇವರ ಕೃಪೆಕೆ ಪಾತ್ರರಾಗಿ ಹೊಗ್ತಾರೆ ಅನ್ನುವುದು ನಮ್ಮ ತಾಲೂಕಿಗೆ ಗೌರವ ಮತ್ತು ಹೆಮ್ಮೆಯ ಸಂಗತಿಯೆ ಸರಿ.

ಆದ್ರೆ ದೇವಸ್ಥಾನ ಕ್ಕೆ ಬರಲು ಉತ್ತಮ ರಸ್ತೆ ಇಲ್ಲದಿರುವುದು ವಿಪರ್ಯಾಸ ರಸ್ತೆ ಇದೆ ಅದು ಮೊದಲು ಕಾಲು ದಾ-ರಿಯಾಗಿತ್ತು ಈಗ ಅಣಾದಿಯಾಗಿದೆ.

ಆದರಿಂದ ತಾವುಗಳು ಈ ಸಮಸ್ಸೆಯನ್ನು ಗಂಭೀರವಾಗಿ ಪರಿಗಣಿಸಿ ಆದಷ್ಟು ಬೇಗನೆ ಉತ್ತಮ ಗುಣಮಟ್ಟದ ರಸ್ತೆ ಮಾಡಿಸಿ ಕೊಡಬೇಕೆಂದು

ಮನವಿ ಮಾಡಿದರು

ಈ ಸಂದರ್ಭದಲ್ಲಿ ಪರಮಪೂಜ್ಯ ಶ್ರೀ ತಿಪ್ಪಯ್ಯ ಮುತ್ತ್ಯಾ ರಾಘಪುರ. ಶ್ರೀನಿವಾಸ ರೆಡ್ಡಿ ಮದನ. ಗುಂಡಪ್ಪ ಪೂಜಾರಿ. ಚಂದ್ರಶೇಖರ ಮಡಿವಾಳ. ಮಹೇಶರೆಡ್ಡಿ. ರವಿಸಿಂಘ. ವೆಂಕಟೇಶ ಕೊಡ್ಲಾ.ಆಶಪ್ಪ. ಅಶೋಕ. ವೆಂಕಟೇಶ. ನಾಗಪ್ಪ. ಹಾಗೂ ಇನ್ನಿತರರು ಇದ್ದರು

# ಬಿಸಿ ಗಾಳಿ: ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ,ಮಾ.18-ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿಯನ್ವಯ ಬಳ್ಳಾರಿ ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಬಿಸಿಗಾಳಿಯ ಪರಿಸ್ಥಿತಿ ಉಂಟಾಗುವ ಸಾಧ್ಯತೆಯಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ನಾಗರಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಮುಂಜಾಗ್ರತಾ ಕ್ರಮ ವಹಿಸಬೇಕು.

*ಏನು ಮಾಡಬೇಕು:*

ಸಾರ್ವಜನಿಕರು ರೇಡಿಯೋ, ಟಿವಿ, ದಿನ ಪತ್ರಿಕೆಗಳಲ್ಲಿ ಬರುವ ಅತಿಯಾದ ಬಿಸಿಲಿನ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳುವುದು. ಬಾಯಾರಿಕೆಯಿಲ್ಲದಿದ್ದರೂ ಸಾಕಷ್ಟು ಮತ್ತು ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯಬೇಕು. ಹಗುರವಾದ, ತಿಳಿ-ಬಣ್ಣದ, ಸಡಿಲವಾದ ಮತ್ತು ರಂಧ್ರವುಳ್ಳ ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಿಸಿಲಿನಲ್ಲಿ ಹೋಗುವಾದ ರಕ್ಷಣಾತ್ಮಕ ಕನ್ನಡಕಗಳು, ಛತ್ರಿ/ಟೋಪಿ, ಬೂಟುಗಳು ಅಥವಾ ಚಪ್ಪಲಿಗಳನ್ನು ಬಳಸಬೇಕು.

ಹೊರಗೆ ಹೋಗಿ ಕೆಲಸ ಮಾಡುವವರು ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಿ. ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ಶರಬತ್, ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು ಪುನಃ ತಂಪಾಗಿಡಲು ಸಹಾಯ ಮಾಡುತ್ತದೆ. ಪ್ರಾಣಿ-ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ಒದಗಿಸಿ. ಆದಷ್ಟು ಫ್ಯಾನ್ ಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗ್ಗೆ ತಣ್ಣೀರಿನಲ್ಲಿ ಸ್ನಾನ ಮಾಡಿ, ಕೆಲಸವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಉತ್ತಮ ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಇರಿಸಿಕೊಳ್ಳಬೇಕು.

ಕೆಲಸ ನಿರ್ವಹಿಸುವ ಗರ್ಭಿಣಿ ಮಹಿಳೆಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು. ನವಜಾತ ಶಿಶುಗಳು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು ಹಾಗೂ ಇತರ ಆರೋಗ್ಯ ಸಮಸ್ಯೆಗಳಿರುವವರು, ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆ ವಹಿಸಬೇಕು.

*ಏನು ಮಾಡಬಾರದು:*

ಮಕ್ಕಳು ಅಥವಾ ಸಾಕುಪ್ರಾಣಿಗಳನ್ನು ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳ ಹತ್ತಿರ ಬಿಡಬಾರದು. ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ತಾಪಮಾನವು ಅವರಿಗೆ ಮತ್ತು ಅವುಗಳಿಗೆ ಅಪಾಯಕಾರಿಯಾಗಬಹುದು. ಕಪ್ಪುಬಟ್ಟೆ ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸುವುದನ್ನು ತಪ್ಪಿಸಿ. ಹೊರಗಿನ ತಾಪಮಾನ ಹೆಚ್ಚಾದಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ. ವಿಶೇಷವಾಗಿ ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ.

ಬಿಸಿಲಿನ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಿ. ಅಡುಗೆ ಪ್ರದೇಶವನ್ನು ಸಮರ್ಪಕವಾಗಿ ಗಾಳಿಯಾಡಲು ಬಾಗಿಲು ಮತ್ತು ಕಿಟಕಿಗಳನ್ನು ತೆರೆಯಬೇಕು. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಹಾನಿಕಾರಕ ತಂಪು ಪಾನೀಯಗಳನ್ನು ಸೇವಿಸಬೇಡಿ. ಹಾನಿಕಾರಕವಾದ ಆಹಾರ ಮತ್ತು ಹಳಸಿದ ಆಹಾರವನ್ನು ಸೇವಿಸಬಾರದು. ಚಪ್ಪಲಿ ಧರಿಸದೆ ಹೊರಹೋಗುವ ಅಭ್ಯಾಸವನ್ನು ತಪ್ಪಿಸಬೇಕು. ಸಾರ್ವಜನಿಕರಿಗೆ ಯಾವುದೇ ತೊಂದರೆಗಳು ಕಂಡುಬಂದಲ್ಲಿ ತುರ್ತು ಸಹಾಯಕ್ಕಾಗಿ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದ ದೂ.08392-277100 ಮತ್ತು ಮೊ.8277888866 ಗೆ ಕರೆಮಾಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ರಾಯಕೋಡ ಶಾಲೆಯಲ್ಲಿ 10ನೇತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಮಾ. 18. ವಿಧಾನಸಭಾ ಕ್ಷೇತ್ರದ ರಾಯ-ಕೋಡ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ 10ನೇ ತರಗತಿಯ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮ ನೆರವೇರಿತು. ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು ಪ್ರಕಾಶ್ ರಂಗನೂರ್ ಶಾಲಾ ಮುಖ್ಯ ಗುರುಗಳಾದ ಆನಂದಪ್ಪ ಊರಿನ ನಿವೃತ್ತ ಶಿಕ್ಷಕರಾದ ವೀರಾರೆಡ್ಡಿ

ಎಸ್ ಡಿ ಎಮ್ ಸಿ ಅಧ್ಯಕ್ಷ ಸಿದ್ದಪ್ಪ ಪೂಜಾರಿ ಸದಸ್ಯರಾದ ಸಂತೋಷ,ತೋಟಪ್ಪ,ಗ್ರಾಮ ಪಂಚಾಯತ್ ಸದಸ್ಯರಾದ ಮೋಹನಬಾಬು ಶಿಕ್ಷಣ ಪ್ರೇಮಿಗಳಾದ ಶ್ರೀಬ್ರಹ್ಮಾನಂದರೆಡ್ಡಿ ಗೋಟೂರ ಅರ್ಜುನ್ ಕ್ರಾಂತಿ, ಶಾಲಾ ಶಿಕ್ಷಕರಾದ ಸುರೇಶ,ಮಲ್ಲಿಕಾರ್ಜುನ, ಅತಿಥಿ ಶಿಕ್ಷಕರ ಜಗನ್ನಾಥ, ಚಂದ್ರಕಾಂತ,ರಾಜೇಶ್ವರಿ ಸೀಮಾ ಶಾಲಾ ಮಕ್ಕಳು ಭಾಗವಹಿಸಿದ್ದರು. ಈ ಕಾರ್ಯಕ್ರಮದ ನಿರೂಪಣೆಯನ್ನು ಸುರೇಶ ಸರ ನಡೆಸಿ ಕೊಟ್ಟರು. ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣವನ್ನು ಮಲ್ಲಿಕಾರ್ಜುನ ಸರ್ ನಡೆಸಿಕೊಟ್ಟರು.

ಈ ಕಾರ್ಯಕ್ರಮ ವನ್ನು ಉದ್ದೇಶಿಸಿ ಅಧ್ಯಕ್ಷ ಪ್ರಕಾಶ್ ರಂಗನೂರ ಮಾತನಾಡುತ್ತ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಎದೆಗುಂದದೆ ಧೈರ್ಯದಿಂದ ಎದುರಿಸಿ ಯಂದು ಹೇಳಿದರು. ಮತ್ತು ಶಾಲಾ ಮುಖ್ಯ ಗುರುಗಳು ಮಾತನಾಡುತ್ತ ಪರೀಕ್ಷೆಯನ್ನು ಉತ್ತಮವಾಗಿ ಎದುರಿಸಿ ಹೆಚ್ಚು ಅಂಕಗಳು ಪಡೆದು ಶಾಲೆಗೇ ತಂದೆ ತಾಯಿ ಗಳಿಗೆ ಕೀರ್ತಿ ತನ್ನಿ ಎಂದು ಹೇಳಿದರು. ಅದೇ ರೀತಿ ನಿವೃತ್ತ ಶಿಕ್ಷಕರ ವೀರರೆಡ್ಡಿ ಮಾತನಾಡುತ್ತಾ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಎದೆಗುಂದದೆ ನಿಧಾನವಾಗಿ ಯಾವುದೇ ತಪ್ಪು ತಡೆಗಳನ್ನು ಮಾಡದೆ ಪರೀಕ್ಷೆ ಬರೆದು ಯಶಸ್ವಿಯಾಗಿ ಎಂದು ತಿಳಿಸಿದರು. ಶ್ರೀ ಬ್ರಹ್ಮಾನಂದರೆಡ್ಡಿ ಮಾತನಾಡಿ ಮಕ್ಕಳು ಪರೀಕ್ಷೆ ಮುಗಿಯುವವರೆಗೂ ಮೊಬೈಲ್ ನಿಂದ ದೂರವಿದ್ದು ಪರೀಕ್ಷೆ ಮೇಲೆ ಹೆಚ್ಚು ಗಮನಹರಿಸಿ ಒಳ್ಳೆಯ ಫಲಿತಾಂಶ ಪಡೆಯಲು ತಿಳಿಸಿದರು. ಅಲ್ಲದೆ ಶಾಲಾ ಮಕ್ಕಳು ಮತ್ತು ಎಲ್ಲಾ ಅತಿಥಿಗಳು ಕಾರ್ಯಕ್ರಮ ಕುರಿತು ಮಾತನಾಡಿದರು. ಹೀಗೆ ಈ ಕಾರ್ಯಕ್ರಮ ವು ಅತ್ಯಂತ ವಿಜೃಂಭಣೆಯಿಂದ ಅಚ್ಚುಕಟ್ಟಾಗಿ ನಡೆಯಿತು.

# ಲೋಕಾಯುಕ್ತರಿಂದ ಅಹವಾಲು ಅರ್ಜಿ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 18 ಜಿಲ್ಲೆಯ ಯಾದಗಿರಿ ನಗರದ ತಹಸೀಲ್ದಾರ ಕಾರ್ಯಾಲಯ ಸಭಾಂಗಣದಲ್ಲಿ ಸರ್ಕಾರಿ ಕಛೇರಿಗಳಲ್ಲಿನ ಕುಂದು-ಕೊರತೆ ಮತ್ತು ಭ್ರಷ್ಟಾಚಾರದ ಬಗ್ಗೆ ಅಹವಾಲು ಸ್ವೀಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಬಿ.ಕೆ ಉಮೇಶ ಅವರು ತಿಳಿಸಿದ್ದಾರೆ.

ಯಾದಗಿರಿ ನಗರದ ತಹಸೀಲ್ದಾರ ಕಾರ್ಯಾಲಯದ ಸಭಾಂಗಣದಲ್ಲಿ ಅಂದು 2025ರ ಮಾರ್ಚ್ 21ರ ಶುಕ್ರವಾರ ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯ ವರೆಗೆ ಯಾದಗಿರಿ ಪೊಲೀಸ್ ಅಧೀಕ್ಷಕರು ಶ್ರೀ ಬಿ.ಕೆ ಉಮೇಶ ಮೊ.ನಂ.9364062529 ಅಹವಾಲು ಸ್ವೀಕಾರ ನಡೆಸಲಿದೆ. ಹಾಗೂ ಯಾದಗಿರಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ನಿರೀಕ್ಷಕರು ಶ್ರೀ ಸಿದ್ದರಾಮ ಬಳೂರ್ಗಿ ಮೊ.ನಂ.9364062715 ಅಹವಾಲು ಸ್ವೀಕಾರ ನಡೆಸಲಿದೆ.

ಯಾರಿಗಾದರೂ ಸರ್ಕಾರಿ ಅಧಿಕಾರಿಗಳಿಂದ ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಬವಾಗಿದ್ದರೆ ಅಥವಾ ಸಾರ್ವಜನಿಕರಿಗೆ ಸರ್ಕಾರಿ ಕಛೇರಿಗಳಲ್ಲಿ ಕೆಲಸಗಳನ್ನು ವಿಳಂಬ ಮಾಡುತ್ತಿದ್ದರೆ, ಕಾರಣ ಇಲ್ಲದೆ ಅರ್ಜಿ ತಿರಸ್ಕರಿಸುತ್ತಿದ್ದರೆ ಅಥವಾ ಕಛೇರಿಗೆ ಅಲೆದಾಡಿಸುತ್ತಿದ್ದರೆ, ಅಲ್ಲದೇ ಸರ್ಕಾರಿ ಕಛೇರಿಗಳಲ್ಲಿ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದರೆ ನಮ್ಮ ಗಮನಕ್ಕೆ ತರಬಹುದಾಗಿದೆ. ಕಾರಣ ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಹಳೆ ಬಸ್ ನಿಲ್ದಾಣದ ಹತ್ತಿರ, ಯಾದಗಿರಿ 585 202, ದೂ.ಸಂ.9364062529, 08473 253802, 253355ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಬಸವಕಲ್ಯಾಣ :- ತಾಲೂಕಿನ ರಾಜೋಳಾ ಗ್ರಾಮದ ಸರಕಾರಿ ಆದರ್ಶ ವಿದ್ಯಾಲಯದಲ್ಲಿ 10ನೇ ತರಗತಿ ಶಾಲೆಯ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭದ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಗುರುಗಳಾದ ಬಾಲಾಜಿ ಪಾಟೀಲ್ ಅವರು ಸಸಿಗೆ ನೀರು ಉಣೀಸುವ ಮೂಲಕ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು ಹಾಗೂ ಶಿಕ್ಷಕಿಂ-ಯರು ಸಿಬಂದ್ದಿ ವರ್ಗದವರು ಹಾಗೂ ಶಾಲೆಯ ಮಕ್ಕಳು ಹಾಗೂ 9ನೇ ವಿಧ್ಯಾರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಕಾವ್ಯ ಚಲನಶೀಲ : ಮಹೇಶ್ ಬಳ್ಳಾರಿ

ಮಲ್ಲಮ್ಮ ನುಡಿ ವಾರ್ತೆ




ಕೊಪ್ಪಳ : ಕಾವ್ಯ ಎಲ್ಲರಿಗೂ ದಕ್ಕುತ್ತದೆ ಎಂಬುದು ಜಡತ್ವ. ಕಾವ್ಯ ಎನ್ನುವುದು ಯಾವತ್ತಿಗೂ ದಕ್ಕುವುದಿಲ್ಲ, ಚಲನಶೀಲವಾಗಿರುತ್ತದೆ ಎಂದು ಕವಿ ಮಹೇಶ್ ಬಳ್ಳಾರಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಕನ್ನಡ ವಿಭಾಗ ಮತ್ತು ಆಂತರಿಕ ಗುಣಮಟ್ಟ ಭರವಸೆ ಕೋಶದ ಸಹಯೋಗದಲ್ಲಿ ನಡೆದ ವಿದ್ಯಾರ್ಥಿಗಳ ಆಶು ಕವಿತೆ ರಚನಾ ಸ್ಪರ್ಧೆಯ ತೀರ್ಪುಗಾರರಾಗಿ ಅವರು ಮಾತನಾಡಿದರು.

ಕಾವ್ಯದ ಜೊತೆಗೆ ನಾವು ಸಹ ಚಲನಶೀಲರಾಗುತ್ತೇವೆಯೋ, ಆಗ ಕಾವ್ಯದ ಕೆಲವು ಮಗ್ಗುಲುಗಳಾದರೂ ದಕ್ಕಬಹುದು. ಈ ನಿಟ್ಟಿನಲ್ಲಿ ವಿದ್ಯಾರ್ಥಿ ಕವಿಗಳಿಗೆ ನಿರಂತರ ಅಧ್ಯಯನ ಸಮಕಾಲೀನ ತಲ್ಲಣಗಳಿಗೆ ಸ್ಪಂದಿಸುವ ಮನೋಭಾವ ಇರಬೇಕಾಗುತ್ತದೆ ಎಂದರು.

ಈ ಪ್ರದೇಶ ಕನ್ನಡದ ತಿರುಳಿರುವ ನೆಲವಾಗಿದ್ದು, ಕವಿರಾಜಮಾರ್ಗ ಮತ್ತು ವಡ್ಡಾರಾಧನೆ ಎಂಬ ಸ್ವತಂತ್ರ ಕೃತಿಗಳನ್ನು ಕೊಟ್ಟ ಸಾಂಸ್ಕೃತಿಕ ಭೂಮಿಯಾಗಿದ್ದು, ಇಂಥ ಪವಿತ್ರತಾಣದಿಂದ ಸಾಹಿತ್ಯದ ಮೇರು ಪ್ರತಿಭೆಗಳು ಬೆಳೆದು ಬರಬೇಕು ಎಂದು ಅವರು ಕರೆ ನೀಡಿದರು.

ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಗಾಯತ್ರಿ ಭಾವಿಕಟ್ಟಿ ಕವಿತೆ ಬರವಣಿಗೆಯ ಹಂತಗಳು ಮತ್ತು ರೂಪುರೇಷೆ ಕುರಿತು ಮಾತನಾಡಿದರು. ಆಂತರಿಕ ಗುಣಮಟ್ಟ ಭರವಸೆ ಕೋಶದ ಸಂಯೋಜ-ಕರು ಮತ್ತು ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಟಿ.ವಿ.ವಾರುಣಿ ಮಾತನಾಡಿ, ಇಂಥ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಸೃಜನಶೀಲತೆ, ಕೌಶಲ್ಯ ಬೆಳವಣಿಗೆಗೆ ಸಹಕಾರಿ ಎಂದರು. ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯ್ಕ ಅಧ್ಯಕ್ಷತೆ ವಹಿಸಿದ್ದರು. ಸುಮಾರು 60ಕ್ಕೂ ಅಧಿಕ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಮೂವರು ವಿದ್ಯಾರ್ಥಿಗಳು ರಚಿಸಿದ ಅತ್ಯುತ್ತಮ ಆಶು ಕವಿತೆಗಳನ್ನು ಸ್ಪರ್ಧೆಯಲ್ಲಿ ಆಯ್ಕೆ ಮಾಡಲಾಯಿತು.

ಈ ವೇಳೆ ಕನ್ನಡ ವಿಭಾಗದ ಬೋಧಕ ಸಿಬ್ಬಂದಿ ಡಾ.ವಿಪ್ಲವಿ, ಡಾ.ಪ್ರಕಾಶಬಳ್ಳಾರಿ,ಡಾ.ಬೋರೀಶ್, ಸೋಮೇಶ್ ಉಪ್ಪಾರ್, ಶಿವಬಸಪ್ಪ ಮಸ್ಕಿ, ಬಸವರಾಜ ಕರುಗಲ್ ಇತರರಿದ್ದರು. ವಿದ್ಯಾರ್ಥಿನಿ ಮಂಜುಳಾ ಎಚ್.ಸಿ.ಪ್ರಾರ್ಥಿಸಿದರು. ಡಾ.ತುಕಾರಾಂ ನಾಯ್ಕ ಸ್ವಾಗತಿಸಿದರು.ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು. ಡಾ.ನಾಗರಾಜ ದೊರೆ ವಂದಿಸಿದರು.

# ಸ್ವಾಭಿಮಾನದ ಜೀವನ ಸಾಗಿಸಲು ವಾತ್ಸಲ್ಯ ಮನೆ ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಮಾ.18:ಸ್ವಾಭಿಮಾನದಿಂದ ಬದುಕು ನಡೆಸಲು ಒಂದು ಸೂರಿನ ಅಗತ್ಯತೆಯಿದೆ. ಈ ನಿಟ್ಟಿನಲ್ಲಿ ಮನೆ ಇಲ್ಲದ ಸಂಕಷ್ಟದಲ್ಲಿರುವವರನ್ನು ಆಯ್ಕೆ ಮಾಡಿ, ಅವರಿಗೆ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯಡಿ ವಾತ್ಸಲ್ಯ ಮನೆಗಳನ್ನು ನಿರ್ಮಿಸಿ ನೀಡಲಾಗುತ್ತಿದೆ ಎಂದು ತಾಲೂಕ ತಾಲೂಕ ಯೋಜನಾಧಿಕಾರಿ ಮಂಜುನಾಥ ಎಚ್ ತಿಳಿಸಿದರು.

ಸಮೀಪದ ಕೂಡಲೂರ ಗ್ರಾಮದಲ್ಲಿ ಮಾತೃಶ್ರೀ ಡಾ.ಹೇಮಾವತಿ ಹೆಗ್ಗಡೆ ಅವರ ಜ್ಞಾನವಿಕಾಸ ಕಾರ್ಯಕ್ರಮದಡಿ ನಿರ್ಮಿಸಿದ ವಾಸ್ತಲ್ಯ ಮನೆಯನ್ನು ಹಸ್ತಾಂತರಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು. ನಮ್ಮ ಯೋಜನೆ ವತಿಯಿಂದ ವಾತ್ಸಲ್ಯ ಮನೆ ನಿರ್ಮಾಣ, ಮಾಸಾಶನ, ಸರ್ಕಾರಿ ಶಾಲೆಗಳಿಗೆ ಪೀಠೋಪಕರಣಗಳ ವಿತರಣೆ ಸೇರಿದಂತೆ ಮಹಿಳೆಯರಿಗೆ ಆರ್ಥಿಕವಾಗಿ ಶಕ್ತಿ ತುಂಬಲು ಅನೇಕ ಯೋಜನೆಗಳ ಜಾರಿಗೆ ತರುವ ಮೂಲಕ ಸ್ತ್ರೀಯರು ಕೂಡ ಕುಟುಂಬದ ಆರ್ಥಿಕ ಶಕ್ತಿ ಎಂಬುವುದನ್ನು ನಿರೂಪಿಸಲಾಗಿದೆ ಎಂದರು.

ಈ ವೇಳೆ ಗ್ರಾಪಂ ಸದಸ್ಯ ಲಕ್ಷ್ಮಣ ನಾಯಕ್, ಮಲ್ಲೇಶ ನಾಯಕ್, ಗ್ರಾಪಂ ಮಾಜಿ ಸದಸ್ಯ ವೆಂಕಟರಾಮ್ಲು, ಅಂಬರೀಶ ನಾಯಕ್, ಮಾಳಿಂಗರಾಯ, ವಲಯ ಮೇಲ್ವಿಚಾರಕಿ ರಂಗಮ್ಮ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಲಕ್ಷ್ಮೀದೇವಿ ಸೇರಿದಂತೆ ಗ್ರಾಮಸ್ಥರು ಇದ್ದರು.

## ಮಾ.21 ರಂದು ತುರ್ತು ನೀರಾವರಿ ಸಲಹಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.18–ತುಂಗಾಭದ್ರಾ ಯೋಜನೆಯ ಎಡದಂಡೆ ಕಾಲುವೆ ಹಾಗೂ ಬಲದಂಡೆ ಕೆಳ ಮಟ್ಟದ ಕಾಲುವೆಯಡಿ ಹಿಂಗಾರು ಹಂಗಾಮಿಗೆ ಬೆಳೆದು ನಿಂತ ಬೆಳೆಗಳಿಗೆ ಕೊರತೆಯಾಗುವ ನೀರನ್ನು ಒದಗಿಸಲು ಮತ್ತು ಹಿಂಗಾರು ಹಂಗಾಮಿನಲ್ಲಿ ಲಭ್ಯವಾದ, ಬಳಕೆಯಾದ ಮತ್ತು ಉಳಿತಾಯವಾಗುವ ನೀರನ್ನು ನಿಂತ ಬೆಳೆಗಳಿಗೆ ಒದಗಿಸುವ ಕುರಿತು ಚರ್ಚಿಸಲು ಮಾ.21 ರಂದು ಸಂಜೆ 04 ಗಂಟೆಗೆ ಬೆಂಗಳೂರಿನ ವಿಧಾನಸೌಧದ 3 ನೇ ಮಹಡಿಯ ಕೊಠಡಿ ಸಂಖ್ಯೆ.334 ರ ಸಮ್ಮೇಳನ ಸಭಾಂಗಣದಲ್ಲಿ 123ನೇ ತುರ್ತು ನೀರಾವರಿ ಸಲಹಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ.

ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಇಲಾಖೆ ಸಚಿವರಾದ ಡಿ.ಕೆ.ಶಿವಕುಮಾರ್ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಮತ್ತು ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರೂ ಆದ ಶಿವರಾಜ ಎಸ್.ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ತುಂಗಾಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಕರ್ನಾಟಕ ಸಾಹಿತ್ಯ ಅಕಾಡೆಮಿ: ಅರ್ಜಿ ಆಹ್ವಾನ

ಬಳ್ಳಾರಿ,ಮಾ.18(ಕರ್ನಾಟಕ ವಾರ್ತೆ):

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ ಹಾವೇರಿ ಜಿಲ್ಲೆ ಇವರ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು ಎಂಬ ಹೆಸರಿನಲ್ಲಿ 3 ದಿನಗಳ ಕಮ್ಮಟವನ್ನು ಏಪ್ರಿಲ್ 21, 22 ಮತ್ತು 23 ರಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆಯಲ್ಲಿ ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯಿರುವ 20 ರಿಂದ 45 ವರ್ಷ ವಯಸ್ಸುಳ್ಳ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಏ.05 ಕೊನೆಯ ದಿನ.

ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ http://karnatakasahithyaacademy.org ಇಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ.ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಮಕೃಷ್ಣ ವಿದ್ಯಾಶಾಲೆ: ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.18–ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025–2026ನೇ ಸಾಲಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಹಾಗೂ ಶುಚಿತ್ವ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಗಂಡು ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ನೀಡಿ ಶ್ರೀ ರಾಮಕೃಷ್ಣ ವಿದ್ಯಾಶಾಲೆ ಮೈಸೂರು, ಇಲ್ಲಿಗೆ 9ನೇ ತರಗತಿಗೆ ಸೇರಿಸಲು ಜಿಲ್ಲೆಯಿಂದ 04 ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿ 6 ಮತ್ತು 7ನೇ ತರಗತಿಯ ಅಂಕಪಟ್ಟಿಯೊಂದಿಗೆ ಮಾ.25 ರೊಳಗಾಗಿ ಇದೇ ಕಚೇರಿ ಅರ್ಜಿ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಮಮತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.18–ನಗರದ ಬ್ರೂಸ್‌ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯ ದೊಡ್ಡಮಾರ್ಕೆಟ್ ಹತ್ತಿರ ನೀಲಕಂಠೇಶ್ವರ ದೇವಸ್ಥಾನದ ಮುಂದೆ ಸುಮಾರು 45–50 ವರ್ಷದ ಅನಾಮಧೇಯ ವ್ಯಕ್ತಿಯು ಅಸ್ವಸ್ಥರಾಗಿ, ಯಾವುದೋ ಖಾಯಿಲೆಯಿಂದ ಮಾ.18 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಬಗ್ಗೆ ಮಾಹಿತಿ ಇರುವುದಿಲ್ಲ. ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿಗಳು ಮನವಿ ಮಾಡಿದ್ದಾರೆ. ಚಹರೆ: ಅಂದಾಜು 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ತಲೆಯ ಮೇಲೆ ಕಪ್ಪು ಕೂದಲು, ಮುಖದಲ್ಲಿ ಕಪ್ಪು ಗಡ್ಡ, ಮುಖದ ಎಡಭಾಗದ ಕನ್ನೆ ಮೇಲೆ ಮಚ್ಚೆ ಹಾಗೂ ಕಲೆ ಇರುತ್ತದೆ. ಬಾದಮಿ ಬಣ್ಣದ ಶರ್ಟ್, ಬಿಳಿ ಬಣ್ಣದ ಲುಂಗಿ ಧರಿಸಿರುತ್ತಾನೆ.

ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ದೂ.08392–272022, ಪಿಎಸ್‌ಐ ಮೊ.9480803081, ಪಿಐ ಮೊ.9480803045 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, 258102 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ರಾಯಚೂರು ಮಾ.18 ರಾಯಚೂರಿನ ಸಮಾಜ ಕಲ್ಯಾಣ ಇಲಾಖೆಯಿಂದ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ಕಾಯ್ದೆ 1989 ತಿದ್ದುಪಡಿ ಅಧಿನಿಯಮ, 2015 ತಿದ್ದುಪಡಿ ಅಧಿನಿಯಮ ಮತ್ತು 2016 ನಿಯಮಗಳನ್ವಯ ಉಪ–ವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ಹೊಸ ನಾಮನಿರ್ದೇಶಿತ ಸದಸ್ಯರನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

# ಮಾ.20, 21 ರಂದು ಎರಡು ದಿನಗಳ ರಾಷ್ಟ್ರಮಟ್ಟದ ವಿಚಾರ ಸಂಕಿರಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.18–ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ 12 ನಿಕಾಯಗಳಲ್ಲಿ ಒಂದಾದ ಮಾನವಿಕ ಮತ್ತು ಭಾಷಾ ನಿಕಾಯದ ಕನ್ನಡ ವಿಭಾಗದಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯ ವಿಭಾಗೀಯ ಕಛೇರಿ ಕಲಬುರಗಿ ವತಿಯಿಂದ 2025ರ ಮಾರ್ಚ್ 20 ಮತ್ತು 21ರಂದು "ಹೈದರಾಬಾದ ಸಂಸ್ಥಾನದ ಸಾಂಸ್ಕೃತಿಕ ಪರಂಪರೆ" ಎಂಬ ವಿಷಯದ ಮೇಲೆ ಎರಡು ದಿನಗಳ ರಾಷ್ಟ್ರಮಟ್ಟದ ವಿಚಾರ ಸಂಕಿರಣವನ್ನು ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ನಿವೃತ್ತ ಸಮಕುಲಪತಿಗಳಾದ ಪ್ರೊ.ಎಸ್. ಚಂದ್ರಶೇಖರ ಅವರು ವಿಚಾರ ಸಂಕಿರಣವನ್ನು ಉದ್ಘಾಟಿಸಿ ಪ್ರಧಾನ ಭಾಷಣವನ್ನು ಮಾಡಲಿದ್ದಾರೆ.

ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಟ್ಟು ಸತ್ಯನಾರಾಯಣ ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಪತ್ರಾಗಾರ ಇಲಾಖೆಯ ನಿರ್ದೇಶಕರಾದ ಡಾ. ಗವಿಸಿದ್ದಯ್ಯ, ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಆರ್. ಆರ್.ಬಿರಾದಾರ, ಹಿರಿಯ ಸಾಹಿತಿಗಳಾದ ಅಪ್ಪಾರಾವ ಅಕ್ಕೋಣಿ ಹಾಗೂ ಡಾ.ವೀರಶೆಟ್ಟಿ ಮುಂತಾದವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಪ್ರೊ.ವಿಕ್ರಮ ವಿಸಾಜಿಯವರು ಪ್ರಾಸ್ತಾವಿಕನುಡಿಗಳನ್ನಾಡಲಿದ್ದಾರೆ. ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ.ಶಿವಗಂಗಾ ರುಮ್ಮಾ ಅವರು ವಿಚಾರ ಸಂಕಿರಣದ ಸಂಯೋಜಕರಾಗಿರುತ್ತಾರೆ.

ಎರಡು ದಿನಗಳ ಕಾಲ ನಡೆಯಲಿರುವ ವಿಚಾರ ಸಂಕಿರಣದಲ್ಲಿ ನಾಡಿನ ಹಲವು ಇತಿಹಾಸ ತಜ್ಞರು ಒಟ್ಟು ಎಂಟು ಉಪನ್ಯಾಸಗಳನ್ನು ಮಂಡಿಸಲಿದ್ದಾರೆ.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯವು ದೇಶದ ಪ್ರತಿಷ್ಠಿತ ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಯಾಗಿದ್ದು, 2009ರಿಂದ ಇದು ಕಲಬುರಗಿಯ ಕಡಗಂಚಿಯಲ್ಲಿ ಕಾರ್ಯನಿರ್ವಹಿಸುತ್ತದೆ. ಹಿಂದುಳಿದ ಪ್ರದೇಶವಾದ ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಗುಣಮಟ್ಟವನ್ನು ಪರಿಣಾಮಕಾರಿಯಾಗಿ ಸುಧಾರಿಸುವ ಗುರಿಯೊಂದಿಗೆ ಇದನ್ನು ಇಲ್ಲಿ ಸ್ಥಾಪಿಸಲಾಗಿದ್ದು, ಕರ್ನಾಟಕದಾದ್ಯಂತ ಇದು ತನ್ನ ಪ್ರಾದೇಶಿಕ ವ್ಯಾಪ್ತಿಯನ್ನು ಹೊಂದಿದೆ. ಬೋಧನೆ, ಕಲಿಕೆ, ತರಬೇತಿ, ಸಂಶೋಧನೆ ಮತ್ತು ಕೌಶಲ್ಯಾಭಿವೃದ್ಧಿಯನ್ನು ಹೆಚ್ಚಿಸುವುದು ಇದರ ಮೂಲ ಉದ್ದೇಶವಾಗಿದ್ದು, ಪ್ರಸ್ತುತ ವಿಶ್ವವಿದ್ಯಾಲಯವು ಕಲಬುರಗಿ–ಆಳಂದ ರಸ್ತೆಗೆ ಹೊಂದಿಕೊಂಡಂತೆ, ಕಡಗಂಚಿ ಗ್ರಾಮದ ಹತ್ತಿರ ವಿಶಾಲ 654 ಎಕರೆಯಲ್ಲಿ ಹರಡಿಕೊಂಡಿದೆ.




ಮೊದಲ ದಿನ ಭಾರತೀಯ ಇತಿಹಾಸ ಅನುಸಂಧಾನ ಪರಿಷತ್ತಿನ ಉಪನಿರ್ದೇಶಕರಾದ ಡಾ.ಎಸ್.ಕೆ.ಅರುಣಿಯವರು 'ಹೈದರಾಬಾದ ನಿಜಾಮರ ಆಳ್ವಿಕೆಯಲ್ಲಿ ಇತಿಹಾಸ ಮತ್ತು ಪುರಾತತ್ವ ಅಧ್ಯಯನಗಳು ಮತ್ತು ಕನ್ನಡ ನಾಡಿನ ಚರಿತ್ರೆ ರಚನೆಯ ಬೆಳವಣಿಗೆ', ಡಾ. ರಘುಶಂಖ ಭಾತಂಬ್ರಾ ಅವರು 'ಹೈದರಾಬಾದ ಸಂಸ್ಥಾನ ಮತ್ತು ಬ್ರಿಟಿಷರ ಸಂಬಂಧಗಳು, ಅಬ್ದುಲ್ ಅಜೀಜ್ ರಜಪೂತ್ ಅವರು 'ಹೈದರಾಬಾದ ನಿಜಾಮರ ಕಾಲದ ರತ್ನಾಭರಣಗಳು ಎಂಬ ವಿಷಯಗಳ ಮೇಲೆ ತಮ್ಮ ಸಂಶೋಧನಾ ಪ್ರಬಂಧಗಳನ್ನು ಮಂಡಿಸಲಿದ್ದಾರೆ.

ಎರಡನೆ ದಿನದ ಗೋಷ್ಠಿಗಳಲ್ಲಿ ಡಾ.ಬಸವರಾಜ ಕೋಡಗುಂಟಿಯವರು 'ಹೈದರಾಬಾದ ಸಂಸ್ಥಾನ: ಭಾಷಿಕ ಪರಿಸರ, ಡಾ. ವೀರಶೆಟ್ಟಿಯವರು 'ಮುಲ್ಕಿ ಚಳುವಳಿ: ಇತಿಹಾಸ ಮತ್ತು ಸ್ವರೂಪ, ಬೋಡೆ ರಿಯಾಜ್ ಅಹ್ಮದ್ ಅವರು 'ಹೈದರಾಬಾದ ಸಂಸ್ಥಾನ: ಶೈಕ್ಷಣಿಕ ಕೊಡುಗೆಗಳು, ಡಾ. ಮಲ್ಲಿಕಾರ್ಜುನ ಸಿ. ಬಾಗೋಡಿ ಅವರು 'ಹೈದರಾಬಾದ ಸಂಸ್ಥಾನ: ಚಿತ್ರಕಲೆ ಹಾಗೂ ಡಾ. ಅಬ್ದುಲ್ ಮಾಜಿದ್ ಅವರು 'ಮರೆಯಿಂದ ಬೆಳಕಿಗೆ: ಮಹಿಳಾ ಶಿಕ್ಷಣ ಎಂಬ ವಿಷಯಗಳ ಮೇಲೆ ತಮ್ಮ ಸಂಶೋಧನಾ ಪ್ರಬಂಧಗಳನ್ನು ಮಂಡಿಸಲಿದ್ದಾರೆ.

ಕಲ್ಯಾಣ ಕರ್ನಾಟಕ ಇತಿಹಾಸ ರಚನಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಡಾ. ಲಕ್ಷ್ಮಣ ದಸ್ತಿಯವರು ಕಾರ್ಯಕಗ್ರಮದ ಸಮಾರೋಪ ನುಡಿಗಳನ್ನಾಡಲಿದ್ದಾರೆ.

ಇದುವರೆಗೆ ಈ ಕಾಲಘಟ್ಟದ ಮೇಲೆ ಹೇಳಿಕೊಳ್ಳುವಂತ ಅಧ್ಯಯನಗಳು ಆಗಿಲ್ಲ ಎಂಬುದನ್ನು ಗಮನದಲ್ಲಿಟ್ಟುಕೊಂಡು "ಹೈದರಾಬಾದ ಸಂಸ್ಥಾನದ ಸಾಂಸ್ಕೃತಿಕ ಪರಂಪರೆ" ಎಂಬ ವಿಷಯದ ಮೇಲೆ ಎರಡು ದಿನಗಳ ರಾಷ್ಟ್ರಮಟ್ಟದ ವಿಚಾರ ಸಂಕಿರಣವನ್ನು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕನ್ನಡ ವಿಭಾಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಎರಡು ಸಂಸ್ಥೆಗಳು ತಮ್ಮ ಜಂಟಿ ಪ್ರಕಟಣೆಯಲ್ಲಿ ತಿಳಿಸಿವೆ.

ನಾಡಿನ ಸಂಶೋಧಕರಿಗೆ ಪ್ರಬಂಧ ಮಂಡನೆಗೆ ಅವಕಾಶವನ್ನು ಒದಗಿಸಲಾಗಿದ್ದು, ಆಯ್ಕೆಯಾದ ಪ್ರಬಂಧಗಳನ್ನು ಪುಸ್ತಕ ರೂಪದಲ್ಲಿ (ಐಎಸ್‌ಬಿಎನ್) ಪ್ರಕಟಿಸಲಾಗುವುದು ಎಂದು ತಿಳಿಸಿರುತ್ತಾರೆ.

*ವಿಷಯಗಳು:*

ಅಸಫಜಾಹಿ ಮನೆತನದ ರಾಜಕೀಯ ಚರಿತ್ರೆ, ಅಸಫಜಾಹಿ ಮನೆತನದ ಆಡಳಿತ ಮತ್ತು ಸುಧಾರಣೆಗಳು, ಹೈದರಾಬಾದ ಸಂಸ್ಥಾನದ ಭೌಗೋಳಿಕ ಪರಿಸರ, ಹೈದರಾಬಾದ ಸಂಸ್ಥಾನದ ಅಧಿಕಾರಿಗಳು ಮತ್ತು ಮಂತ್ರಿಗಳು, ಹೈದರಾಬಾದ ಸಂಸ್ಥಾನದ ಭಾಷಿಕ ಪರಿಸರ, ಹೈದರಾಬಾದ ಸಂಸ್ಥಾನದ ಧಾರ್ಮಿಕ ಪರಿಸರ, ಹೈದರಾಬಾದ ಸಂಸ್ಥಾನದ ಕೃಷಿ, ನೀರಾವರಿ, ಕೈಗಾರಿಕೆ, ಶಿಕ್ಷಣ ನೀತಿಗಳು.

ಹೈದರಾಬಾದ ಸಂಸ್ಥಾನಕ್ಕೆ ಪುರಾತತ್ವ ವರದಿಗಳು, ನೆಲೆಗಳು. ಅಸಫಜಾಹಿ ಮನೆತನಕ್ಕೆ ಸಂಬಂಧಿಸಿದ ದಾಖಲೆಗಳು. ಹೈದರಾಬಾದ ಸಂಸ್ಥಾನದ ತೆರಿಗೆ ಪದ್ಧತಿ, ವಿದೇಶಿ ವ್ಯಾಪಾರ, ಇತ್ಯಾದಿ. ಹೈದರಾಬಾದ ಸಂಸ್ಥಾನ ಮತ್ತು ಸಾಹಿತ್ಯಿಕ ಚಟುವಟಿಕೆಗಳು. ಹೈದರಾಬಾದ ಸಂಸ್ಥಾನ ಮತ್ತು ದೇಶಮುಖ/ದೇಶಗತಿ/ಜಹಗೀರು ಮನೆತನಗಳು. ಹೈದರಾಬಾದ ಸಂಸ್ಥಾನ ಮತ್ತು ಬ್ರಿಟಿಷರ ನಡುವಿನ ಸಂಬಂಧಗಳು. ಹೈದರಾಬಾದ ಸಂಸ್ಥಾನ ಮತ್ತು ಸ್ಥಳೀಯ ಸಂಸ್ಥಾನಗಳ ನಡುವಿನ ಸಂಬಂಧಗಳು. ಅಸಫಜಾಹಿಗಳ ಕಾಲದ ಸಾಮಾಜಿಕ ನೆಲೆಗಳು. ವಸಾಹತು ಕಾಲ(ಹೈದರಾಬಾದ ಸಂಸ್ಥಾನ)ದ ಸಂಗೀತ, ಚಿತ್ರಕಲೆ, ಇತ್ಯಾದಿ.

## ಸಮಾಜ ಕಾರ್ಯವು ವಿಶ್ವಮಾನ್ಯವಾದುದು: ಪ್ರೊ.ಎಂ.ಮುನಿರಾಜು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.18–ಮಾನವ ಕಲ್ಯಾಣಕ್ಕೆ ಸಹಕಾರಿಯಾಗಿರುವ ಸಮಾಜ ಕಾರ್ಯವು ವಿಶ್ವ ಮಾನ್ಯತೆಯನ್ನು ಪಡೆದಿದೆ. ಇಂದಿಗೂ ಸಾಮಾಜಿಕ ಕಾಳಜಿ ಇರುವ ವೃತ್ತಿಪರ ಸಮಾಜ ಕಾರ್ಯಕರ್ತರ ಸಾಮಾಜಿಕ ಸೇವೆಯು ಶ್ಲಾಘನೀಯ ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಂ. ಮುನಿರಾಜು ಅವರು ಹೇಳಿದರು.

ವಿಶ್ವವಿದ್ಯಾಲಯದ ಸಮಾಜ ಕಾರ್ಯ ವಿಭಾಗ ವತಿಯಿಂದ ವಿವಿಯ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ವಿಶ್ವ ಸಮಾಜ ಕಾರ್ಯ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಮಾಜಿಕ ನ್ಯಾಯ, ಮಾನವ ಹಕ್ಕುಗಳನ್ನು ಕಾಪಾಡುವಲ್ಲಿ, ಶೋಷಿತ ಮಹಿಳೆಯರು, ಮಕ್ಕಳು, ವೃದ್ಧರು, ಅನಾಥರು ಮತ್ತು ದೀನ ದುರ್ಬಲರನ್ನು ಆರೈಕೆ ಮಾಡುತ್ತಿರುವ ಸಾಮಾಜಿಕ ಕಾರ್ಯಕರ್ತರನ್ನು ಕೃತಜ್ಞತೆಯಿಂದ ನೆನೆಯುವ ದಿನವಾಗಿ ವಿಶ್ವ ಸಮಾಜ ಕಾರ್ಯ ದಿನವನ್ನು 1983ರಿಂದ ಸಾಮಾಜಿಕ ಕಾರ್ಯಕರ್ತರ ಅಂತಾರಾಷ್ಟ್ರೀಯ ಒಕ್ಕೂಟವು ಆಚರಿಸುತ್ತಾ ಬಂದಿದೆ. ಪ್ರಪಂಚದಾದ್ಯಂತ ಪ್ರತಿ ಮಾರ್ಚ್ ತಿಂಗಳ ಮೂರನೇ ಮಂಗಳವಾರ ವಿಶ್ವ ಸಮಾಜ ಕಾರ್ಯ ದಿನವನ್ನು ಆಚರಿಸಲಾಗುವುದು ಎಂದು ತಿಳಿಸಿದರು.

ಕುಲಸಚಿವ ಎಸ್.ಎನ್. ರುದ್ರೇಶ್ ಅವರು ಮಾತನಾಡಿ ಬುದ್ಧ, ಬಸವ ಅಂಬೇಡ್ಕರ್, ಲೋಹಿಯಾ, ಶಾಂತವೇರಿ ಗೋಪಾಲಗೌಡರ ತತ್ವಾದರ್ಶಗಳು ಇಂದಿನ ವಿದ್ಯಾರ್ಥಿ ಸಮಾಜ ಕಾರ್ಯಕರ್ತರಿಗೆ ಮಾದರಿಯಾಗಿವೆ ಎಂದರು.

ಕರ್ನಾಟಕ ಕಂಡ ಅಪರೂಪದ ಸಮಾಜ ಸೇವಕ, ನಾಡಿಗೆ ನಾಡೇ ನೆನೆಯುತ್ತಿರುವ ಡಾ. ಪುನೀತ್ ರಾಜ್ ನಮಗೆ ಆದರ್ಶರು ಮತ್ತು ಹೊಸಪೇಟೆಯಲ್ಲಿ ತನ್ನ ಹದಿನೇಳನೇ ವಯಸ್ಸಿಗೆ ತಮ್ಮ ದುಡಿಮೆಯ ಬಹುಪಾಲನ್ನು ಅನಾಥ ಮತ್ತು ವಿಕಲ ಚೇತನ ಮಕ್ಕಳಿಗೆ ಮೀಸಲಿರಿಸಿ ಸೇವೆ ಮಾಡುತ್ತಿರುವ ಕಾವ್ಯ ನಮಗೆ ಆದರ್ಶವೆಂದು ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್. ಎಂ.ಸಾಲಿ ಕಾರ್ಯಕ್ರಮದಲ್ಲಿ ಸ್ಮರಿಸಿದರು.

ವಿಭಾಗದ ಮುಖ್ಯಸ್ಥರಾದ ಪ್ರೊ.ಗೌರಿ ಮಾಣಿಕ ಮಾನಸ, ಆದಿಕವಿ ಮಹರ್ಷಿ ಶ್ರೀ ವಾಲ್ಮೀಕಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕಿ ಡಾ.ರಶ್ಮಿ ರಾಣಿ ಅಗ್ನಿಹೋತ್ರಿ, ಭವಿತಾ, ಡಾ.ಕುಮಾರ್ ಸೇರಿದಂತೆ ಸಮಾಜ ಕಾರ್ಯ ವಿಭಾಗದ ಬೋಧಕರು, ಸಂಶೋಧನಾರ್ಥಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಕ್ರಾಂತಿಕಾರಿ ಪಾದಯಾತ್ರೆಗೆ ಬೆಂಬಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ ನಗರದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಬಿ.ಆರ್.ಭಾಸ್ಕರ ಪ್ರಸಾದರವರ ಮುಂದಾಳುತ್ವದಲ್ಲಿ ನಡೆಯುತ್ತಿರುವ ದಲಿತ ಸಂಘರ್ಷ ಸಮಿತಿಯ ಜನಕ ಪ್ರೋ. ಬಿ. ಕೃಷ್ಣಪ್ಪರವರ ಸಮಾಧಿ ಸ್ಥಳ ಹರಿಹರದಿಂದ ಬೆಂಗಳೂರವರೆಗೆ ನಡೆಯುತ್ತಿರುವ ಕ್ರಾಂತಿಕಾರಿ ಪಾದಯಾತ್ರೆವು ದಿನಾಂಕ 21/03/2025ರಂದು ಫ್ರೀಡಂ ಪಾರ್ಕನಲ್ಲಿ ಕ್ರಾಂತಿ–ಕಾರಿ ಬೃಹತ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ಅದರಿಂದ ಸುಮಾರು ಮೂವತ್ತು ವರ್ಷಗಳ ಒಳ ಮೀಸಲಾತಿಯ ಸುಧಿರ್ಘ ಹೋರಾಟದಿಂದ ಸುಪ್ರೀಂ ಕೋರ್ಟ 01/08/2024ರಂದು ನೀಡಿದ ಆದೇಶದಂತೆ ರಾಜ್ಯ ಸರ್ಕಾರಗಳಿಗೆ ನೀಡಿದ ಆದೇಶದಂತೆ ರಾಜ್ಯದ ಕಾಂಗ್ರೆಸ ಸರ್ಕಾರ ಮೂರು ತಿಂಗಳುಗಳ ಕಾಲಾವಕಾಶವನ್ನು ಕೋರುತ್ತೆ. ಕಾಲಾವಕಾಶ ಮೀರಿದರು ಕೂಡ ಕಾಂಗ್ರೆಸ ಸರ್ಕಾರ ಒಳ ಮೀಸಲಾತಿ ಜಾರಿ ಮಾಡದೆ ಮಾದಿಗರಿಗೆ ಮೋಸ ಮಾಡುತ್ತಿದೆ.

ಮಾದಿಗ ಸಮಾಜದ ಕಾಂಗ್ರೆಸ ಸಚಿವರು ಹಾಗು ನಾಯಕರನ್ನು ಮುಂದಿಟ್ಟು ಪಾದಯಾತ್ರೆಯ ದಿಕ್ಕುತಪಿಸಲು ಪ್ರಯತ್ನಿಸುತ್ತಿದೆ. ಇದು ಖಂಡನಿಯ. ಕೆ. ಹೆಚ್. ಮುನಿಯಪ್ಪರವರು ದಿನಾಂಕ 21/03/2025 ಹೋರಾಟಕ್ಕೆ ಬರ ಬೇಡಿ ಅಂತ ಹೇಳಿಕೆ ನೀಡಿದ ನಡೆ ಮಾದಿಗ ಸಮಾಜವನ್ನು ಹತ್ತಿಕುವ ದುಷ್ಟ ಕಾರ್ಯವಾಗಿದೆ.

ಸರ್ಕಾರದ ಮೇಲೆ ಒತ್ತಡ ಹೇರಲು ಜಿಲ್ಲೆಯಿಂದ ಮಾದಿಗ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಬೆಂಗಳೂರಿನ ಕ್ರಾಂತಿಕಾರಿ ಸಮಾವೇಶಕ್ಕೆ ಭಾಗವಹಿಸಿಬೇಕೆಂದು ಮನವಿ ಮಾಡಿಕೊಳಲಾಯಿತ್ತು. ಈ ವೇಳೆ ದಲಿತ ಮಾದಿಗ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷರಾದ ಪರಮೇಶ್ವರ ಕಾಳಮಂದರ್ಗಿ,

ಪ್ರಭುರಾವ ತಾಳಮಡಗಿ, ರವಿ ನಿಜಾಂಪುರೆ, ಅಶೋಕ ಕಟ್ಟಿ, ಕಮಲಾಕರ ಹೆಗಡೆ, ಪಪ್ಪುರಾಜ ಚತುರೆ, ರಾಜು ಕಾಣೆ, ಗೊರಖ ನಿಂಬೂರ, ಸುನಿಲ ಮೇಟಿಕಾರ, ಮಹೇಶ ಕಟ್ಟಿಮನಿ, ಪ್ರವೀಣ ಹೊಂಬಾಳೆ, ಶ್ರೀಧರ ಮೇತ್ರೆ, ಅಂಬರೀಷ ಚೌಧರಿ, ಅಮರ ಬಾಜಿ, ಭೀಮಶಾ ಹೆಗಡೆ, ಆತ್ರಿರಾಜ ಧೂಮ್ಮನಸುರ, ಕರಣ, ವಿಕ್ಕಿ, ಮಹೇಶ ಹಾಗು ಸಮಾಜದ ಇತರೆ ಮುಖಂಡರು ಉಪಸ್ಥಿತರಿದ್ದರು.

## ಮುಧೋಳ (ಬಿ): ಗ್ರಾ.ಪಂ. ನೂತನ ಅಧ್ಯಕ್ಷರಾಗಿ ಧನರಾಜ ಒಡೆಯರ ಉಪಾಧ್ಯಕ್ಷರಾಗಿ ನಿಕೀತಾ ಸೋಲಾಪುರೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ತಾಲೂಕಿನ ಮುಧೋಳ (ಬಿ) ಗ್ರಾಮ ಪಂಚಾಯತ್ ನೂತನ ಅಧ್ಯಕ್ಷರಾಗಿ ಶ್ರೀ ಧನರಾಜ ಒಡೆಯರ ಹಾಗೂ ಉಪಾಧ್ಯಕ್ಷರಾಗಿ ಶ್ರೀಮತಿ ನಿಕೀತಾ ಉದಯ ಸೋಲಾಪುರೆ ಅವರನ್ನು ಅವಿರೋಧವಾಗಿ ಮಂಗಳವಾರ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಏಡಿ ಹನುಮಂತರಾಯ ಕೌಟಗೆ, ಪಿ.ಡಿ.ಓ ದತ್ತಾತ್ರಿ ಪೂಜಾರಿ, ಗ್ರಾಮ ಪಂಚಾಯತ ಸದಸ್ಯರಾದ ಗಜಾನಂದ ವಟಗೆ, ಧನರಾಜ ಗುಡ್ಡ, ಚಂದ್ರಕಾಂತ ನಿವೃತಿ, ತುಳಸಿರಾಮ, ಸುನಿಲಕುಮಾರ ಹಲಬರ್ಗಾ, ರಾಜಕುಮಾರ, ಶಾಲಿಯಾ, ಶಾಲುಕಾ ಪ್ರವೀಣ, ಮೀನಾಬಾಯಿ, ಜ್ಞಾನೋಬಾ, ಮಂಗಲಾ ಜ್ಞಾನೇಶ್ವರ, ಅರುಣಾ ರಾಜಕುಮಾರ ಸೇರಿದಂತೆ ಇನ್ನಿತರ ಇದ್ದರು.

## ಇಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.18–ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಮ್ ಅವರ 118ನೇ ಜನ್ಮದಿನಾಚರಣೆ–ಯು ಏಪ್ರೀಲ್ 05 ಹಾಗೂ ಭಾರತರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆಯು ಏಪ್ರೀಲ್ 14ರಂದು ನಡೆಯಲಿದೆ.

ಈ ದಿನಾಚರಣೆಗಳ ಅಂಗವಾಗಿ ಇಂದು ಮಾ.19ರ ಬುಧವಾರ ಬೆಳಿಗ್ಗೆ 11:30 ಗಂಟೆಗೆ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಂಘ –ಸಂಸ್ಥೆಯ ಮುಖಂಡರು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಬಹುದಾಗಿದೆ.

ಅಂದು ನಡೆಯುವ ಪೂರ್ವಭಾವಿ ಸಭೆಗ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಸಂಘ ಸಂಸ್ಥೆಯ ಮುಖಂಡರುಗಳು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಣದ ಬದಲಿಗೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿ ವಿತರಣೆ; ಜಿಲ್ಲಾಧಿಕಾರಿ ನಿತೀಶ್ ಕೆ.

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.18– ಮಾರ್ಚ್ 2025ರ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 35ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಪಿ.ಹೆಚ್.ಹೆಚ್(ಬಿಪಿಎಲ್)ಪಡಿತರ ಚೀಟಿಯಲ್ಲಿನಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿಯ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿರುವ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್. ಹೆಚ್(ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದಬದಲಿಗೆಫೆಬ್ರವರಿ 2025ರ ಮಾಹೆಯಿಂದಜಾರಿಗೆಬರುವಂತೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿವಿತರಣೆಮಾಡಲಾಗುವುದು ಎಂದು ರಾಯಚೂರು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.



ಸರ್ಕಾರದಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿಸದಸ್ಯಎಎವೈಪಡಿತರಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ(ಎಎವೈ)ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತುಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು. ಫೆಬ್ರವರಿ 2025ರ ಪಡಿತರ ವಿತರಣಾ ಪ್ರಕ್ರಿಯೆ ಮುಕ್ತಾಯವಾಗಿರುವುದರಿಂದ ಮಾರ್ಚ್ 2025ತಿಂಗಳ ತಲಾ 05 ಕೆ.ಜಿ ಅಕ್ಕಿಯನ್ನು ಹೆಚ್ಚುವರಿಯಾಗಿ ಪ್ರತಿ ಸದಸ್ಯರಿಗೆ ವಿತರಿಸಲಾಗುತ್ತದೆ. ಮಾರ್ಚ್ 2025ರ ಮಾಹೆಯಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ 01ರಿಂದ 03ಸದಸ್ಯರಿರುವ ಅಂತ್ಯೋದಯ (ಎಎವೈ) ಪಡಿತರದಾರರಿಗೆ 35ಕೆ.ಜಿ ಅಕ್ಕಿ,04ಸದಸ್ಯರ ಕಾರ್ಡಿಗೆ 45ಕೆ.ಜಿ, 05 ಸದಸ್ಯರಿರುವ ಕಾರ್ಡಿಗೆ 65 ಕೆ.ಜಿ ಅಕ್ಕಿ, 06 ಸದಸ್ಯರಿರುವ ಕಾರ್ಡಿಗೆ 85 ಕೆ.ಜಿ ಅಕ್ಕಿ, 07 ಸದಸ್ಯರಿರುವ ಕಾರ್ಡಿಗೆ 105 ಕೆ.ಜಿ ಅಕ್ಕಿ, 08 ಸದಸ್ಯರಿರುವ ಕಾರ್ಡಿಗೆ 125 ಕೆ.ಜಿ ಅಕ್ಕಿ, 09 ಸದಸ್ಯರಿರುವ ಕಾರ್ಡಿಗೆ 145 ಕೆ.ಜಿ ಅಕ್ಕಿ, 10 ಸದಸ್ಯರಿರುವ ಕಾರ್ಡಿಗೆ 165 ಕೆ.ಜಿ ಅಕ್ಕಿ, 11 ಸದಸ್ಯರಿರುವ ಕಾರ್ಡಿಗೆ 185 ಕೆ.ಜಿ ಅಕ್ಕಿ, 12 ಸದಸ್ಯರಿರುವ ಕಾರ್ಡಿಗೆ 205 ಕೆ.ಜಿ ಅಕ್ಕಿ, 13 ಸದಸ್ಯರಿರುವ ಕಾರ್ಡಿಗೆ 225 ಕೆ.ಜಿ ಅಕ್ಕಿ, 14 ಸದಸ್ಯರಿರುವ ಕಾರ್ಡಿಗೆ 245 ಕೆ.ಜಿ ಅಕ್ಕಿ ಮತ್ತು 15 ಸದಸ್ಯರಿರುವ ಕಾರ್ಡಿಗೆ 265 ಕೆ.ಜಿ ಅಕ್ಕಿಯನ್ನುವಿತರಿಸಲಾಗುವುದು. ಅದೇ ರೀತಿಯಾಗಿ ಪಿ.ಹೆಚ್. ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿಯೊಬ್ಬ ಸದಸ್ಯರಿಗೆ 15 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಡಲಾಗುತ್ತಿದ್ದು, ಅರ್ಹ ಪಡಿತರ ಚೀಟಿದಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶಕಲ್ಪಿಸಲಾಗಿದೆ.ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆನಿಶುಲ್ಕದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನುಸಲ್ಲಿಸಬಹುದಾಗಿದೆ.

ಈಯೋಜನೆಯಡಿವಿತರಿಸಲಾದ ಆಹಾರ ಧಾನ್ಯಗಳನ್ನುಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚುನಾವಣೆ ಸಂಬಂಧಿತ ಮಾಹಿತಿ ವೆಬ್‌ಸೈಟನಲ್ಲಿ ಲಭ್ಯ: ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.18– ಮತದಾರರ ಪಟ್ಟಿ ಮತ್ತು ಇತರೆ ಚುನಾವಣಾಮಾಹಿತಿಗಳನ್ನುಭಾರತ ಚುನಾವಣಾ ಆಯೋಗ,ಮುಖ್ಯ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ವೆಬ್ ಸೈಟ್ ನಲ್ಲಿ ಕಾಲ ಕಾಲಕ್ಕೆ ಪ್ರಕಟಿಸಲಾಗುತ್ತಿದ್ದು,ಈ ಮೂಲಕ ಮಾಹಿತಿಪಡೆದುಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಸಭಾಂಗಣದಲ್ಲಿಮಂಗಳವಾರ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅದ್ಯಕ್ಷತೆ ವಹಿಸಿ ಮಾತನಾಡಿದ ಅವರು,ಚುನಾವಣೆ ಸಂಬಂಧಿಸಿದ ಪ್ರತಿಯೊಂದು ಮಾಹಿತಿಯನ್ನು http://www.eci.gov.in, http://ceo.karnataka/.gov.in, http://bagalkot.nic.in ವೆಬ್‌ಸೈಟನಲ್ಲಿ ಲಭ್ಯವಿದ್ದು, ವೀಕ್ಷಿಸಬಹುದಾಗಿದೆ.ಚುನಾವಣಾ ಆಯೋಗವು ಜನತಾ ಪ್ರಾತಿನಿಧ್ಯ ಕಾಯ್ದೆ 1950, 1951, ದಿ. ರೆಜಿಸ್ಟ್ರೇಷನ್ ಆಪ್ ಎಲೆಕ್ಟರ ರೂಲ್ಸ್ 1960, ದಿ ಕಂಡಕ್ಟ ಆಪ್ ಎಲೆಕ್ಷನ್ ರೂಲ್ಸ್ 1961 ಹಾಗೂ ಚುನಾವಣಾ ಆಯೋಗದನಿರ್ದೇಶನದಪ್ರಕಾರ ಚುನಾವಣಾ ಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ ಎಂದರು.

ಇದೇ ಎಪ್ರೀಲ್ 1, ಜುಲೈ 1, ಆಗಸ್ಟ 1 ಹಾಗೂ ಅಕ್ಟೋಬರ 1 ಅರ್ಹತಾ ದಿನಾಂಕವನ್ನು ಆಧರಿಸಿ 18 ವರ್ಷ ತುಂಬುವ ಯುವಮತದಾರರು ಮತದಾರರ ಪಟ್ಟಿಗೆ ತಮ್ಮ ಹೆಸರು ಸೇರಿಸಲು ಮುಂಗಡ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಇದರಿಂದ 18 ವರ್ಷ ಪೂರೈಸಿದ ಯುವಕರು ನೋಂದಣಿಗಾಗಿ ಮುಂದಿನ ವರ್ಷದ ವಿಶೇಷ ಪರಿಷ್ಕರಣೆವರೆಗೆ ಕಾಯುವುದನ್ನು ತಪ್ಪಿಸಲಾಗಿದೆ. ಮಧ್ಯಂತರ ಅವಧಿಯಲ್ಲಿ ನಡೆಯುವ ಚುನಾವಣೆಗಳಲ್ಲಿ ಮತ ಚಲಾವಣೆಗೆ ಅವಕಾಶ ದೊರೆಯಲಿದ್ದು, ಯುವ ಮತದಾರರ ಹೆಸರನ್ನು ನೊಂದಣಿ ಮಾಡಿಕೊಳ್ಳಬಹುದಾಗಿದೆ ಎಂದರು. ಮಾನ್ಯತೆ ಪಡೆದ ರಾಜಕೀಯ ಪಕ್ಷಗಳು, ಬೂತ್ ಲೆವೆಲ್ ಏಜೆಂಟರಗಳನ್ನು ನೇಮಿಸಲು ಅಗತ್ಯಕ್ರಮಕೈಗೊಳ್ಳಬೇಕು. ಈ ಬೂತ್ ಲೆವೆಲ್ ಏಜೆಂಟರಗಳು ಸಂಬಂಧಪಟ್ಟ ಮತಗಟ್ಟೆಹಂತದ ಅಧಿಕಾರಿಗೆ ಪ್ರತಿ ದಿನ 10 ನಮೂನೆಗಳನ್ನು ನಿರಂತರ ಪರಿಷ್ಕರಣೆಯಲ್ಲಿ ಸಲ್ಲಿಸಲು ಅವಕಾಶವಿದೆ. ಬೂತ್ ಲೆವೆಲ್ ಏಜೆಂಟರುಗಳ ನಮೂನೆಗಳ ಅರ್ಜಿ ಸಹಿತ ಅರ್ಜಿಗಳನ್ನು ಸ್ವತಃ ಪರಿಶೀಲನೆ ಮಾಡಿರುವುದಾಗಿ ದೃಢೀಕರಣ ಸಲ್ಲಿಸತಕ್ಕದ್ದು. ಯುವ ಮತದಾರರನ್ನು ಹೆಚ್ಚಾಗಿ ನೋಂದಾಯಿಸಲು ರಾಜಕೀಯ ಪಕ್ಷದ ಮುಖಂಡರು ಮತಗಟ್ಟೆ ಮಟ್ಟದ ಅಧಿಕಾರಿಗಳೊಂದಿಗೆ ಸಹಕರಿಸಿ ಪ್ರಗತಿ ಸಾಧಿಸಲು ಜಿಲ್ಲಾಧಿಕಾರಿಗಳು ತಿಳಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅರ್ಹ ಮತದಾರರು ಮತದಾರರ ಪಟ್ಟಿಯಲ್ಲಿ ಹೆಸರುಗಳ ಸೇರ್ಪಡೆ, ತಿದ್ದುಪಡಿ, ತೆಗೆದು ಹಾಕಲು, ವರ್ಗಾವಣೆಗಾಗಿದಾಖಲೆಗಳೊಂದಿಗೆ ನಿಗಧಿತ ನಮೂನೆಗಳಲ್ಲಿ ಎಲ್ಲ ಮತಗಟ್ಟೆಗಳ ಬಿಎಲ್ಓಗಳಿಗೆ, ಮತದಾರ ನೋಂದಣಾಧಿಕಾರಿ ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಗಳಿಗೆ ಹಾಗೂ ವಿಎಸ್ಪಿ, ಓಟರ್ ಹೆಲ್ಪಲೈನ್ ಮೊಬೈಲ ಆಪ್ ಮುಖಾಂತರ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮತದಾರರ ಸಹಾಯವಾಣಿ 1950ಗೆ ಸಂಪರ್ಕಿಸಬಹುದಾಗಿದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಚುನಾವಣಾ ವಿಭಾಗದ ಶಿರಸ್ತೇದಾರ ಮಹೇಶ ಪಾಂಡವ, ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಾ ಶ್ರೀನಿವಾಸ ಬಳ್ಳಾರಿ, ಯಮನಪ್ಪ ಶಿರೂರ, ಮಲ್ಲಿಕಾರ್ಜುನ ಕಾಂಬಳೆ, ಆನಂದ ದೇವಾಡಿಗ, ಕೃಷ್ಣಾ ಪಾಟೀಲ ಹಾಗೂ ಇತರರು ಉಪಸ್ಥಿತರಿದ್ದರು.

# ಗ್ರಾಹಕರು ಖರೀದಿಸುವ ವಸ್ತುವಿಗೆ ರಶೀದಿ ಪಡೆಯಬೇಕು–ನ್ಯಾ.ಚಂದ್ರಶೇಖರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.18– ಗ್ರಾಹಕರು ತಾವು ಖರೀದಿಸುವ ಪ್ರತಿ ವಸ್ತುವಿಗೂ ರಶೀದಿ ಪಡೆದುಕೊಳ್ಳಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರು,ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ. ಚಂದ್ರಶೇಖರ ದಿಡ್ಡಿ ಸಲಹೆ ನೀಡಿದ್ದಾರೆ.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ,ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಶಾಸ್ತ್ರ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವಗ್ರಾಹಕರ ದಿನಾಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ನಿತ್ಯ ವ್ಯವಹಾರದಲ್ಲಿ ಮೋಸವಾದಾಗ ಗ್ರಾಹಕರ ವೇದಿಕೆಗೆ ಹೋಗುವ ಮುನ್ನ ಗ್ರಾಹಕರಲ್ಲಿ ತಾವು ಖರೀದಿಸಿದ ವಸ್ತುವಿನ ರಶೀದಿ ಇರಬೇಕು. ಹೀಗಿದ್ದಾಗ ಮಾತ್ರ ವೇದಿಕೆ ನಿಮ್ಮ ಸಹಾಯಕ್ಕೆ ಬರುತ್ತದೆ ಎಂದು ಹೇಳಿದ ದಿಡ್ಡಿ, ಯಾವುದೇ ಸಾಲ ಅಥವಾ ಇನ್ನಿತರ ವ್ಯವಹಾರ ಮಾಡುವಲ್ಲಿ ಸಹಿ ಹಾಕುವ ಮುನ್ನ ಎಚ್ಚರಿಕೆ ವಹಿಸಬೇಕು ಎಂದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ದಿನನಿತ್ಯದ ಬದುಕಿನಲ್ಲಿ ವ್ಯವರಿಸುವ ಪ್ರತಿಯೊಬ್ಬ ಗ್ರಾಹಕರು ಗ್ರಾಹಕ ಹಕ್ಕುಗಳನ್ನು ಅರಿಯುವುದು ಅಗತ್ಯ. ದೈನಂದಿನ ಪರಿದಿಯಲ್ಲಿ ಬಳಸುವ ವಸ್ತುಗಳಲ್ಲಿ ನಮಗೆ ಮತ್ತು ಪರಿಸರಕ್ಕೆ ಹಾನಿಕಾರಕಗಳು ಎಷ್ಟಿವೆ ಎಂದು ತಿಳಿದು, ಪ್ರಕೃತಿಗೆ ಪೂರಕವಾಗುವ ಜೀವನಶೈಲಿ ರೂಪಿಸಿಕೊಳ್ಳಬೇಕು. ಗ್ರಾಹಕರ ಹಕ್ಕುಗಳ ಕುರಿತು ವಿದ್ಯಾರ್ಥಿಗಳು ಸಹ ಸ್ವಯಂಪ್ರೇರಿತರಾಗಿ ಜಾಗೃತಿ ಕಾರ್ಯಗಳಲ್ಲಿ ತೊಡಗಬೇಕು ಎಂದರು.

ಉಪನ್ಯಾಸ ನೀಡಿದ ನ್ಯಾಯವಾದಿ ಹಾಗೂ ಕಾನೂನು ಮಹಾವಿದ್ಯಾಲಯ ಉಪನ್ಯಾಸಕ ಎಸ್.ಎನ್.ಕರ್ಜಗಿ 'ಮಾತನಾಡಿ, ಗ್ರಾಹಕರ ಹಕ್ಕುಗಳ ರಕ್ಷಣೆ ಇಂದು ನಿನ್ನೆಯದಲ್ಲ, ಮನುವಿನ ಕಾಲದಿಂದಲೂ ಬಂದಿದೆ. ಗ್ರಾಹಕರು ಕೇಳುವ ಹಕ್ಕು ಪಡೆದಿದ್ದು, ಈ ಹಕ್ಕನ್ನು ಸೂಕ್ತ ರೀತಿಯಲ್ಲಿ ಉಪಯೋಗಿಸಿಕೊಳ್ಳಬೇಕಿದೆ ಎಂದರು.

ಗ್ರಾಹಕರ ಹಕ್ಕುಗಳ ಕುರಿತು ಕರಪತ್ರ ಬಿಡುಗಡೆಗೊಳಿಸಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಗ್ರಾಹಕರಾಗಿ ನಮ್ಮ ಆಯ್ಕೆಯ ಕುರಿತು ಎಚ್ಚರವಿರಬೇಕು. ಗುಣಮಟ್ಟದ ಉತ್ಪನ್ನಗಳನ್ನು ಖರೀದಿಸಬೇಕು. ಯಾವುದೇ ತರಹದ ಮೋಸಕ್ಕೆ ಒಳಗಾಗದೇ ಎಚ್ಚರವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯೆ ಸಿ.ಹೆಚ್ ಸಮೀಉನ್ನಿಸಾ ಅಬ್ರಾರ್ ಮಾತನಾಡಿದರು. ಗ್ರಾಹಕರ ಹಕ್ಕುಗಳ ಕುರಿತು ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ್ ಪ್ರಶಸ್ತಿ ಪತ್ರಗಳನ್ನು ವಿತರಿಸಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಪ್ರಭುಲಿಂಗಸ್ವಾಮಿ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ ವಿವೇಕಾನಂದ, ಆಯೋಗದ ಸದಸ್ಯ ಡಿ.ವೈ.ಬಸಾಪುರ ಮತ್ತಿತರರು ಇದ್ದರು.

# ವೇತನ ಹೆಚ್ಚಳಕ್ಕೆ ಆಗ್ರಹಿಸಿ ಆಶಾ ಕಾರ್ಯಕರ್ತರ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.18– ಆಶಾ ಕಾರ್ಯಕರ್ತೆಯರಿಗೆ ಮಾಸಿಕ 10 ಸಾವಿರ ರೂ. ವೇತನ ನಿಗದಿಗೊಳಿಸಿ ಸರಕಾರ ಕೂಡಲೇ ಅಧಿಕೃತ ಆದೇಶ ಹೊರಡಿಸಬೇಕು ಎಂದು ಜಿಲ್ಲೆಯ ಆಶಾ ಕಾರ್ಯಕರ್ತರು ಒತ್ತಾಯಿಸಿದ್ದಾರೆ.

ಮಂಗಳವಾರ ಜಿಲ್ಲಾಡಳಿತ ಭವನದ ಮುಂದೆ ಬೃಹತ್ ಪ್ರತಿಭಟನೆನಡೆಸಿದಕಾರ್ಯಕರ್ತರು, ಜಿಲ್ಲಾಧಿಕಾರಿಗಳ ಮೂಲಕ ಮುಖಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಕಳೆದ ಜನೇವರಿ ತಿಂಗಳಲ್ಲಿ ಬೆಂಗಳೂರಿನಲ್ಲಿಪ್ರತಿಭಟನೆನಡೆಸಿದ ವೇಳೆ ಮಾಸಿಕ 10 ಸಾವಿರ ರೂ.ವೇತನ ನೀಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದರು. ಈಗ ಎರಡು ತಿಂಗಳು ಕಳೆದರೂ ಈ ಕುರಿತು ಯಾವುದೇ ಆದೇಶ ಹೊರಡಿಸಿಲ್ಲ ಎಂದ ಕಾರ್ಯಕರ್ತರು,ಮುಖ್ಯಮಂತ್ರಿಗಳು ನುಡಿದಂತೆ ನಡೆಯಬೇಕು ಎಂದು ಆಗ್ರಹಿಸಿದರು.

ರಾಜ್ಯದ 42 ಸಾವಿರ ಆಶಾ ಕಾರ್ಯಕರ್ತೆಯರಿಗೆ 10 ಸಾವಿರ ವೇತನ ಘೋಷಣೆ ಮಾಡಿ ತತಕ್ಷಣ ಅದೇಶ ಹೊರಡಿಸಬೇಕು. ಇನ್ನಿತರ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಘೋಷಣೆ ಕೂಗಿ ಒತ್ತಾಯಿಸಿದರು.

ಎಐಯುಟಿಯುಸಿ ಜಿಲ್ಲಾ ಸಂಚಾಲಕ ಮಲ್ಲಿಕಾರ್ಜುನ ಹೆಚ್. ಟಿ ಮಾತನಾಡಿ, ರಾಜ್ಯ ಮಟ್ಟದಲ್ಲಿ ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಆರೋಗ್ಯ ಸಚಿವರು ಸಹ ಮಾರ್ಚ ತಿಂಗಳಿಂದ 10 ಸಾವಿರ ವೇತನ ನೀಡಿ ಭರವಸೆ ಈಡೇರಿಸುವುದಾಗಿ ಹೇಳಿದ್ದು, ಇನ್ನುತನಕ ಆದೇಶ ಜಾರಿ ಮಾಡದಿರುವುದು ಆಶಾ ಕಾರ್ಯಕರ್ತರಿಗೆ ಅನ್ಯಾಯ ಮಾಡಿದಂತಾಗಿದೆ. ಮುಖ್ಯಮಂತ್ರಿಗಳು ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಗೌರವ ಅಧ್ಯಕ್ಷ ಉದ್ದೇಶ, ಅಂಜನಾ ಕುಂಬಾರ, ಸೈನಾಜ ಜಂಗಿ, ಜಿಲ್ಲಾ ಅಧ್ಯಕ್ಕೆ ಶೀಲಾ ಮೆಳ್ಳಿಗೇರಿ ಮಾತನಾಡಿದರು. ಜಿಲ್ಲಾ ಸಮಿತಿ ಸದಸ್ಯರಾದ ಸುರೇಖಾ ಖಾಳೆ, ಬಸಮ್ಮ ಬೂಪರದ, ವಾಸಂತಿ ಪೂಜಾರಿ, ಗೀತಾ ಈಳಗೇರ, ಭಾರತಿ ಚವ್ಹಾಣ ಸೇರಿದಂತೆ ನೂರಾರು ಸಂ–ಖ್ಯೆಯ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಮಾ.21ರಂದು ತುಂಗಭದ್ರಾ ನೀರಾವರಿ ಸಲಹಾ ಸಮಿತಿ ಸಭೆ

ರಾಯಚೂರು ಮಾ.18 – ತುಂಗಭದ್ರಾ ಯೋಜನೆಯ ಎಡದಂಡೆ ಕಾಲುವೆ ಹಾಗೂ ಬಲದಂಡೆ ಕೆಳ ಮಟ್ಟದ ಕಾಲುವೆಯಡಿ ಹಿಂಗಾರು ಹಂಗಾಮಿಗೆ ಬೆಳೆದು ನಿಂತ ಬೆಳೆಗಳಿಗೆ ಕೊರತೆಯಾಗುವ ನೀರನ್ನು ಒದಗಿಸಲು 123ನೇ ತುರ್ತು ನೀರಾವರಿ ಸಲಹಾ ಸಮಿತಿ ಸಭೆಯನ್ನು ಮಾ.21ರ ಅಪರಾಹ್ನ 4ಗಂಟೆಗೆ ಕೊಠಡಿ ಸಂಖ್ಯೆ: 334, ಸಮ್ಮೇಳನ ಸಭಾಂಗಣ, 3ನೇ ಮಹಡಿ, ವಿಧಾನಸೌಧ ಬೆಂಗಳೂರಿನಲ್ಲಿ ಜರುಗಲಿದೆ. ಕರ್ನಾಟಕ ಸರ್ಕಾರದ ಮಾನ್ಯ ಉಪಮುಖ್ಯಮಂತ್ರಿಗಳು, ಜಲಸಂಪನ್ಮೂಲ ಇಲಾಖೆ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವವರಾದ ಶ್ರೀ ಡಿ.ಕೆ. ಶಿವಕುಮಾರ್ ಅವರ ಘನ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ.

ನೀರಾವರಿ ಸಲಹಾ ಸಮಿತಿ ಅಧ್ಯಕ್ಷರು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಅವರ ಉಪಸ್ಥಿತಿ ವಹಿಸಲಿದ್ದು, ಸಚಿವರುಗಳು, ಲೋಕಸಭಾ ಸದಸ್ಯರುಗಳು, ವಿಧಾನಸಭಾ ಸದಸ್ಯರುಗಳು, ವಿಧಾನ ಪರಿಷತ್ ಸದಸ್ಯರುಗಳು, ರಾಜ್ಯಸಭಾ ಸದಸ್ಯರುಗಳು ಹಾಗೂ ನೀರಾವರಿ ಸಲಹಾ ಸಮಿತಿಯ ಸದಸ್ಯರುಗಳು ಈ ಸಭೆಗೆ ಆಗಮಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಮತ್ತು ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಡಿಗೆ ಕನಕದಾಸರ ಕೊಡುಗೆ ಅಪಾರ : ಯಮನೂರಪ್ಪ ಗುಳದಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಉಡುಪಿಯಲ್ಲಿ ಶ್ರೀಕೃಷ್ಣನ ದರ್ಶನ ಭಕ್ತರಿಗೆ ದೇವಾಲಯದ ಕನಕನ ಕಿಂಡಿಯ ಮೂಲಕವೇ ಆಗುತ್ತದೆ ಎಂದರೆ ಕನಕದಾಸರ ಭಕ್ತಿಯ ಅಗಾದತೆ ಎಷ್ಟು ಎಂಬುದು ತಿಳಿಯುತ್ತದೆ ಎಂದು ಯಮನೂರಪ್ಪ ಗುಳದಳ್ಳಿ ಹೇಳಿದರು.

ಕೊಪ್ಪಳ ತಾಲೂಕಿನ ಕೂಕನಪಳ್ಳಿ ಗ್ರಾಮದಲ್ಲಿ ನಡೆದ ಭಕ್ತ ಶ್ರೀ ಕನಕದಾಸರ ವೃತ್ತ ಅನಾವರಣ ಕಾರ್ಯಕ್ರಮದಲ್ಲಿ ಕುರುಬ ಸಮಾಜದ ಗ್ರಾಮ ಘಟಕ ಅಧ್ಯಕ್ಷರು ಹಾಗೂ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರಾದ ಯಮನೂರಪ್ಪ ಗುಳದಳ್ಳಿ ಮಾತನಾಡಿ,ಭಕ್ತ ಕನಕದಾಸರು ರಾಜನಾಗುವ ಅವಕಾಶವಿದ್ದರೂ ಸಮಾಜದ ಅಂಕುಡೊಂಕು ತಿದ್ದಲು ಕತ್ತಿ ತೆಗೆದು ಹಾಕಿ ಕೈಯಲ್ಲಿ ತಂಬೂರಿ ಹಿಡಿದು ಹೆಗಲಮೇಲೆ ಕಂಬಳಿ ಹಾಕಿಕೊಂಡು ತಮ್ಮ ಕೀರ್ತನೆಗಳ ಮೂಲಕ ಸಮಾಜದ ಒಳಿತಿಗೆ ಶ್ರಮಿಸಿದ ಮಹಾನ್ ಶ್ರೇಷ್ಠರು. ವರ್ಣ ಭೇದ, ವರ್ಗ ಬೇದ ನೀತಿಯ ವಿರುದ್ಧ ಹೋರಾಡಿದ ಕನಕದಾಸರು ಕನ್ನಡ ಸಾಹಿತ್ಯಕ್ಕೆ ತನ್ನ ಕೀರ್ತನೆಗಳ ಮೂಲಕ ಹೊಸರೂಪವನ್ನು ತಂದು ಕೊಟ್ಟವರಲ್ಲಿ ಮೊದಲಿಗರು. ದಾಸರಲ್ಲಿ ಶ್ರೇಷ್ಠ ಕನಕದಾಸರು ನಾಡಿಗೆ ನೀಡಿದ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.ನಂತರ ಮಾಜಿ ಪಂಚಾಯತ್ ಸದಸ್ಯರಾದ ಅಮರೇಶಹೊಸಮನಿ ಮಾತನಾಡಿ, ಭಕ್ತ ಕನಕದಾಸರರು ಕನ್ನಡ ನಾಡಿನ ಸಾಂಸ್ಕೃತಿ ಪರಂಪರೆಯಲ್ಲಿ ಅಚ್ಚಳಿಯದ ಛಾಪು ಮೂಡಿಸಿದರು. "ಕುಲಕುಲ ಕುಲವೆಂದು ಹೊಡೆದಾಡದಿರಿ ನಿಮ್ಮ ಕುಲದ ನೆಲೆಯೇನಾದರೂ ಬಲ್ಲಿರಾ?" ಎಂದು ವರ್ಗ ತಾರತಮ್ಯದ ವಿರುದ್ಧ ದನಿ ಎತ್ತಿದ ಶ್ರೇಷ್ಠ ಸಮಾಜ ಸುಧಾರಕರು ದಾಸ ಶ್ರೇಷ್ಠ ಕನಕದಾಸರು ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಕೂಕನಪಳ್ಳಿ ಗ್ರಾಮದ ಹಿರಿಯರಾದ ಗುಂಡಣ್ಣ ಕರಡಿ,ನಿಂಗನಗೌಡ್ರು ಮಾಲಿ ಪಾಟೀಲ್,ಅಮರೇಶ ಮಾದಿನಾಳ,ಫಕೀರಯ್ಯ ಹಿರೇಮಠ,ಅಮರಪ್ಪ ಒಂಟಿಗೇರ್,ಉಮೇಶ್ ಶ್ಯಾನಭೋಗರ,ಸಂಗಪ್ಪಕರಡಿ,ಶೇಖಪ್ಪ ಕರ್ಲಿ,ಯಮನೂರು ಚನ್ನದಾಸರ್, ಮಲ್ಲಿಕಾರ್ಜುನ ನಿಟ್ಟಾಲಿ,ನಾಗರಾಜ ಮ್ಯಾಗೇರಿ,ಶೇಖಪ್ಪ ಕರಡಿ, ಕೆಂಚಪ್ಪ ಹಿಟ್ನಾಳ,ಹುಲಗಪ್ಪ ದೊಡ್ಡಮನಿ, ಶಿಕ್ಷಕರಾದ ಅಂಬಣ್ಣ ಭೀಮನೂರು, ಶಿಕ್ಷಕರಾದ ನಿಂಗಜ್ಜ ಅಮರಪ್ಪ ಒಂಟಿಗೇರ್, ಗ್ರಾಮದ ಗ್ರಾಮ ಪಂಚಾಯತ್ ಸದಸ್ಯರಾದ ಸುಭಾಷ್ ಕರಡಿ, ಕೃಷ್ಣಪ್ಪ ಪೂಜಾರ್, ಅಮರೇಶ್ ಆರಾಳ, ಶಿವಪ್ಪ ನಿಂಗಾಪೂರ, ಅಮರೇಶ್ ಕುಂಬಾರ್,ಬಾಳಪ್ಪ ಮುಸಲಾಪೂರ, ಗ್ರಾಮದ ಹಿರಿಯರಾದ ವೀರಣ್ಣ ಶಾಹಪೂರ, ಚನ್ನವೀರಪ್ಪ ದೊಡ್ಡಮನಿ,ಹಾಗೂ ಹಾಲುಮತ ಮಹಾಸಭಾದ ಕೊಪ್ಪಳ ಜಿಲ್ಲಾಧ್ಯಕ್ಷರಾದ ಹನುಮಂತಪ್ಪ ಕೌದಿ, ತಾಲೂಕ ಅಧ್ಯಕ್ಷರು ತಾಲೂಕ ಪದಾಧಿಕಾರಿಗಳು ಹೋಬಳಿ ಘಟಕ ಅಧ್ಯಕ್ಷರು ಮತ್ತು ಕೂಕನಪಳ್ಳಿ ಗ್ರಾಮದ ಕುರುಬ ಸಮಾಜದ ಯುವ ಮುಖಂಡರಾದ ಕಲ್ಲಪ್ಪ ಮಾದಿನಾಳ, ಪಾಲಾಕ್ಷಪ್ಪ ಮಾದಿನಾಳ, ಅಮರೇಶ್

ಧನಕನದೊಡ್ಡಿ, ಅಮರೇಶ್ ಮಾದಿನಾಳ,ನಿಂಗಪ್ಪ ಎಮ್ಮಿಗುಡ್ಡ,ಹನುಮನಗೌಡ ಯಲಿಮೀಗೇರಿ,ಶಂಕ್ರಪ್ಪ ಒಂಟಿಗೇರ್, ಅಮರೇಶ್ (ಶೇಟ್)ದನಕನದೊಡ್ಡಿ,

ಯಮನೂರಪ್ಪ ಒಂಟಿಗೇರ್, ಸಂಗಪ್ಪ ಸಂಗಪೂರ,ಹಾಗೂ ಎಲ್ಲಾ ಸಮಾಜದವರು ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕಕ್ಕೆ ವಂದೇ ಭಾರತ್ ರೈಲು, ಸಂಸತ್‌ನಲ್ಲಿ ಬೇಡಿಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 18 : ಕರ್ನಾಟಕದಲ್ಲಿ 6 ಕ್ಕೂ ಅಧಿಕ ಮಾರ್ಗದಲ್ಲಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಸಂಚಾರವನ್ನು ನಡೆಸುತ್ತಿವೆ. ಭಾರತೀಯ ರೈಲ್ವೆಯ ಸೆಮಿ ಹೈಸ್ಪೀಡ್ ರೈಲುಗಳನ್ನು ಇನ್ನಷ್ಟು ಮಾರ್ಗದಲ್ಲಿ ಓಡಿಸಬೇಕು ಎಂಬ ಬೇಡಿಕೆ ಇದೆ. ಅದರಲ್ಲೂ ರಾಜಧಾನಿ ಬೆಂಗಳೂರು ಮತ್ತು ಕಲ್ಯಾಣ ಕರ್ನಾಟಕ ಸಂಪರ್ಕಿಸಲು ವಂದೇ ಭಾರತ್ ರೈಲು ಅಗತ್ಯವಿದೆ ಎಂದು ಜನಪ್ರತಿನಿಧಿಗಳು, ವಿವಿಧ ಸಂಘ-ಸಂಸ್ಥೆಗಳು ರೈಲ್ವೆ ಇಲಾಖೆಗೆ ಮನವಿ ಸಲ್ಲಿಸಿವೆ.

ಸದ್ಯ ಕರ್ನಾಟಕಕ್ಕೆ ಯಾವುದೇ ಹೊಸ ವಂದೇ ಭಾರತ್ ರೈಲು ಘೋಷಣೆಯಾಗಿಲ್ಲ.

ಬೀದರ್-ಬೆಂಗಳೂರು ನಡುವೆ ವಂದೇ ಭಾರತ್ ರೈಲು ಬೇಕು ಎಂಬುದು ಬೇಡಿಕೆಯಾಗಿದೆ. ಬೀದರ್-ಬೆಂಗಳೂರು ನಡುವಿನ ವಿಮಾನ ಸೇವೆಯೂ ಸ್ಥಗಿತವಾಗಿರುವ ಹಿನ್ನಲೆಯಲ್ಲಿ ಗಡಿಜಿಲ್ಲೆ ಮತ್ತು ರಾಜಧಾನಿ ನಡುವೆ ವಂದೇ ಭಾರತ್ ರೈಲು ಓಡಿಸಿ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್‌ಗೆ ಈಗಾಗಲೇ ಮನವಿ ಸಲ್ಲಿಕೆ ಮಾಡಲಾಗಿದೆ.

ಬೀದರ್ ಸಂಸದ ಸಾಗರ್ ಖಂಡ್ರೆ ಬೀದರ್-ಬೆಂಗಳೂರು ವಂದೇ ಭಾರತ್ ರೈಲು ಕುರಿತು ಲೋಕಸಭೆ ಕಲಾಪದಲ್ಲಿಯೂ ಧ್ವನಿ ಎತ್ತಿದ್ದಾರೆ. ಲೋಕಸಭೆ ಬಜೆಟ್ ಅಧಿವೇಶನದಲ್ಲಿ ಈ ಕುರಿತು ಅವರು ಮಾತನಾಡಿದ್ದಾರೆ. ಈ ಹಿಂದೆ ರೈಲ್ವೆ ಸಚಿವರನ್ನು ಭೇಟಿ ಮಾಡಿ ಈ ಕುರಿತು ಅವರು ಬೇಡಿಕೆ ಇಟ್ಟಿದ್ದರು.



ಲೋಕಸಭೆಯಲ್ಲಿ ಸಾಗರ್ ಖಂಡ್ರೆ ಮಾತು: ಲೋಕಸಭೆ ಬಜೆಟ್ ಅಧಿವೇಶನದಲ್ಲಿ ಮಾತನಾಡಿದ ಸಾಗರ್ ಖಂಡ್ರೆ, ತಮ್ಮ ಕ್ಷೇತ್ರದ ರೈಲ್ವೆ ಸಂಬಂಧಿತ ಪ್ರಮುಖ ವಿಷಯಗಳನ್ನು ಪ್ರಸ್ತಾಪಿಸಿದರು. ಆಗ ಬೀದರ್-ಬೆಂಗಳೂರು ವಂದೇ ಭಾರತ್ ರೈಲು ಕುರಿತು ಬೇಡಿಕೆ ಇಟ್ಟರು.

**ಸಂಸದರು ಪ್ರಸ್ತಾಪಿಸಿದ ವಿಷಯಗಳು:**

* ಎನ್‌ಸಿಆರ್‌ಬಿ ವರದಿ ಪ್ರಕಾರ ಕಳೆದ ದಶಕದಲ್ಲಿ 2.6 ಲಕ್ಷಕ್ಕೂ ಹೆಚ್ಚು ಜನರು ರೈಲ್ವೆ ಅಪಘಾತಗಳಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ. ಈ ಸಮಸ್ಯೆಗೆ ತ್ವರಿತ ಪರಿಹಾರವಾಗಿ ಕವಚ್ ತಂತ್ರಜ್ಞಾನವನ್ನು ಎಲ್ಲೆಡೆ ಶೀಘ್ರವಾಗಿ ಜಾರಿಗೆ ತರಬೇಕು.

*ಅಮೃತ್ ಭಾರತ್ ನಿಲ್ದಾಣ ಯೋಜನೆ ನಿಧಾನಗತಿಯಲ್ಲಿ ನಡೆಯುತ್ತಿದ್ದು, ಇದನ್ನು ಶೀಘ್ರಗತಿಯಲ್ಲಿ ಮುನ್ನಡೆಸಬೇಕು. ಭಾಲ್ಕಿ ಮತ್ತು ಕಮಲನಗರ ರೈಲ್ವೆ ನಿಲ್ದಾಣಗಳನ್ನು ಅಮೃತ್ ಭಾರತ್ ಯೋಜನೆಯಡಿ ಸೇರ್ಪಡೆಗೊಳಿಸಿ, ಅಭಿವೃದ್ಧಿಪಡಿಸಬೇಕು.

*ಬೀದರ್-ಬೆಂಗಳೂರು ರೈಲುಗಳಲ್ಲಿ ಜನಸಂದಣಿ ಹೆಚ್ಚಾಗುತ್ತಿದ್ದು, ಇನ್ನು ಹೆಚ್ಚುವರಿ 2 ಬೋಗಿಗಳನ್ನು ಸೇರಿಸಲು ಅವಕಾಶವಿದ್ದು ಬೋಗಿಗಳನ್ನು ಸೇರಿಸಭೇಕು. ಬೀದರ್-ಬೆಂಗಳೂರು ನಡುವೆ ವಂದೇ ಭಾರತ್ ರೈಲು ಸಂಚಾರವನ್ನು ಸಹ ಆರಂಭಿಸಬೇಕು.

*ಬೀದರ್ ಕ್ಷೇತ್ರದವರನ್ನು ದೆಹಲಿಗೆ ಸಂಪರ್ಕ ಕಲ್ಪಿಸಲು ದಕ್ಷಿಣ ಎಕ್ಸ್‌ಪ್ರೆಸ್ ರೈಲನ್ನು ಹೈದರಾಬಾದ್‌ನಿಂದ ಬೀದರ್‌ಗೆ ವಿಸ್ತರಿಸಬೇಕು. ತಾಂಡೂರು-ಜಹೀರಾಬಾದ್ ಹೊಸ ರೈಲು ಮಾರ್ಗವನ್ನು ಕ್ಷೇತ್ರದ ಚಿಂಚೋಳಿ ಮೂಲಕ ಸಂಚಾರ ನಡೆಸುವಂತೆ ಬದಲಾವಣೆ ಮಾಡಬೇಕು.

*ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾದ ಮಾಧ್ಯಮ ಕ್ಷೇತ್ರಕ್ಕೆ ನೀಡಲಾಗುತ್ತಿದ್ದ ಶೇ 50 ರಿಯಾಯಿತಿಯನ್ನು ಮರುಪ್ರಾರಂಭಿಸಿ. ರೈಲ್ವೆ ಸುರಕ್ಷತೆ, ಮೂಲಸೌಕರ್ಯ ಹಾಗೂ ಪ್ರಯಾಣಿಕರ ಅನುಕೂಲತೆಗಳ ಸುಧಾರಣೆಗೆ ಕೇಂದ್ರ ಸರ್ಕಾರವು ತ್ವರಿತ ಕ್ರಮ ಕೈಗೊಳ್ಳುವಂತೆ ಒತ್ತಾಯ.

ಸದ್ಯ ಕರ್ನಾಟಕಕ್ಕೆ ಯಾವುದೇ ಹೊಸ ವಂದೇ ಭಾರತ್ ರೈಲು ಘೋಷಣೆಯಾಗಿಲ್ಲ. ಕೆಎಸ್‌ಆರ್ ಬೆಂಗಳೂರು-ಧಾರವಾಡ ವಯಾ ಹುಬ್ಬಳ್ಳಿ ರೈಲನ್ನು ಬೆಳಗಾವಿ ತನಕ ವಿಸ್ತರಣೆ ಮಾಡಲು ಒಪ್ಪಿಗೆ ನೀಡಲಾಗಿದೆ. ಆದರೆ ಈ ರೈಲು ಸಂಚಾರ ಯಾವಾಗ ಆರಂಭ? ಎಂಬ ಮಾಹಿತಿ ಸಿಕ್ಕಿಲ್ಲ.

# ಮಹಿಳೆಯರ ಮೇಲಿನ ದೌರ್ಜನ್ಯ ತಡೆ

## ಮಾ.25 ರೊಳಗಾಗಿ ಆಂತರಿಕ ಸಮಿತಿ ರಚಿಸಿ:ಶೀಲವಂತ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಾ.18: ಹತ್ತು ಮತ್ತು ಹತ್ತಕ್ಕಿಂತ ಹೆಚ್ಚು ಜನರು ಕರ್ತವ್ಯ ನಿರ್ವಹಿಸುವ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆಯಲು ಬೀದರ ಜಿಲ್ಲೆಯ ಎಲ್ಲ ಸರಕಾರಿ ಹಾಗೂ ಖಾಸಗಿ ಕಚೇರಿಗಳು ಇದೇ ಮಾರ್ಚ.25 ರೊಳಗಾಗಿ ಆಂತರಿಕ ದೂರು ನಿರ್ವಹಣಾ ಸಮಿತಿ ರಚಿಸಿ ವರದಿಯ ಪ್ರತಿಯನ್ನು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇವರಿಗೆ ಸಲ್ಲಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆಗೆ ಆಂತರಿಕ ವಿಚಾರಣಾ ಸಮಿತಿಯನ್ನು ಪರಿಣಾಮಕಾರಿಯಾಗಿ



ಅನುಷ್ಠಾನಗೊಳಿಸುವ ನಿಟ್ಟನಲ್ಲಿ ಜರುಗಿದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಒಟ್ಟು 5221 ವಿವಿಧ ಇಲಾಖೆ/ಕ್ಷೇತ್ರಗಳ ಘಟಕಗಳಿವೆ. ಹತ್ತು ಮತ್ತು ಹತ್ತಕ್ಕಿಂತ ಹೆಚ್ಚು ಜನರು ಕೆಲಸ ಮಾಡುವ ಸ್ಥಳದಲ್ಲಿ ಕಡ್ಡಾಯವಾಗಿ ಸಮಿತಿ ರಚಿಸಿ ಇದೇ ಮಾರ್ಚ.25 ರೊಳಗಾಗಿ ವರದಿ ಸಲ್ಲಿಸಬೇಕು. ಇಲ್ಲವಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ತಿಳಿಸಿದರು. ಜಿಲ್ಲಾ ಮಟ್ಟದಲ್ಲಿ, ತಾಲ್ಲೂಕಾ ಮಟ್ಟದಲ್ಲಿ ಹಾಗೂ ಗ್ರಾಮಪಂಚಾಯತ ಮಟ್ಟದಲ್ಲಿಯೂ ಸಹ ಸಮಿತಿಗಳನ್ನು ರಚಿಸತಕ್ಕದ್ದು. ಈ ತನಕ ಜಿಲ್ಲಾ ಮಟ್ಟದಲ್ಲಿ 36 ಇಲಾಖೆಗಳು, ತಾಲ್ಲೂಕಾ ಮಟ್ಟದಲ್ಲಿ 57 ಹಾಗೂ ಗ್ರಾಮ ಪಂಚಾಯತ ಮಟ್ಟದಲ್ಲಿ 82 ಸಮಿತಿಗಳು ರಚನೆ ಆಗಿದ್ದು ಉಳಿದೆಲ್ಲ ಇಲಾಖೆಗಳು ತಕ್ಷಣವೇ ಸಮಿತಿ ರಚಿಸಿ ವರದಿ ಒಪ್ಪಿಸುವಂತೆ ಸೂಚಿಸಿದರು. ಮಾರ್ಚ.30 ರಂದು ಕೇಂದ್ರ ಸರಕಾರಕ್ಕೆ ವರದಿ ಕಳುಹಿಸುವ ಅಗತ್ಯವಿದೆಯೆಂದು ಶೀಲವಂತ ತಿಳಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಶ್ರೀಧರ ಎಸ್.ಎಂ. ಮಾತನಾಡಿ, ಶಿಕ್ಷಣ, ಆರೋಗ್ಯ, ಕೈಗಾರಿಕೆ ಕ್ಷೇತ್ರಗಳಲ್ಲಿ ಹೆಚ್ಚಿನ ಘಟಕಗಳಿದ್ದು, ಸಂಬಂಧಿಸಿದ ಅಧಿಕಾರಿಗಳು ಕಾರ್ಯೋನ್ಮುಖರಾಗುವಂತೆ ತಿಳಿಸಿದರು. 10 ಕ್ಕಿಂತ ಕಡಿಮೆ ಇರುವ ಘಟಕಗಳು ವರದಿ ಸಲ್ಲಿಸುವ ಅಗತ್ಯವಿಲ್ಲವೆಂದರು.

ಹಿರಿಯ ವಕೀಲರಾದ ಬಿ.ಎಸ್.ಪಾಟೀಲ ಅವರು ಲೈಂಗಿಕ ಕಿರುಕುಳ ಅಧಿನಿಯಮ 2013 ರ ಕುರಿತು ವಿವರಿಸಿದರು. ಈ ಅಧಿನಿಯಮ ಅನ್ವಯ 10 ಮತ್ತು 10 ಕ್ಕಿಂತ ಹೆಚ್ಚು ಜನರು ಕೆಲಸ ಮಾಡುವ ಖಾಸಗಿ, ಸರಕಾರಿ, ನಿಗಮ, ಮಂಡಳಿ ಸಾರ್ವಜನಿಕ ಉದ್ಯಮಗಳು, ಫ್ಯಾಕ್ಟರಿಗಳು ಎಲ್ಲ ಕಚೇರಿಗಳಲ್ಲಿ ಆಂತರಿಕ ದೂರು ಸಮಿತಿ ರಚಿಸತಕ್ಕದ್ದು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಸ್ಥಳೀಯ ದೂರು ಸಮಿತಿ ರಚಿಸಲಾಗಿರುತ್ತದೆ ಎಂದರು.

ಆಂತರಿಕ ದೂರು ಸಮಿತಿಯಲ್ಲಿ ಕೆಲಸದ ಸ್ಥಳದ ಹಿರಿಯ ಶ್ರೇಣಿಯ ಉದ್ಯೋಗಸ್ಥ ಮಹಿಳೆಯು ಅಧ್ಯಕ್ಷರಾಗಿರುತ್ತಾರೆ. ಸಮಾಜ ಕಲ್ಯಾಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಕಾನೂನು ಜ್ಞಾನ ಹೊಂದಿರುವ ಇಬ್ಬರು ಸದಸ್ಯರು ಮತ್ತು ಮಹಿಳೆಯರ ಉನ್ನತಿಗೆ ಕಾಯನಿರ್ವಹಿಸುವ ಸಂಘ-ಸಂಸ್ಥೆ ಸದಸ್ಯರಾಗಿರುತ್ತಾರೆಂದು ತಿಳಿಸಿದರು. ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕೆಂದು ಪಾಟೀಲ ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಧಾರ್ ನೊಂದಿಗೆ ಎಪಿಕ್ ಜೋಡಣೆಗೆ ಶೀಘ್ರ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.18: ಆಧಾರ್ ಕಾರ್ಡ್ ನೊಂದಿಗೆ ಎಪಿಕ್ (EPIC ) ಸಂಖ್ಯೆಯನ್ನು ಕೂಡಲೇ ಜೋಡಣೆ (Link) ಮಾಡಲು ಕ್ರಮವಹಿಸಲಾಗುವುದು ಎಂದು ಭಾರತ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ತಿಳಿಸಿದ್ದಾರೆ.

ಇಂದು ಈ ಸಂಬಂಧ ನವದೆಹಲಿಯ ನಿರ್ವಚನ ಸದನದಲ್ಲಿ ಚುನಾವಣಾ ಭಾರತೀಯ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಚುನಾವಣಾ ಆಯುಕ್ತರಾದ ಡಾ. ಸುಖಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರು ಕೇಂದ್ರ ಗೃಹ ಕಾರ್ಯದರ್ಶಿ,



ಕಾರ್ಯದರ್ಶಿ ಶಾಸಕಾಂಗ ಇಲಾಖೆ, ಕಾರ್ಯದರ್ಶಿ ಮೇಟಿ ಮತ್ತು ಯುಐಡಿಎಐ ಮುಖ್ಯ ಕಾರ್ಯ ನಿರ್ವಣಾಧಿಕಾರಿ ಮತ್ತು ಇಸಿಐನ ತಾಂತ್ರಿಕ ತಜ್ಞರೊಂದಿಗೆ ಇಂದು ಸಭೆ ನಡೆಸಿ ಚರ್ಚಿಸಿದರು. ಚುನಾವಣಾ ಆಯೋಗವು ಆರ್ಟಿಕಲ್ 326, ಆರ್‌ಪಿ ಆಕ್ಟ್, 1950 ಮತ್ತು ಸುಪ್ರೀಂ ಕೋರ್ಟ್ ತೀರ್ಪುಗಳ ಪ್ರಕಾರ ಕ್ರಮ ಕೈಗೊಳ್ಳುತ್ತದೆ. UIDAI ಮತ್ತು ECI ಯ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ.

ಭಾರತದ ಸಂವಿಧಾನದ 326 ನೇ ವಿಧಿಯ ಪ್ರಕಾರ, ಮತದಾನದ ಹಕ್ಕನ್ನು ಭಾರತದ ನಾಗರಿಕರಿಗೆ ಮಾತ್ರ ನೀಡುವುದು, ಆಧಾರ್ ಕಾರ್ಡ್ ವ್ಯಕ್ತಿಯ ಗುರುತನ್ನು ಮಾತ್ರ ಸ್ಥಾಪಿಸುತ್ತದೆ. ಆದ್ದರಿಂದ, ಇಕಖಅ ಅನ್ನು ಆಧಾರ್‌ನೊಂದಿಗೆ ಲಿಂಕ್ ಮಾಡುವುದನ್ನು ಸಂವಿಧಾನದ 326 ನೇ ವಿಧಿ, 1950 ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 23(4), 23(5) ಮತ್ತು 23(6) ರ ನಿಬಂಧನೆಗಳ ಪ್ರಕಾರ ಕ್ರಮವಹಿಸಲಾಗುವುದು.

ಅದರಂತೆ, ಯುಐಡಿಎಐ ಮತ್ತು ಇಸಿಐನ ತಾಂತ್ರಿಕ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.


**ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ**
(ಕರ್ನಾಟಕ ಸರಕಾರದ ಒಂದು ಉದ್ಯಮ)
**ಕಾರ್ಯಾಲಯ ಕಾರ್ಯನಿರ್ವಾಹಕ ಇಂಜಿನೀಯರರು,**
**ಕೃಭಾಜನಿ(ನಿ), ಜೆ.ಬಿ.ಸಿ.ವಿಭಾಗ ಸಂಖ್ಯೆ. 2 ಭೀಮರಾಯನಗುಡಿ**
ಇ-ಮೇಲ್: **eejbc2@gmail.com+**

ಸಂಖ್ಯೆ: ಕೃಭಾಜನಿನಿ/ಜೆಬಿಸಿ/ವಿ-2/ಟಿಎನ್‌ಡಿ/ಯೋಶಾ/2024-25/1173 ದಿನಾಂಕ:17.03.2025

**ಸಂಕ್ಷಿಪ್ತ ಅಲ್ಪಾವಧಿ ಟೆಂಡರ್ ಪ್ರಕಟಣೆ (ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ)**

ವ್ಯವಸ್ಥಾಪಕ ನಿರ್ದೇಶಕರು, ಕೃಭಾಜನಿನಿ, ಬೆಂಗಳೂರು, ಇವರ ಪರವಾಗಿ ಕಾರ್ಯನಿರ್ವಾಹಕ ಅಭಿಯಂತರರು, ಕೃಭಾಜನಿನಿ ಜೆ.ಬಿ.ಸಿ.ವಿಭಾಗ ಸಂಖ್ಯೆ. 2, ಭೀಮರಾಯನಗುಡಿ ರವರು ಇ-ಟೆಂಡರಿಂಗ್ ಮುಖಾಂತರ ಟೆಂಡರ್ ಅಹ್ವಾನಿಸಲಾಗಿದ್ದು, ಕಾಮಗಾರಿಗಳ ವಿವರಗಳು ಈ ಕೆಳಗಿನಂತಿರುತ್ತವೆ;

**ಕಾಮಗಾರಿಗಳ ಇಂಡೆಂಟ್ ಸಂಖ್ಯೆ:** Other Indent no : 1) 1473 call-2 2)1510-call-2 Reserved Indent no : 1)1531 call-2 **1) ಟೆಂಡರಗೆ ಇಟ್ಟ ಮೊತ್ತ:** ಗರಿಷ್ಟ ಮೊತ್ತ ರೂ. 18.30 ಲಕ್ಷಗಳು ಕನಿಷ್ಟ ಮೊತ್ತ ರೂ. 1.85 ಲಕ್ಷಗಳು **2) ಟೆಂಡರಗೆ ಇಟ್ಟ ಇ.ಎಂ.ಡಿ ಮೊತ್ತ:** ಗರಿಷ್ಟ ಮೊತ್ತ ರೂ 44,000/- ಕನಿಷ್ಟ ಮೊತ್ತ ರೂ. 2,750/- **3) ಇ-ಟೆಂಡರಿಂಗ ಲಭ್ಯವಾಗುವ ಅವಧಿ:** 18.03.2025 ಮುಂಜಾನೆ 11.30 ಗಂಟೆ ಯಿಂದ 25.03.2025 ಸಾಯಂಕಾಲ 05.30 ಗಂಟೆ ವರೆಗೆ. **4) ಇ-ಟೆಂಡರಿಂಗ ಕೊನೆಯ ದಿನಾಂಕ:** 25.03.2025 ಸಾಯಂಕಾಲ 05.30 ಗಂಟೆ ವರೆಗೆ. **5) ತಾಂತ್ರಿಕ ಟೆಂಡರ್ ಮತ್ತು ಆರ್ಥಿಕ ಟೆಂಡರ್ ತೆರೆಯುವ ದಿನಾಂಕ:** 28.03.2025 ಮುಂಜಾನೆ 11.30 ಗಂಟೆಗೆ, ಸದರಿ ವಿಭಾಗ ಕಛೇರಿಯಲ್ಲಿ **6) ಆರ್ಥಿಕ ಟೆಂಡರ್ ತೆರೆಯುವ ದಿನಾಂಕ:** 29.03.2025 / ತಾಂತ್ರಿಕ ಟೆಂಡರ್ ನಂತರ, ಸದರಿ ವಿಭಾಗ ಕಛೇರಿಯಲ್ಲಿ ( For only Ind.No :1510 –Call-2 7) ಸಂಪರ್ಕಿಸಬೇಕಾದ ಕಛೇರಿ ವಿಳಾಸ ಹೆಚ್ಚಿನ ಮಾಹಿತಿಗಾಗಿ ವೆಬಸೈಟ್ http://www.kppp.Karnataka.gov.in ನಲ್ಲಿ ನೋಡಬಹುದು ಹಾಗೂ ಈ ಕೆಳಗೆ ಸಹಿ ಮಾಡಿದವರ ಕಛೇರಿಯಲ್ಲಿ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

**ಸಹಿ/-ಕಾರ್ಯನಿರ್ವಾಹಕ ಅಭಿಯಂತರರು,**
**ಕೃಭಾಜನಿ(ನಿ), ಜೆ.ಬಿ.ಸಿ.ವಿಭಾಗ ಸಂಖ್ಯೆ. 2**
**ಭೀಮರಾಯನಗುಡಿ**
ವಾ.ಸಾ.ಸಂ.ಇ/ಯಾದಗಿರಿ/588/ಕೆ.ಎಸ್.ಎಂ.ಸಿ.ಎ/2024-25


# ಕೋನಾರ್ಕ್ ಉತ್ಸವ ಮಾದರಿಯಲ್ಲಿ ಚಾಲುಕ್ಯ ಉತ್ಸವ : ಸಚಿವ ತಂಗಡಗಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮಾ.18: ಒಡಿಶಾದ ಪ್ರಸಿದ್ಧ ಕೋನಾರ್ಕ್ ಉತ್ಸವ ಮಾದರಿಯಲ್ಲಿ ಚಾಲುಕ್ಯ ಉತ್ಸವ ಆಚರಿಸಲು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ಚಾಲುಕ್ಯ ಉತ್ಸವ ಆಚರಣೆ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ನೇತೃತ್ವದಲ್ಲಿ ವಿಕಾಸಸೌಧದಲ್ಲಿ ನಡೆದ ಬಾಗಲಕೋಟೆ ಜಿಲ್ಲೆಯ ಜನಪ್ರತಿನಿಧಿಗಳ ಸಭೆಯಲ್ಲಿ ಸಚಿವರು ಈ ವಿಷಯ ತಿಳಿಸಿದರು. 2015ರ ನಂತರ ಚಾಲುಕ್ಯ ಉತ್ಸವ ಆಚರಣೆ ನಡೆದಿಲ್ಲ. ಚಾಲುಕ್ಯ ಉತ್ಸವವನ್ನು ರಾಷ್ಟ್ರೀಯ ಕಲೆ ಮತ್ತು ಸಾಂಸ್ಕೃತಿಕ ಉತ್ಸವವನ್ನಾಗಿ ರೂಪಿಸಬೇಕು. ಇಡೀ ರಾಷ್ಟ್ರದ ಗಮನ ಸೆಳೆಯುವಂತೆ ಉತ್ಸವ ಆಚರಣೆಯಾಗಬೇಕು ಎಂದು ಸಚಿವ ತಂಗಡಗಿ ಹೇಳಿದರು. ಮೂರು ದಿನಗಳ ಕಾಲ ನಡೆಯಲಿರುವ ಉತ್ಸವಕ್ಕೆ ಬಾದಾಮಿಯಲ್ಲಿ ಮುಖ್ಯಮಂತ್ರಿಗಳು



ಚಾಲನೆ ನೀಡಲಿದ್ದು, ಎರಡನೇ ದಿನ ಪಟ್ಟದಕಲ್ಲು ಹಾಗೂ ಸಮಾರೋಪ ಸಮಾರಂಭ ಐಹೊಳೆಯಲ್ಲಿ ನಡೆಯಲಿದೆ. ವರ್ಷಾಂತ್ಯಕ್ಕೆ ಉತ್ಸವ ಆಚರಿಸಲು ನಿರ್ಧರಿಸಲಾಗಿದ್ದು, ಮುಂದಿನ ಸಭೆಯಲ್ಲಿ ದಿನಾಂಕ ನಿಗದಿಪಡಿಸಲು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ ಎಂದರು. ಉತ್ಸವದಲ್ಲಿ ಸಂಗೀತ, ನೃತ್ಯ ಹಾಗೂ ಜಾನಪದ ಕಲಾ ವೈಭವಗಳನ್ನು ಪ್ರತಿಬಿಂಬಿಸುವಂತಹ ಕಾರ್ಯಕ್ರಮಗಳು ಆಯೋಜನೆಯಾಗಲಿದೆ ಎಂದು ಸಚಿವ ತಂಗಡಗಿ ತಿಳಿಸಿದರು.

ಶಾಸಕ ವಿಜಯಾನಂದ ಕಾಶಪ್ಪನವರ ಮಾತನಾಡಿ, ಇಮ್ಮಡಿ ಪುಲಿಕೇಶಿ ಕರ್ನಾಟಕದ ಚರಿತ್ರೆಯಲ್ಲಿ ತನ್ನ ಶೌರ್ಯ, ಸಾಹಸ ಹಾಗೂ ಕಲಾವಂತಿಕೆ ಮೆರೆದಿದ್ದು, ಉತ್ಸವದಲ್ಲಿ ಇಮ್ಮಡಿ ಪುಲಿಕೇಶಿಯ ಚರಿತ್ರೆಯನ್ನು ಸಾರುವ ಕೆಲಸವಾಗಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಅಬಕಾರಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ, ಶಾಸಕ ಎಚ್.ವೈ.ಮೇಟಿ, ವಿಧಾನ ಪರಿಷತ್ ಸದಸ್ಯರಾದ ಹನುಮಂತ ನಿರಾಣಿ, ಪಿ.ಎಚ್.ಪೂಜಾರ, ಉಮಾಶ್ರೀ, ಇಲಾಖೆಯ ನಿರ್ದೇಶಕಿ ಗಾಯಿತ್ರಿ ಹಾಗೂ ಇನ್ನಿತರ ಅಧಿಕಾರಿಗಳು ಪಾಲ್ಗೊಂಡಿದ್ದರು.




**ಕೋಡ್ಲಿ ಹೊಬಳಿ:42.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ತಾಪಮಾನ**

ಬೆಂಗಳೂರು:ಮಾ.18: ಉತ್ತರ ಮತ್ತು ದಕ್ಷಿಣ ಒಳನಾಡಿನಲ್ಲಿ ಮಾರ್ಚ್ 20ರವರೆಗೆ ರಣಬಿಸಿಲಿರಲಿದೆ ಎಂಬ ಮುನ್ಸೂಚನೆ ನೀಡುವೆಯೂ ಕರ್ನಾಟಕದ ಹಲವು ಭಾಗಗಳಲ್ಲಿ ಇಂದು ಮಳೆಯಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಬೆಂಗಳೂರಿನ ಹವಾಮಾನ ಕೇಂದ್ರ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ದಕ್ಷಿಣ ಕನ್ನಡ, ಕೊಡಗು, ಚಿಕ್ಕಮಗಳೂರು ಮತ್ತು ಚಾಮರಾಜನಗರ ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗಿದೆ. ಏತನ್ಮಧ್ಯೆ, ಕಲಬುರಗಿಯ ಕೋಡ್ಲಿ ಹೋಬಳಿ ಮತ್ತು ರಾಯಚೂರು ಜಿಲ್ಲೆಗಳ ಕಲ್ಲೂರು ಹೋಬಳಿಯಲ್ಲಿ ಮಂಗಳವಾರ ಗರಿಷ್ಠ ತಾಪಮಾನ 42.8 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.


ಕರ್ನಾಟಕ ಸರ್ಕಾರ
**ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ**
**ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗ ಕಲಬುರಗಿ**

ಸಂಖ್ಯೆ: ಕಾನಿಅ/ಪಂರಾಇಂ/ವಿಕ/ತಾಶಾ-2,3,5/ಟೆಂಡರ/2024-25/4906 ದಿನಾಂಕ : 13/03/2025

**:: ಇ-ಪ್ರೊಕ್ಯೂರಮೆಂಟ್ ಅಲ್ಪಾವಧಿ ಟೆಂಡರ ಪ್ರಕಟಣೆ ::**

1) ಕಾಮಗಾರಿಗಳ ಇಂಡೆಂಟ್ ಸಂಖ್ಯೆ: 1. ಅಫಜಲಪೂರ ತಾಲೂಕಿನ 1 ಕಾಮಗಾರಿಯ ಇಂಡೆಂಟ್ ಸಂಖ್ಯೆ : (1)13617, 2. ಆಳಂದ ತಾಲೂಕಿನ 2 ಕಾಮಗಾರಿಗಳ ಇಂಡೆಂಟ್ ಸಂಖ್ಯೆ : (1)13510 (2)13511, 3. ಚಿಂಚೋಳಿ ತಾಲೂಕಿನ 6 ಕಾಮಗಾರಿಗಳ ಇಂಡೆಂಟ್ ಸಂಖ್ಯೆ : (1) 13616 (2) 13516 (3) 13517 (4) 13514 (5) 13515 (6) 13513, 4. ಚಿತ್ತಾಪೂರ ತಾಲೂಕಿನ 5 ಕಾಮಗಾರಿಗಳ ಇಂಡೆಂಟ್ ಸಂಖ್ಯೆ : (1) 13619 (2) 13614 (3) 13618 (4) 13521 (5) 13512, 5. ಸೇಡಂ ತಾಲೂಕಿನ 1 ಕಾಮಗಾರಿಯ ಇಂಡೆಂಟ್ ಸಂಖ್ಯೆ : (1) 12819, 6. ಕಾಳಗಿ ತಾಲೂಕಿನ 1 ಕಾಮಗಾರಿಯ ಇಂಡೆಂಟ್ ಸಂಖ್ಯೆ : (1) 13518 7. ಕಲಬುರಗಿ ತಾಲೂಕಿನ 3 ಕಾಮಗಾರಿಗಳ ಇಂಡೆಂಟ್ ಸಂಖ್ಯೆ : (1) 13602 (2) 13563 (3) 13474, 2) ಲೆಕ್ಕ ಶೀರ್ಷಿಕೆ : **5054 / ಪಿಎಂಶ್ರೀ / ಡಿಡಿಪಿಐ / ಕೆಜಿಬಿವಿ / 4515 / ಎಂಎಲ್ಎ ಲ್ಯಾಡ,** 3) ಟೆಂಡರಿಗಿಟ್ಟ ಅಂದಾಜು ಮೊತ್ತ: **ಕನಿಷ್ಠ ರೂ. 3,38,920.01, ಗರಿಷ್ಠ ರೂ. 36,84,222.64,** 4) ಗುತ್ತಿಗೆದಾರರ ಅರ್ಹತೆ: ಅಧೀಕೃತ ಮಾರಾಟಗಾರರು / ತಯಾರಕರು / ಸರಬರಾಜುದಾರರು, 5) ಟೆಂಡರ ಫಾರಂ ಪಡೆಯುವ ದಿನಾಂಕ: **14-03-2025 ರಿಂದ 27-03-2025 ಸಾಯಂಕಾಲ 4:00 ಗಂಟೆವರೆಗೆ,** 6) ಟೆಂಡರ ಅರ್ಜಿ ಬೆಲೆ : ಇ-ಪ್ರೊಕ್ಯೂರಮೆಂಟ್ ನಿಯಮಾನುಸಾರ, 7) ಇ.ಎಂ.ಡಿ. : ಕನಿಷ್ಠ ರೂ. 8,500.00 ಗರಿಷ್ಠ ರೂ. 74,000.00, 8) ಟೆಂಡರ ಸಲ್ಲಿಸುವ ದಿನಾಂಕ: **14-03-2025 ರಿಂದ 27-03-2025 ಸಾಯಂಕಾಲ 4:00 ಗಂಟೆವರೆಗೆ,** 9) ಬಿಡ್ ತೆರೆಯುವ ದಿನಾಂಕ: **28-03-2025 ಸಾಯಂಕಾಲ 4:00 ಗಂಟೆ ನಂತರ,** 10) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ: ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗ ಕರ್ನಾಟಕ ಗ್ರಾಮೀಣ ಬ್ಯಾಂಕ ಎದುರಿಗೆ ಕುಸನೂರ ರಸ್ತೆ ರಾಜಾಪೂರ ಕಲಬುರಗಿ 11) ಅಂತರಜಾಲ ತಾಣದ ವಿಳಾಸ: www.kppp.karnataka.gov.in

**ಸಹಿ/- ಕಾರ್ಯನಿರ್ವಾಹಕ ಅಭಿಯಂತರರು**
**ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗ ಕಲಬುರಗಿ**
ವಾ.ಸಾ.ಸಂ.ಇ/ಕಲಬುರಗಿ/1100/ಕೆ.ಎಸ್.ಎಂ.ಸಿ.&ಎ/2024-25


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.